ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 50 ಸಂಚಿಕೆ- 50 | PAGE-8 ಪುಟ-8 | ಶನಿವಾರ 29.03.2025 | RS.2/- ಬೆಲೆ 2/-

## ಅಂಬೇಡ್ಕರ್ ಜಯಂತಿ

### ಏ.14 ರಂದು ಸಾರ್ವತ್ರಿಕ ರಜೆ ಘೋಷಿಸಿದ ಕೇಂದ್ರ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮಾ.28: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಹುಟ್ಟಿದ ದಿನ ಏ.14 ರಂದು ಭಾರತದಾದ್ಯಂತ ಕೇಂದ್ರದ ಎಲ್ಲಾ ಸರ್ಕಾರಿ ಕಚೇರಿಗಳಿಗೆ ಸಾರ್ವತ್ರಿಕರಜೆಯನ್ನು ಘೋಷಿಸಲಾಗಿದೆ. ಅಂಬೇಡ್ಕರರ ಜಯಂತಿ ದಿನದಂದು ಇನ್ಮುಂದೆ ರಾಷ್ಟ್ರೀಯ ರಜೆ ಇರಲಿದೆ.

ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರು ಈ ಘೋಷಣೆ ಮಾಡಿದ್ದಾರೆ.'ಸಮಾಜದಲ್ಲಿ ಸಮಾನತೆಯ ಹೊಸ ಯುಗವನ್ನು ಸ್ಥಾಪಿಸಿದ ಸಂವಿಧಾನ ಶಿಲ್ಪಿ, ನಮ್ಮ ಬಾಬಾ ಸಾಹೇಬ್ ಪೂಜ್ಯ ಡಾ. ಭೀಮರಾವ್ ಅಂಬೇಡ್ಕರ್ ಜಿ ಅವರ ಜನ್ಮ ವಾರ್ಷಿಕೋತ್ಸವದಂದು ಈಗ ಸಾರ್ವಜನಿಕ ರಜೆ ಇರುತ್ತದೆ. ಬಾಬಾ ಸಾಹೇಬರ ಕಟ್ಟಾ ಅನುಯಾಯಿ, ಗೌರವಾನ್ವಿತ ಪ್ರಧಾನಿ ಜಿ ಅವರು ಈ ನಿರ್ಧಾರವನ್ನು ತೆಗೆದುಕೊಳ್ಳುವ ಮೂಲಕ ರಾಷ್ಟ್ರದ ಭಾವನೆಗಳನ್ನು ಗೌರವಿಸಿದ್ದಾರೆ' ಎಂದು ಎಕ್ಸ್‌ನಲ್ಲಿ ಪೋಸ್ಟ್ ಹಾಕಿದ್ದಾರೆ.

ಭಾರತದಾದ್ಯಂತ ಕೈಗಾರಿಕಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕೇಂದ್ರ ಸರ್ಕಾರಿ ಕಚೇರಿಗಳು ಏಪ್ರಿಲ್ 14 ರ ಸೋಮವಾರದಂದು ಮುಚ್ಚಲಿವೆ. ಈ ನಿರ್ಧಾರದ ಬಗ್ಗೆ ಸಂಬಂಧಪಟ್ಟ ಎಲ್ಲರಿಗೂ ತಿಳಿಸಲು ಭಾರತ ಸರ್ಕಾರದ ಎಲ್ಲಾ ಸಚಿವಾಲಯಗಳು ಮತ್ತು ಇಲಾಖೆಗಳಿಗೆ ಸೂಚಿಸಲಾಗಿದೆ.

## ನೇಣು ಬಿಗಿದ ಸ್ಥಿತಿಯಲ್ಲಿ ಯುವಕನ ಶವ ಪತ್ತೆ : ಕೊಲೆ ಶಂಕೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:ಮಾ.28: ನೇಣುಬಿಗಿದುಕೊಂಡ ಸ್ಥಿತಿಯಲ್ಲಿ ಯುವಕನ ಶವ ಪತ್ತೆಯಾದ ಘಟನೆ ತಾಲ್ಲೂಕಿನ ಇಸ್ಲಾಂಪೂರ ಗ್ರಾಮದಲ್ಲಿ ಶುಕ್ರವಾರ ಜರುಗಿದೆ.

ಹರಿಶರಡ್ಡಿ ಮಾಣಿಕರಡ್ಡಿ (ಪುಟ್ಟ) (32) ಈತನ ಶವ ಪತ್ತೆಯಾಗಿದೆ.

ಕೊಲೆ ಶಂಕೆ: ತನ್ನ ಮಗನನ್ನು ಕೊಲೆ ಮಾಡಿ ನೇಣಿಗೆ ಹಾಕಿದ್ದಾರೆ. ಈ ಬಗ್ಗೆ ಸಮಗ್ರವಾದ ತನಿಖೆ ನಡೆಸಬೇಕು ಎಂದು ಮೃತ ಯುವಕನ ತಂದೆ ಮಾಣಿಕರಡ್ಡಿ ರವರು ಪಿಎಸ್ ಐಗೆ ನೀಡಿರುವ ದೂರಿನಲ್ಲಿ ಮನವಿ ಮಾಡಿದ್ದಾರೆ.

ಸಾವಿನ ಸುತ್ತ ಅನುಮಾನದ ಹುತ್ತ: ಮೃತ ಯುವಕ ಬಿಜೆಪಿ ಪಕ್ಷದ ಕಾರ್ಯಕರ್ತನಾಗಿದ್ದು. ಕಳೆದ ನಾಲ್ಕು ದಿವಸಗಳಿಂದ ಹುಮನಾಬಾದ್ ನಗರದಲ್ಲಿ ಕೆಲವರ ಜೊತೆ ಜಗಳವಾಡಿದ್ದ. 10 ರಿಂದ 15 ಜನರ ಗುಂಪು ಇತನಿಗೆ ಹೆದರಿಸಿದ್ದಾರೆ ಎಂದು ಬಲ್ಲ ಮೂಲಗಳಿಂದ ತಿಳಿದು ಬಂದಿದೆ.

ಓರ್ವನ ಬಂಧನ: ಘಟನೆ ನಡೆ-ಯುತ್ತಿದ್ದಂತೆ ಯುವಕನ ಗೆಳೆಯರು ಅನುಮಾನಾಸ್ಪದ ಯುವಕನನ್ನು ಪೋಲಿಸ್ ರ ವಶಕ್ಕೆ ಒಪ್ಪಿಸಿದ್ದಾರೆ. ಈ ಸಂಬಂಧ ಗ್ರಾಮೀಣ ಪಿಎಸ್ ಐ ರವರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ್ದಾರೆ..

## ಏ. 2ರಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಜನ್ಮದಿನ



ಮಲ್ಲಮ್ಮ ನುಡಿ ವಾರ್ತೆ ಕನ್ನಡ ಖ್ಯಾತ ಚಿತ್ರನಟಿ ಸೋನಲ್ ಮೊಂಥರೋ ಭಾಗಿ

ಹುಮನಾಬಾದ್ :ಮಾ.28: ಹುಮನಾಬಾದ ವಿಧಾನಸಭೆ ಮತಕ್ಷೇತ್ರದ ಮಾಜಿ ಶಾಸಕ, ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಜನ್ಮದಿನ ಕಾರ್ಯಕ್ರಮ ಏ. 2ರಂದು ಸಂಜೆ 6 ಗಂ-ಟೆಗೆ ಪಟ್ಟಣದ ರಾಜರಾಜೇಶ್ವರಿ ದೇವಸ್ಥಾನದ ಆವರಣದಲ್ಲಿ ಆಯೋಜನೆ ಮಾಡಲಾಗಿದೆ ಎಂದು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಫ್ಸರ್‌ಮಿಯ ಹೇಳಿದರು.

ಪಟ್ಟಣದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ಶುಕ್ರವಾರ ಕರೆದ ಪತ್ರಿಕಾಗೋಷ್ಠಿ

(2ನೇ ಪುಟ ನೋಡಿ)

## ಕಾಂಗ್ರೆಸ್ ಪಕ್ಷ ಬಲಪಡಿಸಲು ಎಐಸಿಸಿ ಹೊಸ ಸೂತ್ರ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮಾ.28: ಕರ್ನಾಟಕ ಕಾಂಗ್ರೆಸ್ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ದೇಶದಲ್ಲಿ ಪಕ್ಷವನ್ನು ಬಲಪಡಿಸಲು ಪಕ್ಷವು ಹೊಸ ಸೂತ್ರವನ್ನು ತಂದಿದೆ ಎಂದು ಹೇಳಿದರು.

ದೆಹಲಿಯಲ್ಲಿ ನಡೆಯುತ್ತಿರುವ ಜಿಲ್ಲಾ ಅಧ್ಯಕ್ಷರುಗಳ ಸಭೆ ವೇಳೆ ಕೆಪಿಸಿಸಿ ಅಧ್ಯಕ್ಷರೂ ಆದ ಡಿ.ಕೆ.ಶಿವಕುಮಾರ್ ಅವರು ಮಾಧ್ಯಮಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದರು. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು ಸೇರಿ ಎಲ್ಲಾ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಸಭೆ ನಡೆಸಿದ್ದಾರೆ. ಪಕ್ಷವು ಸರ್ಕಾರಕ್ಕಿಂತ ದೊಡ್ಡದು, ಹೀಗಾಗಿ ಹೈಕಮಾಂಡ್ ನಾಯಕರು ಜಿಲ್ಲಾ ಅಧ್ಯಕ್ಷರಿಗೆ ವಿಶೇಷ ಕಾರ್ಯಕ್ರಮ ನೀಡಿದ್ದಾರೆ ಎಂದರು.

ಸದಸ್ಯತ್ವ ಪಡೆಯುವುದು,

(2ನೇ ಪುಟ ನೋಡಿ)

## ಮ್ಯಾನ್ಮಾರ್‌ನಲ್ಲಿ ಪ್ರಬಲ ಭೂಕಂಪ: 60 ಸಾವು, 250 ಗಾಯ



ಮಲ್ಲಮ್ಮ ನುಡಿ ವಾರ್ತೆ

ನೇಪಿಟಾವ್:ಮಾ.28: ಮ್ಯಾನ್ಮಾರ್‌ನಲ್ಲಿ ಸಂಭವಿಸಿದ ಪ್ರಬಲ ಭೂಕಂಪಕ್ಕೆ 60 ಮಂದಿ ಸಾವನ್ನಪ್ಪಿದ್ದು, 250 ಮಂದಿ ಗಾಯಗೊಂಡಿದ್ದಾರೆ. ಮ್ಯಾನ್ಮಾರ್‌ನಲ್ಲಿ ಸತತ ಎರಡು ಭೂಕಂಪಗಳು ಸಂಭವಿಸಿದ್ದು, ರಿಕ್ಟರ್ ಮಾಪಕದಲ್ಲಿ 7.7 ಮತ್ತು 6.4 ತೀವ್ರತೆ ದಾಖಲಾಗಿದೆ ಎಂದು ಯುನೈಟೆಡ್ ಸ್ಟೇಟ್ಸ್ ಭೂವೈಜ್ಞಾನಿಕ ಸಮೀಕ್ಷೆ(ಯುಎಸ್‌ಜಿಎಸ್) ಶುಕ್ರವಾರ ತಿಳಿಸಿದೆ. ಭೂಕಂಪದ ಕೇಂದ್ರಬಿಂದುವು ಮಧ್ಯ ಮ್ಯಾನ್ಮಾರ್‌ನಲ್ಲಿದ್ದು, ಮೋನಿವಾ ನಗರದಿಂದ ಸುಮಾರು 50 ಕಿಲೋಮೀಟರ್ ಪೂರ್ವಕ್ಕೆ ಇದೆ ಎಂದು ವರದಿಯಾಗಿದೆ.

ಥೈಲ್ಯಾಂಡ್‌ನಲ್ಲಿಯೂ ನಾಲ್ಕು ಸಾವುಗಳು ವರದಿಯಾಗಿವೆ. 81

(2ನೇ ಪುಟ ನೋಡಿ)

## ಭಿನ್ನ ನಾಯಕರ ಸಭೆ:ಯತ್ನಾಳ ಉಚ್ಚಾಟನೆ ವಾಪಸ್ ಪಡೆಯಲು ಹೈಕಮಾಂಡ್‌ಗೆ ಮನವಿಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.28: ಬಿಜೆಪಿ ರೆಬೆಲ್ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆ ಭಿನ್ನರಿಗೆ ಬರಸಿಡಿಲಂತೆ ಬಂದೆ-ರಗಿದೆ. ಈ ಬೆನ್ನಲ್ಲೇ ಭಿನ್ನರು ತಮ್ಮ ತಂಡದ ನಾಯಕ ಯತ್ನಾಳ್ ರಕ್ಷಣೆಗೆ ಮುಂದಾಗಿದ್ದಾರೆ. ಇಂದು ಭಿನ್ನಮತೀಯ ಮುಖಂಡರು ಬೆಂಗಳೂರಿನಲ್ಲಿ ಹೈವೋಲ್ಟೇಜ್ ಸಭೆ ನಡೆಸಿದರು. ಉಚ್ಚಾಟನೆ ವಾಪಸ್ ಪಡೆಯುವ ಸಂಬಂಧ ಹೈಕಮಾಂಡ್‌ಗೆ ಮನವಿ ಮಾಡಲು ತೀರ್ಮಾನಿಸಲಾಗಿದೆ. ಬಿಜೆಪಿ ಭಿನ್ನರ ಪಡೆಯಲ್ಲಿ ಈಗ ಕಾರ್ಮೋಡದ ವಾತಾವರಣ. ಯತ್ನಾಳ್ ಉಚ್ಚಾಟನೆ, ಬಿಪಿ ಹರೀಶ್‌ಗೆ ಶೋಕಾಸ್ ನೋಟಿಸ್ ನಂತರ ಮುಂದೇನು ಅನ್ನೋದೇ ಅವರ ಮುಂದಿರುವ ದೊಡ್ಡ ಪ್ರಶ್ನೆ. ಈ ನಿಟ್ಟಿನಲ್ಲಿ ಚರ್ಚಿಸಲು ಇಂದು ಯತ್ನಾಳ್ ತಂಡ ಸದಸ್ಯರು ಬೆಂಗಳೂರಿನಲ್ಲಿ ಹೈವೋಲ್ಟೇಜ್ ಸಭೆ ನಡೆಸಿದರು. ತಮ್ಮ ಮುಂದಿನ ಹೋರಾಟ ಹಾಗೂ ಯತ್ನಾಳ್ ಉಚ್ಚಾಟನೆ ನಿರ್ಧಾರ ಮರುಪರಿಶೀಲಿಸಲು ಹೈಕಮಾಂಡ್‌ಗೆ ಮನವಿ ಮಾಡಿಕೊಳ್ಳುವ ಸಂಬಂಧ ಸಮಾಲೋಚನೆ ನಡೆಸಿದರು.

ಮಾಜಿ ಸಂಸದ ಜಿಎಂ ಸಿದ್ದೇಶ್ವರ ಅವರ ಬೆಂಗಳೂರು ನಿವಾಸದಲ್ಲಿ ಭಿನ್ನರ ಸಭೆ ನಡೆಯಿತು. ಈ ಸಭೆಗೆ ಅಂತಾನೇ ಉಚ್ಚಾಟನೆ ಬಳಿಕ ತಮ್ಮ ಚಿಂಚೋಳಿ ಗೆಸ್ಟ್ ಹೌಸ್‌ನಲ್ಲಿದ್ದ ಶಾಸಕ ಯತ್ನಾಳ್ ಸಹ ಬಂದು ಭಾಗವಹಿಸಿದ್ದು ವಿಶೇಷವಾಗಿತ್ತು. ಶೋಕಾಸ್ ನೋಟಿಸ್ ಪಡೆದ ಬಿಪಿ ಹರೀಶ್ ಸಹ ಇದ್ದರು. ಇನ್ನುಳಿದಂತೆ ಶಾಸಕ ರಮೇಶ್ ಜಾರಕಿಹೊಳಿ, ಮಾಜಿ ಸಂಸದ ಜಿಎಂ ಸಿದ್ದೇಶ್ವರ, ಮಾಜಿ ಸಚಿವ

(2ನೇ ಪುಟ ನೋಡಿ)

## ಸಾರ್ವಜನಿಕ ಸ್ಥಳಗಳಲ್ಲಿ ಮದ್ಯಪಾನ 359 ಕೇಸ್ ದಾಖಲು: ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಮಾ.28:ಎಮ್‌ಆರ್‌ಪಿಗಳಲ್ಲಿ ಮದ್ಯಪಾನ ಖರೀದಿಸಿ ಮೋಜು ಮಸ್ತಿಗಾಗಿ ಹೊರಗಡೆ ಸಾರ್ವಜನಿಕ ಜಾಗಗಳಲ್ಲಿ, ಪಾರ್ಕ್ ಹಾಗೂ ನಗರದ ಹೊರ ವಲಯಗಳಲ್ಲಿ ಕೂತು ಕುಡಿಯುವವರ ಮೇಲೆ ಕಲಬುರಗಿ ವಿಭಾಗ ವ್ಯಾಪ್ತಿಯಲ್ಲಿ ಈ ವರ್ಷದಲ್ಲಿ 359 ಕೇಸ್ ದಾಖಲಾಗಿವೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ಎಂದು ತಿಳಿಸಿದರು.

ಸಚಿವರ ಅಧ್ಯಕ್ಷತೆಯಲ್ಲಿಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಕಲಬುರಗಿ ವಿಭಾಗದ ಅಬಕಾರಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ಇಂತಹ ಪ್ರಕರಣಗಳನ್ನು ತಡೆಗಟ್ಟಲು ಜನರು ನಿಗದಿತ ಸ್ಥಳದಲ್ಲಿ ಕುಳಿತು ಕುಡಿಯಲು ಸಿಎಲ್ 7 ಹೆಚ್ಚಿಸಲಾಗುತ್ತಿದೆ ಹಾಗೂ ಪೊಲೀಸ್ ಇಲಾಖೆಯ ಸಹಾಯ ಪಡೆದು ಸಾರ್ವಜನಿಕ ಸ್ಥಳಗಳಲ್ಲಿ ಕುಡಿಯುವವರ ಮೇಲೆ ಕಟ್ಟುನಿಟ್ಟಿನ

(2ನೇ ಪುಟ ನೋಡಿ)

## ಕಲ್ಬುರ್ಗಿಯಲ್ಲಿ ಬೃಹತ್ ಉದ್ಯೋಗ ಮೇಳ: ಉದ್ಯೋಗಾಕಾಂಕ್ಷಿಗಳು ಸದುಪಯೋಗ ಪಡೆದುಕೊಳ್ಳಿ



ಮಲ್ಲಮ್ಮನುಡಿವಾರ್ತೆಯಾದಗಿರಿ:ಮಾ:28: ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಬರುವ ಏಪ್ರಿಲ್ ಮೊದಲ ವಾರದಲ್ಲಿ, ಕಲ್ಬುರ್ಗಿಯಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಿದ್ದು, ಜಿಲ್ಲೆಯ ನಿರುದ್ಯೋಗಿ ಅಭ್ಯರ್ಥಿಗಳು ಇದರ ಲಾಭ ಪಡೆಯುವಂತೆ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಕಲ್ಬುರ್ಗಿ ಪ್ರಾದೇಶಿಕ ಬೃಹತ್ ಉದ್ಯೋಗ ಮೇಳದ ಕುರಿತು ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

(2ನೇ ಪುಟ ನೋಡಿ)

## 156 LCH ಪ್ರಚಂಡ್ ಹೆಲಿಕಾಪ್ಟರ್ ಖರೀದಿ ಒಪ್ಪಂದಕ್ಕೆ ಸಹಿ! ಕರ್ನಾಟಕದಲ್ಲೇ ನಿರ್ಮಾಣ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮಾ.28: ಭಾರತೀಯ ಸೇನೆ ಮತ್ತು ಹಿಂದೂಸ್ತಾನ್ ಏರೋನಾಟಿಕಲ್ ಲಿಮಿಟೆಡ್ ನಡುವೆ ಅತೀ ದೊಡ್ಡ ರಕ್ಷಣಾ ಒಪ್ಪಂದ ಏರ್ಪಟ್ಟಿದೆ. ಭಾರತ ಸರ್ಕಾರವು 62,000 ಕೋಟಿ ರೂ. ಮೌಲ್ಯದ 156 ಎಲ್‌ಸಿಎಚ್ ಪ್ರಚಂಡ್ ಹೆಲಿಕಾಪ್ಟರ್‌ಗಳನ್ನು ಖರೀದಿಸಲು ಮಹತ್ವದ ಒಪ್ಪಂದಕ್ಕೆ ಸಹಿ ಹಾಕಿದೆ. ಆ ಮೂಲಕ ಇದುವರೆಗಿನ ಅತೀ-ದೊಡ್ಡ ರಕ್ಷಣಾ ಒಪ್ಪಂದ ಎಂಬ ಕೀರ್ತಿಗೆ ಇದು ಪಾತ್ರವಾಗಿದೆ.

ಭಾರತವು ಶುಕ್ರವಾರ ಹಿಂದೂಸ್ತಾನ್ ಏರೋನಾಟಿಕಲ್ ಲಿಮಿಟೆಡ್‌ನಿಂದ ಭಾರತೀಯ ಸೇನೆ ಮತ್ತು ವಾಯುಪಡೆಗಾಗಿ 156 ನಿರ್ಮಿತ ಲೈಟ್ ಕಾಂಬ್ಯಾಟ್ ಪ್ರಚಂಡ್ ಹೆಲಿಕಾಪ್ಟರ್‌ಗಳನ್ನು ಖರೀದಿಸಲು ತನ್ನ ಅತಿದೊಡ್ಡ ರಕ್ಷಣಾ ಒಪ್ಪಂದಕ್ಕೆ ಅನುಮೋದನೆ ನೀಡಿದೆ. ಈ ಒಪ್ಪಂದವು 62,000 ಕೋಟಿ ರೂ. ಮೌಲ್ಯದ್ದಾಗಿದ್ದು, ಇಂದು ನಡೆದ ಸಭೆಯಲ್ಲಿ ಭದ್ರತೆ ಕುರಿತ ಸಂಪುಟ ಸಮಿತಿಯು ಈ ನಿರ್ಧಾರವನ್ನು ತೆಗೆದುಕೊಂಡಿದೆ.

ಕರ್ನಾಟಕದಲ್ಲಿ ನಿರ್ಮಾಣ ಇನ್ನು ಜೂನ್ 2024ರಲ್ಲಿ, ಎಚ್‌ಎಎಲ್ 156 ಲೈಟ್ ಕಾಂಬ್ಯಾಟ್ ಹೆಲಿಕಾಪ್ಟರ್‌ಗಳಿಗೆ ಆರ್ಡರ್ ಪಡೆದಿತ್ತು. ಈ 156 ಹೆಲಿಕಾಪ್ಟರ್‌ಗಳಲ್ಲಿ 90 ಭಾರತೀಯ ಸೇನೆಗೆ ಮತ್ತು 60 ಭಾರತೀಯ ವಾಯುಪಡೆಗೆ ಹಂಚಿಕೆಯಾಗುತ್ತವೆ. ಈ ಹೆಲಿಕಾಪ್ಟರ್‌ಗಳನ್ನು ಕರ್ನಾಟಕದ ಎಚ್‌ಎಎಲ್‌ನ ತುಮಕೂರು ಘಟಕದಲ್ಲಿ ತಯಾರಿಸಲಾಗುತ್ತದೆ.

"156 ಚಾಪರ್‌ಗಳನ್ನು ಚೀನಾ ಮತ್ತು ಪಾಕಿಸ್ತಾನ ಗಡಿಗಳಲ್ಲಿ ಕಾರ್ಯಾಚರಣೆಗಾಗಿ ಭಾರತೀಯ ಸೇನೆ (90) ಮತ್ತು ಭಾರತೀಯ ವಾಯುಪಡೆಯ ನಡುವೆ ವಿಂಗಡಿಸಲಾಗುವುದು ಮತ್ತು ಉದ್ಯೋಗಗಳನ್ನು ಸೃಷ್ಟಿಸುವ ಮತ್ತು ದೇಶದೊಳಗೆ ಏರೋಸ್ಪೇಸ್ ಪರಿಸರ ವ್ಯವಸ್ಥೆಯನ್ನು ವಿಸ್ತರಿಸುವ ಪ್ರಮುಖ ಹೆಜ್ಜೆಯಾಗಿದೆ" ಎಂದು ರಕ್ಷಣಾ ಮೂಲಗಳು ತಿಳಿಸಿವೆ.

## ಆರ್ಥಿಕವಾಗಿ ದುರ್ಬಲರಾದವರನ್ನು ಒಳರೋಗಿಗಳಾಗಿ ಸೇರಿಸಿಕೊಳ್ಳಲು ಡಾ. ಶರಣ್ ಪ್ರಕಾಶ್ ಪಾಟೀಲ್ ಸೂಚನೆ



ಕಲಬುರಗಿ, ಮಾ. 28: ವೈದ್ಯಕೀಯ ತಪಾಸಣೆಗಾಗಿ ದೂರದ ಊರುಗಳಿಂದ ಪ್ರಯಾಣ ಮಾಡುವ, ಆರ್ಥಿಕವಾಗಿ ಹಿಂದುಳಿದ ರೋಗಿಗಳಿಗೆ ಹೆಚ್ಚಿನ ಆರ್ಥಿಕ ಹೊರೆ ಹಾಕದೇ, ಅವರನ್ನು ಒಳರೋಗಿಗಳಾಗಿ ಸೇರಿಸಿಕೊಳ್ಳಬೇಕು ಎಂದು ಕಿದ್ವಾಯಿ ಆಡಳಿತ ಮಂಡಳಿ ಅಧಿಕಾರಿಗಳಿಗೆ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್ ಸೂಚನೆ ನೀಡಿದ್ದಾರೆ.

ಬಡರೋಗಿಗಳ ಆರ್ಥಿಕ ಹೊರೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಸಚಿವರು, ಅಂತಿಮ ಆರೋಗ್ಯ ತನಿಖಾ ವರದಿಗಳು ನೀಡುವವರೆಗೆ ಅಂತಹ ರೋಗಿಗಳನ್ನು ಆಸ್ಪತ್ರೆಯ ವಾರ್ಡ್ ಗಳಲ್ಲಿ ಒಳರೋಗಿಗಳಾಗಿ ಸೇರಿಸಿಕೊಳ್ಳುವಂತೆ ಕಿದ್ವಾಯಿ ಸ್ಮಾರಕ ಆಂಕೊಲಾಜಿ ಸಂಸ್ಥೆಯ (ಕೆಎಂಐಒ) ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಕೆಎಂಐಒದಲ್ಲಿ ನಡೆದ ಪರಿಶೀಲನಾ ಸಭೆಯಲ್ಲಿ ಈ ನಿರ್ದೇಶನವನ್ನು ಮೊದಲು ನೀಡಲಾಗಿತ್ತಾದರೂ, ಶುಕ್ರವಾರ ಡಾ. ಪಾಟೀಲ್ ಅವರು ಬೆಂಗಳೂರಿನಲ್ಲಿ ಸಂಸ್ಥೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಧಿಕೃತವಾಗಿ ಆದೇಶ ಹೊರಡಿಸಿ ಜಾರಿಗೆ ತರಲಾಯಿತು.

ಪರಿಶೀಲನೆಯ ಸಮಯದಲ್ಲಿ, ರೋಗಿಗಳ ಸಂಖ್ಯೆ ಹೆಚ್ಚಾಗಿದ್ದರೂ, ಆಸ್ಪತ್ರೆಯ ಹಾಸಿಗೆಗಳು ಶೇಕಡ 70ಕ್ಕಿಂತ ಕಡಿಮೆ ಭರ್ತಿಯಾಗಿರುವುದು ಏಕೆ ಎಂದು ಸಚಿವರು ಪ್ರಶ್ನಿಸಿದರು.

ಅಂತಿಮ ರೋಗನಿರ್ಣಯದ ನಂತರವೇ ಒಳರೋಗಿಗಳಾಗಿ ಸೇರಿಸಿಕೊಳ್ಳಲಾಗುವುದು. ಆರಂಭಿಕ ರೋಗನಿರ್ಣಯ ಮತ್ತು ಅವರ ಅಂತಿಮ ಆರೋಗ್ಯ ವರದಿಗಳ ವಿತರಣೆ ಆಗುವವರೆಗೂ ರೋಗಿಗಳು ಹೊರಗುಳಿಯುತ್ತಿದ್ದಾರೆ ಎಂದು ಅಧಿಕಾರಿಗಳು ವಿವರಿಸಿದರು.

ಇದಕ್ಕೆ ಪ್ರತಿಕ್ರಿಯೆ ನೀಡಿದ ಸಚಿವರು, ಕೆಎಂಐಒ ತನ್ನ ನೀತಿಯನ್ನು ಬದಲಾಯಿಸಲು ಮತ್ತು ಈ ಮಧ್ಯಂತರ ಅವಧಿಯಲ್ಲಿ ರೋಗಿಗಳನ್ನು ವಾರ್ಡ್‌ಗಳಿಗೆ ಸೇರಿಸಲು ಸೂಚನೆ ನೀಡಿದರು.

ಉತ್ತರ, ಕಲ್ಯಾಣ ಕರ್ನಾಟಕದ ರೋಗಿಗಳಿಗೆ ಸೌಲಭ್ಯ ಅಗತ್ಯ

ಅನೇಕ ರೋಗಿಗಳು ಆರ್ಥಿಕವಾಗಿ ದುರ್ಬಲರಾಗಿರುತ್ತಾರೆ. ಅಂತಿಮ ವರದಿ ಬರುವವರೆಗೂ ಬೆಂಗಳೂರಿನಲ್ಲಿ ಖಾಸಗಿ ವಸತಿ ಸೌಕರ್ಯ ಪಡೆಯಲು ಸಾಧ್ಯವಾಗುವುದಿಲ್ಲ. ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಸಿಸುವವರಿಗೆ ಇದು ಅಗತ್ಯವಿಲ್ಲದಿರಬಹುದು, ದೂರದ ಪ್ರದೇಶಗಳಿಂದ, ವಿಶೇಷವಾಗಿ ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕದಿಂದ ಬರುವ ರೋಗಿಗಳಿಗೆ, ಇದು ಅತ್ಯಗತ್ಯ" ಎಂದು ಡಾ.ಪಾಟೀಲ್ ಹೇಳಿದರು.

ಅಂತಿಮ ವರದಿಗಳನ್ನು ನೀಡಲು ಒಂದೆರಡು ದಿನಗಳು ತೆಗೆದುಕೊಳ್ಳಬಹುದು, ಈ ಅವಧಿಯಲ್ಲಿ ಒಳರೋಗಿಗಳಾಗಿ ದಾಖಲಾಗಲು ಬಯಸುವವರಿಗೆ ಒಪ್ಪಿಗೆ ಪತ್ರವನ್ನು ಒದಗಿಸಿ ಎಂದು ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ವರದಿಗಳಿಗಾಗಿ ಕಾಯುತ್ತಿರುವ ರೋಗಿಗಳಿಗೆ ಉಚಿತ ವಸತಿ ಮತ್ತು ಊಟವನ್ನು ಸಹ ನೀಡುತ್ತದೆ. ಆದಾಗ್ಯೂ, ಹಾಸಿಗೆಗಳು ಲಭ್ಯವಿದ್ದಾಗಲೆಲ್ಲಾ, ರೋಗಿಗಳನ್ನು ಧರ್ಮಶಾಲೆಗೆ ಕಳುಹಿಸುವ ಬದಲು ಆಸ್ಪತ್ರೆ ವಾರ್ಡ್‌ಗಳಿಗೆ ದಾಖಲಿಸಬೇಕು. ಒಂದು ವೇಳೆ ಹಾಸಿಗೆಗಳು ತುಂಬಿದ್ದರೆ, ಅವರಿಗೆ ಧರ್ಮಶಾಲೆಯಲ್ಲಿ ಸ್ಥಳಾವಕಾಶ ಕಲ್ಪಿಸಬಹುದು" ಎಂದು ಡಾ. ಪಾಟೀಲ್ ಹೇಳಿದರು.

(2ನೇ ಪುಟ ನೋಡಿ)

## ಕೊಡಗಿನಲ್ಲಿ ಒಂದೇ ಕುಟುಂಬದ ನಾಲ್ವರ ಭೀಕರ ಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಕೊಡಗು,ಮಾ.28: ಒಂದೇ ಕುಟುಂಬದ ದಂಪತಿ ಹಾಗೂ ತಾಯಿ-ಮಗಳನ್ನು ಮಾರಕಾಸ್ತ್ರದಿಂದ ಹಲ್ಲೆ ನಡೆಸಿ ಭೀಕರವಾಗಿ ಕೊಲೆ ಮಾಡಿರುವ ಘಟನೆ ಪೊನ್ನಂಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಕೊಡಗು ಜಿಲ್ಲೆ ಪೊನ್ನಂಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯ ಬೇಗೂರು ಗ್ರಾಮದ ಕರಿಯ(75), ಗೌರಿ(70) ದಂಪತಿ ಹಾಗೂ ನಾಗಿ(30) ಮತ್ತು ಇವರ ಮಗಳು ಕಾವೇರಿ(5) ಕೊಲೆಯಾದವರು. ಇಂದು ಬೆಳಗ್ಗೆ ಮನೆಯಲ್ಲಿಯೇ ಜಗಳ ನಡೆದು ಈ ನಾಲ್ವರನ್ನು ಕತ್ತಿಯಿಂದ ಹಲ್ಲೆ ನಡೆಸಿ ಕೊಲೆ ಮಾಡಲಾಗಿದೆ.

ಗಿರೀಶ್ ಎಂಬಾತನೇ ಈ ಕೊಲೆ ಮಾಡಿ ಪರಾರಿಯಾಗಿದ್ದಾನೆ ಎಂದು ಶಂಕಿಸಿರುವ ಪೊಲೀಸರು ಆತನ ಬಂಧನಕ್ಕಾಗಿ ಬಲೆ ಬೀಸಿದ್ದಾರೆ. ಸುದ್ದಿ ತಿಳಿಯುತ್ತಿದ್ದಂತೆ ಎಸ್‌ಪಿ ರಾಮರಾಜನ್ ಹಾಗೂ ಪೊನ್ನಂಪೇಟೆ ಠಾಣೆ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿದ್ದಾರೆ.

ಘಟನೆ ಬಗ್ಗೆ ಪೊಲೀಸರು ಸ್ಥಳೀಯರಿಂದಲೂ ಮಾಹಿತಿ ಪಡೆದುಕೊಂಡಿದ್ದಾರೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಗಾಗಿ ಶೋಧ ನಡೆಸುತ್ತಿದ್ದಾರೆ. ಕೌಟುಂಬಿಕ ಕಲಹ ಅಥವಾ ಅನೈತಿಕ ಸಂಬಂಧದ ಹಿನ್ನಲೆಯಲ್ಲಿ ಈ ಭೀಕರ ಹತ್ಯೆ ನಡೆದಿರಬಹುದೆಂದು ಶಂಕಿಸಲಾಗಿದೆ. ಆರೋಪಿ ಸಿಕ್ಕಿದ ನಂತರ ಘಟನೆಗೆ ನಿಖರ ಕಾರಣ ತಿಳಿದುಬರಲಿದೆ.

## ನಮ್ಮ ಪಕ್ಷದ ಗಾಡಿ ಫುಲ್ ಇದೆ: ಸತೀಶ್ ಜಾರಕಿಹೊಳಿ

ಬೆಂಗಳೂರು:ಮಾ.28: 4 ದಿನಗಳ ದೆಹಲಿ ಪ್ರವಾಸ ಮುಗಿಸಿರುವ ಸಚಿವ ಸತೀಶ್ ಜಾರಕಿಹೊಳಿ ಬೆಂಗಳೂರಿಗೆ ವಾಪಸ್ ಆಗಿದ್ದಾರೆ.

ಹೆಚ್‌ಡಿಕುಮಾರಸ್ವಾಮಿ ಭೇಟಿಯಿಂದ ಉದ್ಭವವಾಗಿ ನಾನಾ ಪ್ರಶ್ನೆಗಳಿಗೆ ಉತ್ತರ ನೀಡಿ ಮುಖ್ಯಮಂತ್ರಿಯಾಗಲು ಜೆಡಿಎಸ್ ಬೆಂಬಲ ಕೋರಲು ಹೋಗಿದ್ದರು ಎಂಬ ಜಿಟಿ ದೇವೇಗೌಡ ಆರೋಪವನ್ನು ತಳ್ಳಿ ಹಾಕಿದ್ದಾರೆ. ಭೂತಯ್ಯನ ಮಗ ಅಯ್ಯು ಚಿತ್ರದ ಸನ್ನಿವೇಶವೊಂದನ್ನು ವಿವರಿಸಿ ನಾನು ಹಾಗಲ್ಲ ಎಂದಿದ್ದಾರೆ.

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ

ಕ್ರಮಕೈಗೊಳ್ಳಲು ಸೂಚಿಸಲಾಗಿದೆ ಎಂದರು.

ಇಂದಿನ ಸಭೆಯಲ್ಲಿ ಮುಖ್ಯವಾಗಿ ಇಲಾಖೆ ಸುಧಾರಣೆ ಹಾಗೂ ಸಮಸ್ಯೆಗಳ ಪರಿಹಾರಗಳ ಕುರಿತು ಸಲಹೆಗಳನ್ನು ಪಡೆಯಲಾಯಿತು. ಕಲಬುರಗಿ ವಿಭಾಗ ವ್ಯಾಪ್ತಿಯಲ್ಲಿ ಮದ್ಯಪಾನ ವಾರ್ಷಿಕ ವಹಿವಾಟು ಕುರಿತು ಚರ್ಚಿಸಲಾಯಿತು. ಈ ಸಾಲಿನಲ್ಲಿ ವಹಿವಾಟು ಸ್ವಲ್ಪ ಕಡಿಮೆಯಾಗಿರುವುದಕ್ಕೆ ಕಾರಣಗಳ ಕುರಿತು ಇಲಾಖೆ ಮಟ್ಟದಲ್ಲಿ ಇತರೆ ಮಾದಕ ದ್ರವ್ಯಗಳ ಸರಬರಾಜು ಮೇಲೆ ನಿಗಾವಹಿಸಲು ಸೂಚಿಸಲಾಗಿದೆ. ನೆರೆ ರಾಜ್ಯಗಳಿಂದ ಈ ಭಾಗದಲ್ಲಿ ಗಾಂಜಾ ಮಾರಾಟ ಪ್ರಕರಣಗಳು ಹೆಚ್ಚಾಗಿರುವುದು ಗಮನಕ್ಕೆ ಬಂದಿದೆ ಹಾಗೂ ನೆರೆ ರಾಜ್ಯಗಳಲ್ಲಿ ಸಾರ್ವಜನಿಕವಾಗಿ ಮಾರಲಾಗುವು ಸೇಂದಿ ಸೇವನೆ ಜಾಸ್ತಿಯಾಗಿರುವುದು ಸಹ ಸಮಸ್ಯೆಯಾಗಿದೆ. ಕಲಬುರಗಿ ವ್ಯಾಪ್ತಿಯಲ್ಲಿ ಗಾಂಜಾ ಮಾರಾಟವನ್ನು ತಡೆಗಟ್ಟಲು ಸಂಬಂಧಿಸಿದ ಇಲಾಖೆಗಳಿಗೆ ಸೂಚಿಸಲಾಗಿದೆ. ಗಡಿಗಳಲ್ಲಿ ಚೆಕ್ ಪೋಸ್ಟ್ ಸೇರಿದಂತೆ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಮೇಲೆ ನಿಗಾವಹಿಸಲು ಸೂಚಿಸಲಾಗಿದೆ. ಗಾಂಜಾ ಹಾಗೂ ಇತರೆ ಮಾರಕ ಮಾದಕ ದ್ರವ್ಯಗಳ ಮಾರಾಟವನ್ನು ಹಾಗೂ ಹಳ್ಳಿಗಳಲ್ಲಿ ಮನೆಗಳಲ್ಲಿ ಮದ್ಯಪಾನ ಮಾರಾಟ ಮಾಡುವುದನ್ನು ತಡೆಗಟ್ಟಲು ಕ್ರಮಕೈಗೊಳ್ಳಲು ಇಂದಿನ ಸಭೆಯಲ್ಲಿ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಕುಡಿಯುವ ನೀರಿನ ಸಮಸ್ಯೆಗೆ ಸಂಬಂಧಿಸಿದಂತೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರಸ್ತುತ ಬೇಸಿಗೆ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ಕುಡಿಯುವ ನೀರನ್ನು ಗಮನದಲ್ಲಿಟ್ಟುಕೊಂಡು ಕೆಲವೆಡೆ ಬೆಳೆಗಳಿಗೆ ನೀಡಲು ಸಾಧ್ಯವಾಗುತ್ತಿಲ್ಲ. ಕುಡಿಯುವ ನೀರಿನ ಸಮಸ್ಯೆ ಎಲ್ಲರಿಗೂ ಒಂದೇಯಾಗಿದ್ದು, ನೆರೆ ರಾಜ್ಯಗಳ ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾದಾಗ ಮಾನವೀಯತೆ ದೃಷ್ಟಿಯಿಂದ ಸ್ಪಂದಿಸಬೇಕಾಗುತ್ತದೆ. ನಮಗೆ ಕುಡಿಯುವ ನೀರಿನ ಸಮಸ್ಯೆಯಾದಲ್ಲಿ ಪಕ್ಕದ ಮಹಾರಾಷ್ಟ್ರದೊಂದಿಗೆ ನೀರು ಕೇಳಲಾಗುವುದು.

ಕಲ್ಯಾಣ ಕರ್ನಾಟಕ 371(ಜೆ) ಅಡಿಯಲ್ಲಿ ಅಬಕಾರಿ ಇಲಾಖೆಯಲ್ಲಿ ಬಡ್ತಿ ಸಮಸ್ಯೆ ಇದ್ರೆ ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಇಂದಿನ ಕಲಬುರಗಿ ವಿಭಾಗದ ಅಬಕಾರಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಮತ್ತು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ದರ್ಶನಾಪುರ, ಶಾಸಕರಾದ ಅಲ್ಲಮ ಪ್ರಭು ಪಾಟೀಲ್, ಅಬಕಾರಿ ಅಪರ ಆಯುಕ್ತರು (ಜಾರಿ ಮತ್ತು ಅಪರಾಧ) ಡಾ. ವೈ ಮಂಜುನಾಥ, ಅಬಕಾರಿ ಜಂಟಿ ಆಯುಕ್ತರು (ಐಎಂಎಲ್) ನಾಗರಾಜಪ್ಪ, ಪ್ರಭಾರ ಅಬಕಾರಿ ಜಂಟಿ ಆಯುಕ್ತರು (ಜಾರಿ ಮತ್ತು ತನಿಖೆ) ಕಲಬುರಗಿ ವಿಭಾಗದ ಡಾ. ಸಂಗನಗೌಡ ಸಿ. ಹೊಸಳ್ಳಿಅವರು ಉಪಸ್ಥಿತರಿದ್ದರು.

## ಭೂಕಂಪ: 60 ಸಾವು, 250 ಗಾಯ

ಜನರು ಕಾಣೆಯಾಗಿದ್ದಾರೆ. 50 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

ಮ್ಯಾನ್ಮಾರ್‌ನ ಮಂಡಲೇಯಲ್ಲಿರುವ ಐಕಾನಿಕ್ ಅವಾ ಸೇತುವೆ ಭೂಕಂಪದಲ್ಲಿ ಕುಸಿದು ಬಿದ್ದು, ಒಂದು ಮಸೀದಿ ಭಾಗಶಃ ಕುಸಿದು ಕನಿಷ್ಠ ಮೂರು ಜನರು ಸಾವನ್ನಪ್ಪಿದ್ದಾರೆ. ಹಲವಾರು ಕಟ್ಟಡಗಳು ಕುಸಿದು ರಸ್ತೆಗಳು ಬಿರುಕು ಬಿಟ್ಟಿದೆ.

ಥೈಲ್ಯಾಂಡ್‌ನ ಹಲವಾರು ಭಾಗಗಳಲ್ಲಿಯೂ ಭೂಕಂಪದ ಅನುಭವವಾಯಿತು. ಭೂಕಂಪದ ನಂತರ ಬ್ಯಾಂಕಾಕ್‌ನಲ್ಲಿ ನಿರ್ಮಾಣ ಹಂತದಲ್ಲಿದ್ದ ಗಗನಚುಂಬಿ ಕಟ್ಟಡ ಕುಸಿದು ಕನಿಷ್ಠ ಮೂವರು ಸಾವನ್ನಪ್ಪಿದ್ದಾರೆ. ಹತ್ತಾರು ಮಂದಿ ಕಾರ್ಮಿಕರು ಅವಶೇಷಗಳಡಿ ಸಿಲುಕಿಕೊಂಡಿದ್ದಾರೆ ಎನ್ನಲಾಗಿದೆ.

ಭೂಕಂಪದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಕಳವಳ ವ್ಯಕ್ತಪಡಿಸಿದ್ದು, ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುವುದಾಗಿ ಹೇಳಿದ್ದಾರೆ. ಭಾರತೀಯ ಅಧಿಕಾರಿಗಳು ಸನ್ನದ್ಧರಾಗಿರುವಂತೆ ಸೂಚನೆ ನೀಡಿದ್ದಾರೆ.

## ಸೇರಿಸಿಕೊಳ್ಳಲು ಡಾ. ಶರಣ್ ಪ್ರಕಾಶ್ ಪಾಟೀಲ್ ಸೂಚನೆ

ಬಿಪಿಎಲ್ ವರ್ಗದವರಿಗೆ ಸೌಲಭ್ಯಕಿದ್ವಾಯಿ ಆಸ್ಪತ್ರೆಗೆ ಬರುವ

ಶೇ. 90ಕ್ಕಿಂತ ಹೆಚ್ಚು ರೋಗಿಗಳು ಬಿಪಿಎಲ್ ವರ್ಗವಾಗಿರುವುದರಿಂದ, ವಿಶೇಷ ವಾರ್ಡ್, ಶಾಂತಿಧಾಮ ಮತ್ತು ಅನಿಕೇತನ, ಅರೆ-ವಿಶೇಷ ವಾರ್ಡ್ ಅನ್ನು ಸಾಮಾನ್ಯ ವಾರ್ಡ್ ಗಳಾಗಿ ಪರಿವರ್ತಿಸಲು ಅಧಿಕಾರಿಗಳಿಗೆ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ನಿರ್ದೇಶನ ನೀಡಿದರು.ಆರ್ಥಿಕವಾಗಿ ಹಿಂದುಳಿದ

ರೋಗಿಗಳಿಗೆ ಪರಿಹಾರ ಒದಗಿಸುವುದು, ಗಂಭೀರ ಆರೋಗ್ಯ ತನಿಖೆಗಳನ್ನು ನಡೆಸುವಾಗ ಅವರಿಗೆ ಅಗತ್ಯವಾದ ಆರೈಕೆ ಮತ್ತು ಸೌಕರ್ಯವನ್ನು ಒದಗಿಸುವುದು ಈ ಕ್ರಮದ ಉದ್ದೇಶವಾಗಿದೆ.

ಈ ನಿರ್ದೇಶನವನ್ನು ಜಾರಿಗೆ ತರಲು, ಏಒಖಔ ಇಂದು ಸುತ್ತೋಲೆ ಮತ್ತು ಒಪ್ಪಿಗೆ ಪತ್ರವನ್ನು ನೀಡಿದೆ.

ಇಂದು ನಡೆದ ಸಭೆಯಲ್ಲಿ ಕಿದ್ವಾಯಿ ಆಡಳಿತಾಧಿಕಾರಿ

ವೈ ನವೀನ್ ಭಟ್ ಮತ್ತು ನಿರ್ದೇಶಕ ಡಾ.ನವೀನ್ ಸೇರಿದಂತೆ ಹಲವಾರು ಅಧಿಕಾರಿಗಳು ಉಪಸ್ಥಿತರಿದ್ದರು

## ಹೈಕಮಾಂಡ್‌ಗೆ ಮನವಿಗೆ ನಿರ್ಧಾರ

ಕುಮಾರ್ ಬಂಗಾರಪ್ಪ, ಮಾಜಿ ಸಂಸದ ಪ್ರತಾಪ್ ಸಿಂಹ, ಎನ್‌ಆರ್ ಸಂತೋಷ್, ಮಾಜಿ ಸಂಸದ ಬಿವಿ ನಾಯಕ್ ಮತ್ತಿತರರು ಸಭೆಯಲ್ಲಿ ಭಾಗವಹಿಸಿದ್ದರು.

ಮುಖ್ಯವಾಗಿ ಮೂರು ಹಂತಗಳಲ್ಲಿ ಯತ್ನಾಳ್ ಬಚಾವೋ ಆಂದೋಲನ ಜಾರಿಗೆ ಪ್ಲ್ಯಾನ್ ಮಾಡಲಾಗಿದೆ. ಉಚ್ಚಾಟನೆ ವಿಚಾರ ಮರುಪರಿಶೀಲನೆ ನಡೆಸುವಂತೆ ಹೈಕಮಾಂಡ್‌ಗೆ ಖುದ್ದು ಯತ್ನಾಳ್ ಮೂಲಕ ಪತ್ರ ಬರೆಸುವುದು, ಪಕ್ಷದ ನಿಷ್ಠ ನಾಯಕರು, ವರಿಷ್ಠರಿಗೆ ಆಪ್ತರಾಗಿರುವ ಹೊರ ರಾಜ್ಯದ ಬಿಜೆಪಿ ನಾಯಕರ ಮೂಲಕ ಒತ್ತಡ ತರುವುದು, ಇವೆರಡೂ ಕೈಗೂಡದಿದ್ದರೆ ದೆಹಲಿಗೆ ಭಿನ್ನರ ನಿಯೋಗ ಹೋಗುವ ಬಗ್ಗೆ ಚರ್ಚಿಸಲಾಗಿದೆ. ಇನ್ನು ಹೈಕಮಾಂಡ್ ಉಚ್ಚಾಟನೆ ವಾಪಸ್ ಪಡೆಯದಿದ್ದಲ್ಲಿ ಸಾಮೂಹಿಕ ರಾಜೀನಾಮೆಗೆ ಮುಂದಾಗುವ ಬಗ್ಗೆಯೂ ಆಲೋಚನೆ ಇದೆ ಎನ್ನಲಾಗಿದೆ.

ಇನ್ನೊಂದು ಕಡೆ ಉಚ್ಚಾಟಿತ ಶಾಸಕನ ಜತೆಗೂಡಿ ಸಭೆ ನಡೆಸುವ ಮೂಲಕ ಪಕ್ಷದ ಶಿಸ್ತು ಉಲ್ಲಂಘನೆ ಆಗಿದೆ ಎಂಬ ಚರ್ಚೆಯೂ ನಡೀತಿದೆ. ಅದೇನೇ ಇದ್ರೂ ಬಿಜೆಪಿ ಭಿನ್ನರು ಯತ್ನಾಳ್ ಸೇವ್ ಆಪರೇಷನ್‌ಗೆ ಮುಂದಾಗಿದ್ದಾರೆ. ಹೈಕಮಾಂಡ್ ನಡೆ ಏನು ಅನ್ನೋದು ಸದ್ಯಕ್ಕೆ ಕುತೂಹಲ.

## ಸತೀಶ್ ಜಾರಕಿಹೊಳಿ

ನಮ್ಮ ಪಕ್ಷದ ಗಾಡಿ ಫುಲ್ ಇದೆ. ಜೆಡಿಎಸ್‌ನ 14 ಶಾಸಕರನ್ನು ತಗೆದು-ಕೊಂಡು ಏನು ಮಾಡೋಣ ಎಂದು ಕೇಳಿದ್ದಾರೆ. ಮುಖ್ಯಮಂತ್ರಿ ಮತ್ತು ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕಾಗಿ ನಾವು ವೇಟಿಂಗ್ ಲಿಸ್ಟ್‌ನಲ್ಲಿದ್ದೇವೆ. ಅಲ್ಲಿಯೇ ಕಾಯ್ತೇವೆ ಎಂದು ಜಾರಕಿಹೊಳಿ ಸ್ಪಷ್ಟಪಡಿಸಿದ್ದಾರೆ.

ದೇವೇಗೌಡರ ಭೇಟಿ ಆಕಸ್ಮಿಕ ಎಂದಿದ್ದಾರೆ. ಈ ನಡುವೆ ಸತೀಶ್ ಜಾರಕಿಹೊಳಿ ನಿವಾಸಕ್ಕೆ ಸಚಿವ ಎಂಬಿ ಪಾಟೀಲ್ ಭೇಟಿ ನೀಡಿ ಮಾತುಕತೆ ನಡೆಸಿದರು.

## ರಾಜಶೇಖರ ಪಾಟೀಲ್ ಜನ್ಮದಿನ

ಉದ್ದೇಶಿಸಿ ಮಾತನಾಡಿದರು.ಏ.1ರಂದು ನಡೆಯಬೇಕಾಗಿದ್ದ ಕಾರ್ಯಕ್ರಮ ಕಾರಣಾಂತರದಿಂದ ಏ. 2ರಂದು ಆಯೋಜನೆ ಮಾಡಲಾಗಿದೆ. ಬೆಳಗ್ಗೆ 10 ಗಂಟೆಗೆ ಐತಿಹಾಸಿಕ ವೀರಭದ್ರೇಶ್ವರ ಹಾಗೂ ರಾಜರಾಜೇಶ್ವರಿ ದೇವಸ್ಥಾನಕ್ಕೆ ಭೇಟಿ ವಿಶೇಷ ಪೂಜೆ ಸಲ್ಲಿಸಲಿದ್ದಾರೆ. ಬಳಿಕ ಮಾಜಿ ಸಚಿವ ಬಸವರಾಜ ಪಾಟೀಲ್ ಸಮಾಧಿಗೆ ಭೇಟಿ ನೀಡಿ ದರ್ಶನ ಪಡೆಯಲಿದ್ದಾರೆ. ನಂತರ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಲಿದ್ದಾರೆ ಎಂದು ತಿಳಿಸಿದರು.

ಸಂಜೆ 6 ಗಂಟೆಗೆ ರಾಜರಾಜೇಶ್ವರಿ ದೇವಸ್ಥಾನದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಕನ್ನಡ ಚಿತ್ರರಂಗದ ಖ್ಯಾತ ನಟಿ ಸೋನಲ್ ಮಾಂಥರೋ ಭಾಗಿಯಾಗಲಿದ್ದಾರೆ. ಜತೆಗೆ ಕನ್ನಡದ ಖ್ಯಾತ ನಿರೂಪಕಿ ಆಲೂರು ದಿವ್ಯಾ ಕಾರ್ಯಕ್ರಮ ನಿರೂಪಣೆ ಮಾಡಲಿದ್ದಾರೆ. ರಾಜಸ್ಥಾನದ ಕಲಾ ತಂಡದಿಂದ ವಿಶೇಷ ಸಂಗೀತ ಕಾರ್ಯಕ್ರಮ ಜರುಗಲಿದೆ. ಹೀಗಾಗಿ ನಮ್ಮ ಪಕ್ಷದ ಕಾರ್ಯಕರ್ತರು ಆಗಮಿಸಿ ಮಾಜಿ ಸಚಿವರಿಗೆ ಶುಭ ಹಾರೈಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಓಂಕಾರ ತುಂಬಾ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಲ್ಲಿಕಾರ್ಜುನ್ ಮಾಳಶೆಟ್ಟಿ, ಮುಖಂಡರಾದ ಕಂಟೆಪ್ಪ ದಾನ, ಮಹೇಶ ಅಗಡಿ, ಸುರೇಶ ಘಾಂಗ್ರೆ, ಗುರು ಮೂಲಗೆ ಇದ್ದರು.

## ಎಐಸಿಸಿ ಹೊಸ ಸೂತ್ರ

ಸಾಮಾಜಿಕ ಮಾಧ್ಯಮವನ್ನು ಮೇಲ್ವಿಚಾರಣೆ ಮಾಡುವುದು, ಪಕ್ಷದ ಆಸ್ತಿಗಳನ್ನು ನೋಡಿಕೊಳ್ಳುವುದು ಇತ್ಯಾದಿಗಳ ಕುರಿತು ಪ್ರದೇಶ ಕಾಂಗ್ರೆಸ್ ಸಮಿತಿಗಳಿಗೆ (ಪಿಸಿಸಿ) ತರಬೇತಿ ನೀಡಲಾಗಿದೆ ಎಂದು ಶಿವಕುಮಾರ್ ಹೇಳಿದರು. ದೇಶದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಲು ಅವರು ಹೊಸ ಸೂತ್ರವನ್ನು ಹೊರತಂದಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಈ ಯೋಜನೆ ತೆಗೆದುಕೊಂಡಿರುವುದು ನನಗೆ ತುಂಬಾ ಸಂತೋಷವಾಗಿದೆ ಎಂದಿದ್ದಾರೆ.

ಇದಕ್ಕೂ ಮುನ್ನ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಬಿಜೆಪಿಯನ್ನು ಟೀಕಿಸಿದರು,ಪಕ್ಷವು ಎರಡು ಮಿತ್ರಪಕ್ಷಗಳ ಮೇಲೆ ಅವಲಂಬಿತವಾಗಿರುವುದರಿಂದ ಪ್ರಧಾನಿ ನರೇಂದ್ರ ಮೋದಿ ಅವರ 400 ಸ್ಥಾನಗಳನ್ನು ಗೆಲ್ಲುವ ಹೇಳಿಕೆಗೆ ಭಾರಿ ಹೊಡೆತ ಬಿದ್ದಿದೆ ಎಂದು ಹೇಳಿದರು.

ನವದೆಹಲಿಯಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರನ್ನು ಉದ್ದೇಶಿಸಿ ಮಾತನಾಡಿದ ಖರ್ಗೆ ಏಕತೆ ಮತ್ತು ದೀರ್ಘಕಾಲೀನ ಕಾರ್ಯತಂತ್ರದ ಮೇಲೆ ಕೇಂದ್ರೀಕರಿಸಿ ರಾಜ್ಯ ಮಟ್ಟದಲ್ಲಿ ಚುನಾವಣೆಗಳನ್ನು ಗೆಲ್ಲುವ ಮಹತ್ವದ ಬಗ್ಗೆ ಚರ್ಚಿಸಿದರು. ಮುಖ್ಯವಾಗಿ, ರಾಜ್ಯ ಮಟ್ಟದಲ್ಲಿ ಚುನಾವಣೆಗಳನ್ನು ಗೆಲ್ಲಲು ದೀರ್ಘಾವಧಿಯ ಕಾರ್ಯತಂತ್ರದೊಂದಿಗೆ ನಾವು ಒಗ್ಗಟ್ಟಿನಿಂದ ಕೆಲಸ ಮಾಡುವುದನ್ನು ನೆನಪಿನಲ್ಲಿಟ್ಟುಕೊಳ್ಳಬೇಕು. ನಮ್ಮ ಸಿದ್ಧಾಂತವು ಪ್ರಬಲವಾಗಿದೆ, ಆದರೆ ಅಧಿಕಾರವಿಲ್ಲದೆ, ನಾವು ಅದನ್ನು ಕಾರ್ಯಗತಗೊಳಿಸಲು ಸಾಧ್ಯವಿಲ್ಲ" ಎಂದು ಖರ್ಗೆ ಹೇಳಿದರು.

ಹಲವಾರು ರಾಜ್ಯಗಳಲ್ಲಿ ಮುಂಬರುವ ಚುನಾವಣೆಗಳಿಗೆ ಮುಂಚಿತವಾಗಿ ರಾಜ್ಯ ಮಟ್ಟದಲ್ಲಿ ಬಲವಾದ ಸಾಂಸ್ಥಿಕ ರಚನೆಗಳ ಅಗತ್ಯವನ್ನು ಖರ್ಗೆ ಚರ್ಚಿಸಿದರು. ಮುಂದಿನ ವರ್ಷ (ಮಾರ್ಚ್-ಏಪ್ರಿಲ್ 2026), ಅಸ್ಸಾಂ, ಕೇರಳ, ಪುದುಚೇರಿ ಮತ್ತು ತಮಿಳುನಾಡಿನಲ್ಲಿ ಚುನಾವಣೆಗಳು ನಡೆಯಲಿವೆ.

ನಿಮ್ಮ ಜಿಲ್ಲೆಯ ಪ್ರತಿಯೊಬ್ಬ ಅಭ್ಯರ್ಥಿಯ ಗೆಲುವನ್ನು ಖಚಿತಪಡಿಸಿಕೊಳ್ಳುವುದು ನಿಮ್ಮ ಜವಾಬ್ದಾರಿ. ನಾವು ಒಟ್ಟಾಗಿ ಕೆಲಸ ಮಾಡುತ್ತೇವೆ, ಆದರೆ ನೀವು ನಮ್ಮ ಮೊದಲ ರಕ್ಷಣಾ ಮಾರ್ಗವಾಗಿದ್ದೀರಿ. ನಮ್ಮ ಕಾರ್ಯತಂತ್ರವನ್ನು ಯೋಜಿಸುವಲ್ಲಿ ನಿಮ್ಮ ಸಲಹೆಗಳು ನಿರ್ಣಾಯಕವಾಗುತ್ತವೆ ಮತ್ತು ನಾವು ಅವುಗಳನ್ನು ಗಣನೆಗೆ ತೆಗೆದುಕೊಳ್ಳುತ್ತೇವೆ" ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದರು.

## ಉದ್ಯೋಗಾಕಾಂಕ್ಷಿಗಳು ಸದುಪಯೋಗ ಪಡೆದುಕೊಳ್ಳಿ

ಕಲ್ಬುರ್ಗಿ ಪ್ರಾದೇಶಿಕ ಬೃಹತ್ ಉದ್ಯೋಗ ಮೇಳ ಇದಾಗಿದ್ದು, ನಿರುದ್ಯೋಗಿ ಯುವಜನಾಂಗಕ್ಕೆ, ಉದ್ಯೋಗಾಕಾಂಕ್ಷಿಗಳಿಗೆ ನೆರವಾಗಲು ಸರ್ಕಾರ ಕ್ರಮ ಕೈಗೊಂಡಿದೆ.ಈ ಹಿನ್ನೆಲೆಯಲ್ಲಿ ಹೆಚ್ಚು ಹೆಚ್ಚು ಅಭ್ಯರ್ಥಿಗಳು ನೋಂದಾಯಿಸಿಕೊಳ್ಳುವ ಮೂಲಕ ಉದ್ಯೋಗದ ಲಾಭ ಪಡೆಯುವಂತೆ ಸಲಹೆ ನೀಡಿದರು.

ಉದ್ಯೋಗಾಕಾಂಕ್ಷಿಗಳ ಅನುಕೂಲಕ್ಕಾಗಿ ಗ್ರಾಮ ಪಂಚಾಯತ್, ಗ್ರಾಮವಾರು,ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ವಾರ್ಡವಾರು, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಸರ್ಕಾರಿ ಕಚೇರಿ, ಪಾಲಿಟೆಕ್ನಿಕ್,ಐಟಿಐ, ಡಿಪ್ಲೊಮಾ,ವಿವಿಧ ಕಾಲೇಜುಗಳ ವ್ಯಾಪ್ತಿಯಲ್ಲಿ ನಿರಂತರ ಅರಿವು ಮೂಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.ಉದ್ಯೋಗ ಮೇಳದ ಕುರಿತು ಪ್ರಚಾರ ಸಾಮಗ್ರಿಗಳನ್ನು ವಿತರಿಸಲು ಕ್ರಮ ಕೈಗೊಳ್ಳಬೇಕು.ಸಾಮಾಜಿಕ ಜಾಲತಾಣಗಳ ಮೂಲಕ ಜಾಗೃತಿ ಮೂಡಿಸಬೇಕು.ಈ ಜಿಲ್ಲೆಯ ನಿರುದ್ಯೋಗಿ ಉದ್ಯೋಗಾಕಾಂಕ್ಷಿಗಳಲ್ಲಿ ಜಾಗೃತಿ ಮೂಡಿಸುವ ಜೊತೆಗೆ ನೋಂದಣಿ ಮಾಡಿಕೊಂಡವರಿಗೆ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ತರಬೇತುಗೊಳಿಸಿ ನೆರವಾಗಬೇಕು. ಸಣ್ಣ, ವ್ಯವಹಾರ, ವ್ಯಾಪಾರಸ್ಥರು,ವಲಸಿಗರು ಹೆಚ್ಚಾಗಿರುವದರಿಂದ ಯುವಜನಾಂಗಕ್ಕೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸಲು ನೆರವಾಗಬೇಕು.ಕಂಪನಿಗಳ ಕೌಶಲ್ಯ ಅವಶ್ಯಕತೆಗಳ ಅನುಗುಣವಾಗಿ ತರಬೇತಿ ಗೊಳಿಸಿದಲ್ಲಿ ಸೂಕ್ತ ಎಂದ ಅವರು, ಉದ್ಯೋಗ ಅಧಿಕಾರಿಗಳು, ಜಿಲ್ಲಾ ಕೈಗಾರಿಕಾ ಕೇಂದ್ರ,ತಾ.ಪಂ, ನಗರಸ್ಥಳಿಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ರಸ್ತೆ ಸಾರಿಗೆ ನಿಗಮದ ಅಧಿಕಾರಿಗಳು,ನಗರಸಭೆ ಆಯುಕ್ತರು,ಲೀಡ್ ಬ್ಯಾಂಕ್ ವ್ಯವಸ್ಥಾಪಕರು ತಕ್ಷಣ ಕಾರ್ಯಪ್ರವೃತ್ತರಾಗಿ ಸೂಕ್ತ ಜಾಗೃತಿ ಮೂಡಿಸುವಂತೆ ಸೂಚನೆ ನೀಡಿದರು.

ಅಭ್ಯರ್ಥಿಗಳ ನೋಂದಣಿಗೆ ಅವಕಾಶಕಲ್ಯಾಣ ಕರ್ನಾಟಕ ಅಧಿನದಲ್ಲಿ ಬರುವ 07 ಜಿಲ್ಲೆಗಳು ಹಾಗೂ ಇತರೆ ಜಿಲ್ಲೆಗಳಿಂದಲೂ 200ಕ್ಕೂ ಹೆಚ್ಚು ಉದ್ಯೋಗದಾತರು ಭಾಗವಹಿಸುವ ನಿರೀಕ್ಷೆ ಇದೆ.

ಯಾದಗಿರಿ ಜಿಲ್ಲೆಯ ಎಲ್ಲ ತಾಲೂಕಿನ ಎಸ್.ಎಸ್.ಎಲ್.ಸಿ, ಐ.ಟಿ.ಐ, ಡಿಪ್ಲೋಮಾ, ಯಾವುದೇ ಪದವಿ ಹಾಗೂ ಯಾವುದೇ ಸ್ನಾತಕೋತ್ತರ ಪದವಿಗಳನ್ನು ಪೂರ್ಣಗೊಳಿಸಿದ ನಿರುದ್ಯೋಗ ಯುವಕ ಯುವತಿಯರಿಗೆ ವಿವಿಧ ಪ್ರತಿಷ್ಠಿತ ಕಂಪನಿ/ಸಂಸ್ಥೆಗಳಲ್ಲಿ ಉದ್ಯೋಗ ಪಡೆಯಲು ಇದೊಂದು ಸುವರ್ಣಾವಕಾಶವಾಗಿದ್ದು, ಪ್ರತಿಯೊಬ್ಬರು ತಿತಿತಿ.ಇುಟಟಭಿಿಂಟಿಟಜಭಿಿ.ಇಂಣಣುಚಿಟಇಚಿಡಿ.ಭಿಂಟ ನಲ್ಲಿ ತಮ್ಮ ಹೆಸರನ್ನು ನೋಂದಣಿ ಮಾಡಿಕೊಂಡು, "ಪ್ರಾದೇಶಿಕ ಮಟ್ಟದ ಬೃಹತ್ ಉದ್ಯೋಗ ಮೇಳದಲ್ಲಿ ಭಾಗವಹಿಸಿ, ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯ ಮಿಷನ್ ಸಹಾಯಕ ನಿರ್ದೇಶಕರಾದ ಶೀ ಬಸಪ್ಪ ತಳವಡಿ (9880072695) ಇವರನ್ನು ಸಂಪರ್ಕಿಸುವಂತೆ ಅವರು ತಿಳಿಸಿದ್ದಾರೆ.ಸಭೆಯಲ್ಲಿ ಜಿ.ಪಂ.ಸಿಇಓ ಲವೀಶ್ ಒರಡಿಯಾ,ಅಪರ್ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ

## ಭತ್ತ, ಜೋಳ ಖರೀದಿ ಕೇಂದ್ರ ಆರಂಭ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾ.28 : 2024-25ನೇ ಸಾಲಿನ ಹಿಂಗಾರು (ಖಂಃಖ) ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಭತ್ತ ಮತ್ತು ಜೋಳ ಖರೀದಿಸಲು ರೈತರ ನೋಂದಣಿ ಕೇಂದ್ರ ಆರಂಭಿಸಿದೆ ಎಂದು ಯಾದಗಿರಿ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ತಿಳಿಸಿದ್ದಾರೆ. ಹಿಂಗಾರು (ಖಂಃಖ) ಋತುವಿನಲ್ಲಿ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ-ಸಾಮಾನ್ಯ ಪ್ರತಿ ಕ್ವಿಂಟಾಲ್ 2300 ರೂ. ಗಳ ಹಾಗೂ 'ಎ' ಗ್ರೇಡ್ ಪ್ರತಿಕ್ವಿಂಟಾಲ್‌ಗೆ 2320 ರೂ. ಗಳ ರಂತೆ ಮತ್ತು ಬಿಳಿ ಜೋಳ ಹೈಬ್ರಿಡ್ ಪ್ರತಿ ಕ್ವಿಂಟಾಲ್‌ಗೆ 3371 ರೂ.ಗಳ ಹಾಗೂ ಬಿಳಿ ಜೋಳ ಮಾಲ್ದಂಡಿ ಪ್ರತಿ ಕ್ವಿಂಟಾಲ್‌ಗೆ 3421 ರೂ.ಗಳ ಖರೀದಿಸಲು ಈ ಕೆಳಕಂಡ ತಾಲ್ಲೂಕು ಕೇಂದ್ರಗಳಲ್ಲಿ ನೊಂದಣಿ ಕೇಂದ್ರ ತೆರೆಯಲಾಗಿದೆ. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣ, ಯಾದಗಿರಿ, (ನೊಂದಣಿ ಕೇಂದ್ರ), ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣ, ಸುರಪೂರ ಸಗಟು ಮಳಿಗೆ, ವೆಂಕಟಾಪುರ, (ನೋಂದಣಿ ಕೇಂದ್ರ), ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತ, ಆವರಣ ಶಹಾಪೂರ, (ನೋಂದಣಿ ಕೇಂದ್ರ), ತಾಲ್ಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ, ಟಿ.ಎ.ಪಿ.ಸಿ.ಎಂ.ಎಸ್. ಆವರಣ (ಮಹಾದೇವಪ್ಪ ಬಳೆ ಕಲ್ಯಾಣ ಮಂಟಪ ಎದುರುಗಡೆ, ತಾಳಿಕೋಟೆ ರಸ್ತೆ), (ನೋಂದಣಿ ಕೇಂದ್ರ) ಹುಣಸಗಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ನಾಯ್ಕಲ್ ಗ್ರಾಮ, (ನೋಂದಣಿ ಕೇಂದ್ರ), ಕೃಷಿ ಇಲಾಖೆಯವರು ಸಿದ್ದಪಡಿಸಿದ ಫ್ರೂಟ್ ಎಂಬ ತಂತ್ರಾಂಶದಲ್ಲಿ ನಮೂದಿಸಿರುವ ಬೆಳೆಯ ಆಧಾರದ ಮೇಲೆ ರೈತರ ಹೆಸರನ್ನು ನೊಂದಾಯಿಸಿಕೊಳ್ಳಲಾಗುವುದು, ಒಂದು ವೇಳೆ ಫ್ರೂಟ್ ತಂತ್ರಾಂಶದಲ್ಲಿ ತೊಂದರೆ ಇದ್ದಲ್ಲಿ ಹತ್ತಿರವಿರುವ ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ತಂತ್ರಾಂಶದಲ್ಲಿ ಸರಿಪಡಿಸಿಕೊಂಡು ನೊಂದಣಿ ಮಾಡಿಕೊಳ್ಳಬೇಕು.

## ಜಿಲ್ಲಾ ಉಸ್ತುವಾರಿ ಸಚಿವರಿಂದ 'ಭರವಸೆಯ ಬೆಳಕು- ಪಂಚಗ್ಯಾರಂಟಿ ಯೋಜನೆಗಳು' ಕಿರುಹೊತ್ತಿಗೆ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.28:ಕರ್ನಾಟಕ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳ ಕುರಿತಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಿಸಿರುವ 'ಭರವಸೆಯ ಬೆಳಕು-ಪಂಚ ಗ್ಯಾರಂಟಿ ಯೋಜನೆಗಳು' ಕುರಿತ ಬಳ್ಳಾರಿ ಜಿಲ್ಲೆಯ ಕಿರು ಹೊತ್ತಿಗೆಯನ್ನು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಝಡ್ ಜಮೀರ್ ಅಹಮದ್ ಖಾನ್ ಅವರು ಬೆಂಗಳೂರಿನ ಸಚಿವರ ಕಚೇರಿಯಲ್ಲಿ ಬಿಡುಗಡೆ ಮಾಡಿದರು.



ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮಿ ??, ಗೃಹಜ್ಯೋತಿ, ಶಕ್ತಿ ಹಾಗೂ ಯುವನಿಧಿ ಯೋಜನೆಗಳು ರಾಜ್ಯದಲ್ಲಿ ಅಭೂತಪೂರ್ವ ಯಶಸ್ಸು ಕಂಡಿದ್ದು, ಯೋಜನೆಗಳು ಸರ್ವರಿಗೂ ಸಮಪಾಲು, ಸಾಮಾಜಿಕ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ರಾಜ್ಯದ ಪ್ರತಿ ವರ್ಗಕ್ಕೂ ತಲುಪುತ್ತಿವೆ. ರಾಜ್ಯದ ಪ್ರತಿಯೊಬ್ಬ ಪ್ರಜೆಯೂ ಒಂದಲ್ಲ ಒಂದು ರೀತಿಯಲ್ಲಿ ಗ್ಯಾರಂಟಿ ಯೋಜನೆಗಳ ಫಲಾನುಭವಿಯಾಗಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಸರ್ಕಾರವು ದೀನ ದಲಿತರ ಹಾಗೂ ಬಡವರ ಶ್ರೇಯೋಭಿವೃದ್ಧಿಗಾಗಿ ನಿರಂತರ ಶ್ರಮಿಸುತ್ತಿದ್ದು, ಚುನಾವಣೆಗೂ ಮುನ್ನ ನೀಡಿದ್ದ ಭರವಸೆಗಳನ್ನು ಈಡೇರಿಸುವುದರೊಂದಿಗೆ ನಮ್ಮದು ನುಡಿದಂತೆ ನಡೆದ ಸರ್ಕಾರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಝಡ್ ಜಮೀರ್ ಅಹಮದ್ ಖಾನ್ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ಪಂಚಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮಿ ??, ಗೃಹಜ್ಯೋತಿ, ಶಕ್ತಿ ಹಾಗೂ ಯುವನಿಧಿ ಯೋಜನೆಗಳ ಫಲಾನುಭವಿಗಳು,ಯೋಜನೆಗಳಿಂದ ತಮಗೆ ಆದ ಅನುಕೂಲ ಹಾಗೂ ಬದುಕಿಗೆ ನೆರವಾದ ಕುರಿತಂತೆ ಅನಿಸಿಕೆಗಳನ್ನು ವ್ಯಕ್ತಪಡಿಸಿದ್ದು,ಫಲಾನುಭವಿಗಳ ಅನಿಸಿಕೆಗಳು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಸಂದೇಶವನ್ನು "ಭರವಸೆಯ ಬೆಳಕು- ಪಂಚ ಗ್ಯಾರಂಟಿ ಯೋಜನೆಗಳು' ಕಿರುಹೊತ್ತಿಗೆ ಒಳಗೊಂಡಿದೆ.


ಈ ವೇಳೆ ಸಚಿವರ ಆಪ್ತ ಕಾರ್ಯದರ್ಶಿ ಸರ್ಫಾರಾಜ್ ಖಾನ್, ಸಚಿವರ ಮಾಧ್ಯಮ ಸಲಹೆಗಾರ ಎಸ್.ಲಕ್ಷ್ಮಿ ??ೀ ನಾರಾಯಣ ಉಪಸ್ಥಿತರಿದ್ದರು.

## ಸಚಿವರಾದ ಎನ್.

## ಎಸ್.ಭೋಸರಾಜು ಅವರ ಪ್ರವಾಸ

ರಾಯಚೂರು ಮಾ.28 : ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್.ಭೋಸರಾಜು ಅವರು ಮಾರ್ಚ 29ರಿಂದ ಮಾರ್ಚ 31ರವರೆಗೆ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿ-ದ್ದಾರೆ.ಮಾ.29ರಂದು ಬೆಳಗ್ಗೆ 10 ಗಂಟೆಗೆ ರಾಯಚೂರ ಜಿಲ್ಲೆಯಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು. ಸಂಜೆ 5.30ಕ್ಕೆ ಮಾರುತಿ ನಗರದಲ್ಲಿ ನಡೆಯುವ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಭಾಗವಹಿಸುವರು.

## 30 ರಂದು ಪೂರ್ವಭಾವಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಸೇಡಂ.ಮಾ. 28:ತಾಲೂಕಿನ ಸಜ್ಜನಶೆಟ್ಟಿಕಲ್ಯಾಣಮಂಟಪಪದಲ್ಲಿ ಬಸವಜಯಂತಿಯ ಪ್ರಯುಕ್ತ ದಿ. 30-03-2025 ರ ಸಂಜೆ 6.30 ಕ್ಕೆ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಈ ಸಭೆಗೆ ಸಮಾಜದ ಎಲ್ಲಾ ಬಾಂಧವರು ಬರಬೇಕೆಂದು ರಾಜಶೇಖರ್ ನೀಲಂಗಿ ಅಧ್ಯಕ್ಷರು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಸೇಡಂ ತಾಲೂಕು ಘಟಕ ರವರು ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ

## ಮಹಿಳೆಯರು ಸ್ವಾವಲಂಬಿ ಜೀವನ ಹೊಂದಬೇಕು: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.28:ಮಹಿಳೆಯರು ಸ್ವ-ಸಹಾಯ ಗುಂಪುಗಳ ಮೂಲಕ ಕಿರು ಉದ್ಯಮಗಳನ್ನು ಆರಂಭಿಸಿ ಸ್ವಾವಲಂಬಿ ಜೀವನ ಕಟ್ಟಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ ಮತ್ತು ಲಿಂಗತ್ವ ಪರಿವರ್ತಾನ ಅಭಿಯಾನ ಅಂಗವಾಗಿ ನಗರದ ಜಿಪಂ ನ ನಜೀರ್ ಸಾಬ್ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರವು ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಿದೆ.



ಸರ್ಕಾರದಿಂದ ದೊರೆಯುವ ಸೌಲಭ್ಯಗಳ ಸದುಪಯೋಗ ಪಡೆದುಕೊಂಡು ಅಭಿವೃದ್ಧಿ ಹೊಂದಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಮಾತನಾಡಿ, 2025-26 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಸಮುದಾಯಿತ ಕಾಮಗಾರಿಗಳು ಪ್ರಾರಂಭ ಆಗುತ್ತಿದ್ದು, ಉದ್ಯೋಗ ಚೀಟಿ ಹೊಂದಿದ ಕುಟುಂಬಗಳು ಮತ್ತು ವಿಶೇಷವಾಗಿ ಮಹಿಳೆಯರು ಬೇರೆ ಕಡೆ ಪಟ್ಟಣ, ನಗರ ಪ್ರದೇಶಗಳಿಗೆ ವಲಸೆ ಹೋಗದೆ ನಿಮ್ಮ ಗ್ರಾಮದಲ್ಲೇ ಪ್ರತಿ ಕುಟುಂಬವು 100 ದಿನಗಳ ವರೆಗೆ ನರೇಗಾ ಕೆಲಸದಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಮಾತನಾಡಿ, ಮಹಿಳೆಯರು ಎಲ್ಲಾ ಕ್ಷೇತ್ರದಲ್ಲಿ ತೊಡಗಿದ್ದಾರೆ. ಸಾಧಿಸುವ ಛಲ ಹೊಂದಬೇಕು. ಯಾವುದೇ ಸಮಯದಲ್ಲಿ ಆತ್ಮಸ್ಥೈರ್ಯ ಕಳೆದುಕೊಳ್ಳಬಾರದು ಎಂದು ಸಲಹೆ ನೀಡಿದರು.

ಬಳಿಕ ಆಯುಷ್ ಇಲಾಖೆ ವೈದ್ಯರಾದ ಡಾ.ಮುಕ್ಕಣ್ಣ ಅವರು ಮಹಿಳೆಯರ ಆರೋಗ್ಯ, ಶುಚಿತ್ವ ಮತ್ತು ನೈರ್ಮಲ್ಯ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ ರಚಿಸಿ ಉತ್ತಮ ಮತ್ತು ವಿಶೇಷವಾಗಿ ಕೆಲಸ ನಿರ್ವಹಿಸುತ್ತಿರುವ ವಿವಿಧ ತಾಲ್ಲೂಕುಗಳಿಗೆ ಮೂರು ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟಗಳು ಮತ್ತು ಮೂರು ಸ್ವ ಸಹಾಯ ಗುಂಪುಗಳಿಗೆ ಅವರು ನಿರ್ವಹಿಸುತ್ತಿರುವ ವಿವಿಧ ಚಟುವಟಿಕೆ, ಪ್ರಗತಿ ಸಾಧಿಸಿದ ಆಧಾರದ ಮೇರೆಗೆ ಪುರಸ್ಕಾರ, ಪ್ರಮಾಣ ಪತ್ರ ಮತ್ತು ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಸಂಡೂರು ತಾಲ್ಲೂಕಿನ ದ-ರೋಜಿ ಗ್ರಾಮದ ಅಕ್ಕಮಹಾದೇವಿ ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ- ಪ್ರಥಮ ಸ್ಥಾನ.

ಕಂಪ್ಲಿ ತಾಲ್ಲೂಕಿನ ಮೆಟ್ರಿ ಗ್ರಾಮದ ಮೆಟ್ರಿ ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ- ದ್ವಿತೀಯ ಸ್ಥಾನ.

ಕುರುಗೋಡು ತಾಲ್ಲೂಕಿನ ಸೋಮಸಮುದ್ರ ಗ್ರಾಮದ ಕೊಟ್ಟೂರೇಶ್ವರ ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ- ತೃತೀಯ ಸ್ಥಾನ.

ಆಯುಷ್ ಇಲಾಖೆಯ ವೈದ್ಯರಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವೈ.ಪರಿಮಳ, ಉಪಕಾರ್ಯದರ್ಶಿ ಗಿರಿಜಾ ಶಂಕರ್, ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ಯೋಜನಾ ನಿರ್ದೇಶಕ ವಿನೋದ್ ಕುಮಾರ್, ಸಹಾಯಕ ನಿರ್ದೇಶಕ ಬಸವರಾಜ್ ಹಿರೇಮಠ್, ಕುರುಗೋಡು ತಾಪಂ ಇಒ ನಿರ್ಮಲಾ, ಸಂಡೂರು ತಾಪಂ ಇಒ ರೇಣುಕಾಚಾರ್ಯ, ಬಿಸಿಊಟ ಯೋಜನೆ ಇಒ ಕಸ್ತೂರಿ, ಎನ್‌ಆರ್‌ಎಲ್‌ಎಂ ಯೋಜನೆಯ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಾಜೇಂದ್ರ.ಎಂ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಿಬ್ಬಂದಿಗಳು, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟದ ಮಹಿಳೆಯರು, ಸ್ವ ಸಹಾಯ ಗುಂಪಿನ ಮಹಿಳೆಯರು, ವಿವಿಧ ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಿದ್ದರು.

# ಸಮಾಜಕ್ಕೆ ಮಹಿಳೆ ಕೊಡುಗೆ ಅನನ್ಯ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 28 : ನಾಗರಿಕಸಮಾಜಕ್ಕೆಮಹಿಳೆಯ ಕೊಡುಗೆ ಅನನ್ಯವಾಗಿದೆ ಎಂದು ಶೈನಿ ಪ್ರದೀಪ್ ಗುಂಟಿ ಹೇಳಿದರು.

ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ ವತಿಯಿಂದ ನಗರದ ಐ.ಎಂ.ಎ. ಹಾಲ್‌ನಲ್ಲಿ ಈಚೆಗೆ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಎಲ್ಲ ಕ್ಷೇತ್ರಗಳಿಗೂ ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಮಹಿಳೆ ಹಲವು ಜವಾಬ್ದಾರಿಗಳನ್ನು ತಾಳ್ಮೆಯಿಂದ ನಿಭಾಯಿಸುತ್ತಾಳೆ. ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸುತ್ತಾಳೆ ಎಂದು ಹಳ್ಳದಕೇರಿಯ ಕೃಷಿ ಸಂಶೋಧನಾ ಕೇಂದ್ರದ ಡಾ. ಕೆ. ಭವಾನಿ ಹೇಳಿದರು.

ಮಹಿಳೆಯರಲ್ಲಿ ಕಂಡುಬರುವ ವಿವಿಧ ಬಗೆಯ ಕ್ಯಾನ್ಸರ್‌ಗಳಿಗೆ ಕಾರಣವಾಗುವ ಅಂಶಗಳು ಹಾಗೂ ತಡೆಗಟ್ಟುವ ವಿಧಾನಗಳ ಕುರಿತು ಡಾ. ಆರತಿ ರಘು, ಮಕ್ಕಳ ಆರೋಗ್ಯಪೂರ್ಣ ಬೆಳವಣಿಗೆ ಕುರಿತು ಬ್ರಿಮ್ಸ್‌ನ ಮಕ್ಕಳ ವಿಭಾಗದ ಮುಖ್ಯಸ್ಥೆ ಡಾ. ಶಾಂತಲಾ ಆರ್. ಕೌಜಲಗಿ ಮಾತನಾಡಿದರು.

25 ಮಂದಿ ಆಶಾ, ಅಂಗನವಾಡಿ ಕಾಯಕರ್ತೆಯರು ಹಾಗೂ ನರ್ಸ್‌ಗಳನ್ನು ಸನ್ಮಾನಿಸಲಾಯಿತು. ನೀಲಾಂಬಿಕೆ ಶಿವಕುಮಾರ ಪಾಖಾಲ್ ಅಧ್ಯಕ್ಷತೆ ವಹಿಸಿದ್ದರು.

ಇನ್ನರ್ ವ್ಹೀಲ್ ಜಿಲ್ಲೆ 316 ಕಾರ್ಯದರ್ಶಿ ಮಂಜುಳಾ ಆರ್. ಮೂಲಗೆ, ಕೀರ್ತಿ ಎಸ್. ರಾಮಶೆಟ್ಟಿ, ರೋಟರಿ ಕ್ಲಬ್ ಬೀದರ್ ಕ್ವೀನ್ ಅಧ್ಯಕ್ಷೆ ಜಯಶ್ರೀ ಪ್ರಭಾ, ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಕವಿತಾ ಪ್ರಭಾ, ರೋಟರಿ ಕಲ್ಯಾಣ ಝೋನ್ ಸಹಾಯಕ ಗವರ್ನರ್ ಸೂರ್ಯಕಾಂತ ರಾಮಶೆಟ್ಟಿ, ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ ಅಧ್ಯಕ್ಷ ಶಿವಕುಮಾರ ಪಾಖಾಲ್, ಕಾರ್ಯದರ್ಶಿ ಪ್ರಭು ತಟ್ಟಪಟ್ಟಿ, ಡಾ. ಶಾರದಾ ಗುದಗೆ, ರೂಪಾ ಕರ್ಪೂರ, ಡಾ. ವಿನಯಕುಮಾರ ಬಿಯಾನಿ, ಕಾಮಶೆಟ್ಟಿ ಚಿಕ್ಕಬಸೆ, ರಾಹುಲ್ ಅಟ್ಟಲ್, ಸಂತೋಷಕುಮಾರ ಸ್ವಾಮಿ, ನಿತಿನ್ ಕರ್ಪೂರ, ಡಾ. ರಿತೇಶ್ ಸುಲೆಗಾಂವ್, ಚೇತನ್ ಮೇಗೂರ್ ಮತ್ತಿತರರು ಇದ್ದರು.

ಡಾ. ನಿತೇಶ ಬಿರಾದಾರ, ಡಾ. ನಾಗೇಶ ಪಾಟೀಲ ನಿರೂಪಿಸಿದರು. ಅನುರಾಧಾ ತಟ್ಟಪಟ್ಟಿ ವಂದಿಸಿದರು.

# ಜಿಎನ್‌ಡಿ ಮತ್ತು ಐಎಸ್‌ಎಸಿ-ಇಂಡಿಯಾ ನಡುವಿನ ಒಪ್ಪಂದ ನಿರ್ಣಾಯಕ ಹೆಜ್ಜೆ : ಎಸ್.ಪಿ. ಪ್ರದೀಪ್ ಗುಂಟಿ





ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 28 : ಗುರು ನಾನಕ ದೇವ್ ಇಂಜಿನೀಯರಿಂಗ್ ಕಾಲೇಜಿನ ಸಭಾಂಗಣದಲ್ಲಿ ನಡೆದ ಒಂದು ಐತಿಹಾಸಿಕ ಸಮಾರಂಭದಲ್ಲಿ, ಇನ್ಫಾರ್ಮೇಶನ್ ಶೇರಿಂಗ್ ಅನಾಲಿಸಿಸ್ ಸೆಂಟರ್ ಇಂಡಿಯಾ ಜೊತೆ ಗುರು ನಾನಕ ದೇವ್ ಇಂಜಿನೀಯರಿಂಗ್ ಕಾಲೇಜ್ ಎಂ.ಓ.ಯು.ಗೆ ಸಹಿ ಹಾಕಿ ಒಪ್ಪಂದ ಮಾಡಿಕೊಳ್ಳಾಲಾಗಿದೆ.

ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಪ್ರದೀಪ್ ಗುಂಟಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡುತ್ತ ಜಿಎನ್‌ಡಿ ಮತ್ತು ಐಎಸ್‌ಎಸಿ-ಇಡಿಯಾ ನಡುವೆ ಒಪ್ಪಂದ ಮಾಡಿಕೊಂಡಿರುವುದು ಶ್ಲಾಘನೀಯ. ಸೈಬರ್ ಭದ್ರತಾ ಶಿಕ್ಷಣ ಮತ್ತು ಪರಿಣತಿ, ವಿಮರ್ಶಾತ್ಮಕ ಮೂಲ ಸೌಕರ್ಯ ರಚನೆ ಮತ್ತು ಸೂಕ್ಷ್ಮ ಮಾಹಿತಿಯನ್ನು ರಕ್ಷಿಸಲು ಇದೊಂದು ಮಹತ್ವಪೂರ್ಣ ಹೆಜ್ಜೆಯಾಗಿದೆ ಎಂದು ವಿವರಿಸಿದರು. ಐಎಸ್‌ಎಸಿ-ಇಂಡಿಯಾದ ನಿರ್ದೇಶಕ ಗ್ರೂಪ್ ಕ್ಯಾಪ್ಟನ್ ಪಿ.ಸಿ ನಾಯ್ಡು ಅವರು ಮಾತನಾಡುತ್ತ ಈ ಒಪ್ಪಂದಕ್ಕಾಗಿ ಉತ್ಸಾಹವನ್ನು ವ್ಯಕ್ತಪಡಿಸುತ್ತ ಇದು ಪರಿಣತಿ ಮತ್ತು ಉತ್ತಮ ಅಭ್ಯಾಸಗಳ ವಿನಿಮಿಯವನ್ನು ಸುಗಮಗೊಳಿಸುತ್ತದೆ ಮತ್ತು ಅಂತಿಮವಾಗಿ ಭಾರತದ ಸೈಬರ್ ಸಾಮರ್ಥ್ಯಗಳನ್ನು ಬಲಪಡಿಸುತ್ತದೆ ಎಂದು ಹೇಳಿದರು. ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ ಅವರು ಮಾತನಾಡುತ್ತ ಕಲ್ಯಾಣ ಕರ್ನಾಟಕದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಈ ಒಪ್ಪಂದವನ್ನು ಮಾಡಿಕೊಳ್ಳಲಾಗಿದೆ. ಇದರಿಂದ ಆಗುವ ಸೌಲಭ್ಯಗಳನ್ನು ವಿವರಿಸುತ್ತ ವಿದ್ಯಾರ್ಥಿಗಳಿಗೆ ಸೈಬರ್ ಸಕ್ಯೂರಿಟಿ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸಲು ತಿಳುವಳಿಕೆ ಪತ್ರಕ್ಕೆ ಸಹಿ ಹಾಕಲಾಗಿದೆ. ಜ್ಞಾನ ಹಂಚಿಕೆ ತರಬೇತಿ ಕಾರ್ಯಕ್ರಮಗಳು, ಶಂಶೋಧನೆ ಮತ್ತು ಅಭಿವೃದ್ಧಿ ವಿದ್ಯಾರ್ಥಿಗಳಿಗೆ ವಿಶೇಷವಾಗಿ ಸೈಬರ್ ಸಕ್ಯೂರಿಟಿ ವಿಭಾಗದ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಅವಕಾಶಗಳು ಕಲ್ಪಿಸಲಾಗುವುದು ಎಂದು ನುಡಿದರು.

ಈ ಸಂದರ್ಭದಲ್ಲಿ ಮೂರನೇ ಸೆಮಿಸ್ಟರ್‌ನ ವಿದ್ಯಾರ್ಥಿಗಳು ವಿಶ್ವವಿದ್ಯಾಲಯಕ್ಕೆ ಟಾಪರ್ ಆಗಿ ಹೊರಹೊಮ್ಮಿದ್ದು, ಮತ್ತು ಜಿಲ್ಲೆಗೆ ಕೀರ್ತಿ ತಂದಿಕ್ಕಾಗಿ ಕಾಲೇಜಿನಲ್ಲಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಡಿವೈಎಸ್‌ಪಿ ಶ್ರೀ ಎಸ್.ಎಂ. ಸನ್ನಿಧಿ, ಪಿಯು ಕಾಲೇಜಿನ್ ನಿರ್ದೇಶಕಿ ಶ್ರೀಮತಿ ಜಸ್ಮಿನೀತ ಕೌರ್, ಪ್ರಾಂಶುಪಾಲರಾದ ಡಾ. ಎಂ ಧನಂಜಯ್, ಡಾ.ಹರೀಷ್ ಜೋಶಿ ಮತ್ತು ಕಾಲೇಜಿನ ನಿರ್ವಾಹಕ ಆರ್.ಡಿ.ಸಿಂಗ್ ಉಪಸ್ಥಿತರಿದ್ದರು.

# ಕಾನೂನು ಅರಿವಿನಿಂದ ಸಾಮಾಜಿಕ ನ್ಯಾಯ ಸಾಧ್ಯ: ಶಿವರಾಜ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 28 : ಇಂದಿನ ಯುವಜನರು ಕೇವ ವೈಬವಿಕರಣ ಹಾಗೂ ಅರ್ಥವಿಲ್ಲದ ಚಟುವಟಿಕೆಗಳಿಗೆ ಮಾರು ಹೋಗಿ ನೈಜ ಅಧ್ಯಯನದಿಂದ ವಿಮುಖರಾಗುತ್ತಿರುವರು. ಸಾಮಾಜಿಕ ನ್ಯಾಯ ಗಿಟ್ಟಿಸಲು ಯುವಜನರು ಕಾನೂನು ಅಧ್ಯಯನ ಮಾಡುವಂತೆ ಜಿಲ್ಲಾ ಸೆಶೆನ್ಸ್ ನ್ಯಾಯಾಲಯದ ರಕ್ಷಣಾ ಕಾನೂನು ನೆರವು ಸಲಹೆಗಾರ ಶಿವರಾಜ ಪಾಟೀಲ ಹೇಳಿದರು.

ನಗರದ ಮಿಲಿನಿಯಮ್ ಗ್ರೂಪ್ ಆಫ್ ಇನ್ಸಿಟ್ಯುಷನ್ ಅವರಣದಲ್ಲಿ ನೆಹರು ಯುವ ಕೇಂದ್ರ ಸಂಘಟನೆ ಹಾಗೂ ರೈಜಿಂಗ್ ಹ್ಯಾಂಡ್ಸ್ ಯುತ್ ನಗರ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಗಳ ಸಹಯೋಗದಲ್ಲಿ ವಿಶ್ವ ಸಾಮಾಜಿಕ ನ್ಯಾಯ ದಿನಾಚರಣೆ ಉದ್ಘಾಟಿಸಿ ಮತನಾಡಿದ ಅವರು, ಕಾನೂನು ಅರಿವಿದ್ದರೆ ಮನುಷ್ಯ ತಪ್ಪು ಮಾಡಲಾರ. ಇತರರಿಗೂ ತಿಳುವಳಿಕೆ ನೀಡಬಹುದು. ಹಾಗಾಗಿ ಯುವಜನರು ಈ ದೇಶದ ಜವಾಬ್ದಾರ ನಾಗರಿಕನಾಗಿ ಬದುಕಲು ಪ್ರತಿಯೊಂದು ಕಾನೂನು ಅಧ್ಯಯನ ಮಾಡೆಬೇಕು ಹಾಗೂ ಕಾನೂನು ಅರಿವು ಹಾಗೂ ನೆರವಿನ ವಿಚಾರ ಸಂಕಿರಣ ಆಯೋಜಿಸುವಂತೆ ಕರೆ ಕೊಟ್ಟರು.

ಬಾಪು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ಕಾಶಿನಾಥ ಪಾಟೀಲ ಮಾತನಾಡಿ, ಎಲ್ಲಿ ಕಾನೂನು ಇರುತ್ತದೆಯೊ ಅಲ್ಲಿ ನಿಯಮ ಪಾಲಿಸಲು ಸಾಧ್ಯವಾಗುತ್ತದೆ. ಕಾನೂನಾತ್ಮಕ ಶಿಕ್ಷಣ ಅಗತ್ಯವಾಗಿದ್ದು, ಯುವಜನರು ಸದಾ ಅಧ್ಯಯನಶೀಲರಾಗುವಂತೆ ಕರೆ ಕೊಟ್ಟರು.

ದಿಶಾ ಗ್ರುಪ್ ಆಫ್ ಸಂಸ್ಥೆಯ ಕಾರ್ಯದರ್ಶಿ ಅಭಿಷಕ. ಆರ್ ಮಾತನಾಡಿ, ಮನುಷ್ಯನಿಗೆ ನಿತ್ಯ ದುರ್ಘಟನೆ ಸಂಭವಿಸಿದಾಗ ಕಾನೂನು ನೆರವಿನ ಅಗತ್ಯವಿರುತ್ತದೆ. ಕಾನುನು ತಿಳುವಳಿಕೆ ಇದ್ದರೆ ಯಾರು ಸಹ ಜೀವನದಲ್ಲಿ ತಪ್ಪು ಮಾಡಲಾರರು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ರೈಜಿಂಗ್ ಹ್ಯಾಂಡ್ಸ್ ಯುತ್ ನಗರ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ಸತೀಶ ಬೆಳಕೋಟೆ ಮಾತನಾಡಿ, ಪ್ರಜಾಪ್ರಭುತ್ವದ ಪ್ರಮುಖ ಅಂಗಗಳಾದ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗಗಳಲ್ಲಿ ನ್ಯಾಯಾಂಗದ ಪಾತ್ರ ಪ್ರಮುಖವಾಗಿದೆ. ಪ್ರಧಾನಿಯಿಂದ ಹಿಡಿದಿ ಸಾಮಾನ್ಯ ಪ್ರಜೆ ವರೆಗೆ ಎಲ್ಲರಿಗೂ ಕಾನೂನಿನ ಚೌಕಟ್ಟಿನಲ್ಲಿ ಸಮಾನವಾಗಿ ನೋಡುವುದು ನ್ಯಾಯಾಂಗದ ಜವಾಬ್ದಾರಿ. ಹಾಗಾಗಿ ನ್ಯಾಯಾಂಗದ ಅಡಿಯಲ್ಲಿ ಬರುವ ಎಲ್ಲ ಆರ್ಟಿಕಲ್‌ಗಳ ತಿಳುವಳಿಕೆ ಯುವ ಜನಂಗಕ್ಕೆ ಅಗತ್ಯವಾಗಿದೆ ಎಂದರು.

ಮಿಲಿಯಮ್ ಗ್ರುಪ್ ಆಫ್ ಇನ್ಸಿಟ್ಯುಷನ್ ಮುಖ್ಯಸ್ಥ ಶಶಿಕಾಂತ ಪಂತ್, ಮುಖ್ಯ ಅಡಳಿತಾಧಿಕಾರಿ ಶ್ರೀಕಂತ ಮೂಲಗೆ, ನಿವೃತ್ತ ಬ್ಯಾಂಕ್ ವ್ಯವಸ್ಥಾಪಕ ಆರ್.ಎಸ್ ಬಿರಾದಾರ ಹಾಗೂ ಇತರರರು ಕಾರ್ಯಕ್ರಮದಲ್ಲಿದ್ದರು.

ಅದಿತ್ಯ ಪಾಟೀಲ ಕಾರ್ಯಕ್ರಮ ನಿರೂಪಿಸಿ, ಸಾಯಿದೀಪ ವಂದನೆ ಸಲ್ಲಿಸಿದರು.

# ಸದಸ್ಯತ್ವ ನೋಂದಣಿಗೆ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಆದ್ಯತೆ ನೀಡಬೇಕು: ಬಂಡೆಪ್ಪ ಖಾಶೆಂಪುರ್



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಮಾ.28:ಜೆಡಿಎಸ್ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನವು ರಾಜ್ಯಾದ್ಯಂತ ಯಶಸ್ವಿಯಾಗಿ ನಡೆಯುತ್ತಿದ್ದು, ಬೀದರ್ ಜಿಲ್ಲೆಯ ಮುಖಂಡರು, ಕಾರ್ಯಕರ್ತರು ಕೂಡ ಸದಸ್ಯತ್ವ ನೋಂದಣಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಕರೆ ನೀಡಿದರು. ಜೆಡಿಎಸ್ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನ, ಜಿಲ್ಲಾ ಪಂಚಾಯತಿ, ತಾಲೂಕು ಪಂಚಾಯತಿ, ಸ್ಥಳೀಯ ಸಂಸ್ಥೆಗಳ ಚುನಾವಣೆ ಸೇರಿದಂತೆ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಜಿಲ್ಲೆಯ ಪಕ್ಷದ ಪ್ರಮುಖರೊಂದಿಗೆ ಬೀದರ್ ನಗರದಲ್ಲಿರುವ ತಮ್ಮ ನಿವಾಸದಲ್ಲಿ ಶುಕ್ರವಾರ ಸಭೆ ನಡೆಸಿ ಮಾತನಾಡಿದ ಅವರು, ಪಕ್ಷದ ಮುಖಂಡರು, ಕಾರ್ಯಕರ್ತರೆಲ್ಲರೂ ಸೇರಿ ಪಕ್ಷ ಸಂಘಟನೆಗೆ ಶ್ರಮಿಸಬೇಕು ಎಂದರು. ನಾವು ಪ್ರತಿ ವಿಧಾನಸಭಾ ಕ್ಷೇತ್ರದ ಪ್ರತಿ ಹಳ್ಳಿಗಳಿಗೆ ತೆರಳಿ ಸದಸ್ಯತ್ವ ನೋಂದಣಿ ಮಾಡಿಸುವ ಕೆಲಸ ಮಾಡಬೇಕಾಗಿದೆ. ಹಳ್ಳಿಗಳಲ್ಲಿ ನಮ್ಮ ಜೆಡಿಎಸ್ ಪಕ್ಷಕ್ಕೆ ಹೆಚ್ಚಿನ ಮಹತ್ವವಿದೆ. ಜಿಲ್ಲಾ ಪಂಚಾಯತಿ, ತಾಲೂಕು ಪಂಚಾಯತಿ ಚುನಾವಣೆಗಳು ಶೀಘ್ರವಾಗಿ ಬರಲಿವೆ. ಆ ನಿಟ್ಟಿನಲ್ಲಿ ಕೆಲಸ ಮಾಡಬೇಕಾಗಿದೆ.

ಸದಸ್ಯತ್ವ ನೋಂದಣಿ ವಿಷಯದಲ್ಲಿ ಬೀದರ್ ಜಿಲ್ಲೆಯ ಜೆಡಿಎಸ್ ಮುಖಂಡರು, ಕಾರ್ಯಕರ್ತರು ಯಾವಾಗಲೂ ಮುಂದೆ ಇದ್ದಾರೆ. ಈ ಹಿಂದೆ ರಾಜ್ಯದಲ್ಲಿಯೇ ಹೆಚ್ಚಿನ ಸದಸ್ಯತ್ವ ನೋಂದಣಿ ಬೀದರ್ ಜಿಲ್ಲೆಯಿಂದ ಆಗಿತ್ತು. ಅದನ್ನು ಮರುಕಳಿಸುವ ಕೆಲಸವನ್ನು ಈ ಬಾರಿ ಕೂಡ ಎಲ್ಲರೂ ಸೇರಿ ಮಾಡಬೇಕು ಎಂದು ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು ತಿಳಿಸಿದರು.

ಈ ವೇಳೆ ಸದಸ್ಯತ್ವ ನೋಂದಣಿ ಪುಸ್ತಕ ಬಿಡುಗಡೆ ಮಾಡಲಾಯಿತು ಹಾಗೂ ಪಕ್ಷದ ತಾಲೂಕು ಚುನಾವಣೆ ಅಧಿಕಾರಿಗಳು ಹಾಗೂ ತಾಲೂಕು ಸಹಾಯಕ ಚುನಾವಣೆ ಅಧಿಕಾರಿಗಳಾಗಿ ನೇಮಕಗೊಂಡ ಅನೇಕರಿಗೆ ಆದೇಶ ಪತ್ರ ನೀಡಲಾಯಿತು.

ಸಭೆಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ರಮೇಶ್ ಪಾಟೀಲ್ ಸೋಲ್ಪೂರ್, ಪ್ರಮುಖರಾದ ಅಶೋಕ್ ಕೊಡ್ಗೆ, ಏಲಿಂಜಾನ್ ಮಠಪತಿ, ಸಿದ್ರಾಮಪ್ಪ ವಂಕ್ಕೆ, ರಾಜಶೇಖರ ಜವಳೆ, ಸುರೇಶ್ ಸಿಗಿ, ಶಿವಪುತ್ರ ಮಾಳ್ಗೆ, ಶಬ್ಬೀರ್ ಪಾಷ, ಆಕಾಶ್ ಖಂಡಾಳೆ, ಬಸವರಾಜ ಪಾಟೀಲ್ ಹಾರೋಗೇರಿ, ಮಲ್ಲಿಕಾರ್ಜುನ ನೆಳ್ಗೆ, ಗೌತಮ್ ಸಾಗರ್, ಲಲಿತಾ ಕರಂಜೆ, ಬೊಮ್ಮಗೊಂಡ ಚಿಟ್ಟಾವಾಡಿ, ಜಾಪೇಡ್ ಕಡ್ಯಾಳ, ಅಭಿ ಕಾಳೆ, ಸಂಗಮ್ಮ ಪಾಟೀಲ್, ಬಸವರಾಜ ಶಾಹಪೂರೆ, ರವಿ ಸಿರ್ಸಿ ಸೇರಿದಂತೆ ಜೆಡಿಎಸ್ ಪಕ್ಷದ ರಾಜ್ಯ, ಜಿಲ್ಲೆ, ತಾಲೂಕು ಘಟಕಗಳ ಪ್ರಮುಖರು, ಮುಖಂಡರು ಇದ್ದರು.

# ಶ್ರೀ ರೇಣುಕಾಚಾರ್ಯ ಜಯಂತಿ-ಜಾಗೃತಿ ರಥಕ್ಕೆ ಸಚಿವ ಖಂಡ್ರೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ;ಮಾ.28:ಏ.29ರಂದು ನಡೆಯಲಿರುವ ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿ ಮಹೋತ್ಸವ ನಿಮಿತ್ತ ಆಯೋಜಿಸಿದ್ದ ರೇಣುಕಾ ಜಾಗೃತಿ ರಥಕ್ಕೆ ಸಚಿವ ಈಶ್ವರ ಖಂಡ್ರೆ ಚಾಲನೆ ನೀಡಿದರು. ಭಾಲ್ಕೇಶ್ವರ ಶಿಕ್ಷಣ ಸಂಸ್ಥೆಯ ಕೋಶಾಧ್ಯಕ್ಷ ಶಿವಶರಣಯ್ಯ ಸ್ವಾಮಿ, ಗುರಯ್ಯ ಸ್ವಾಮಿ, ಡಾ.ಪ್ರಭುಲಿಂಗ ಸ್ವಾಮಿ, ಮಹಾದೇವಸ್ವಾಮಿ, ಶಂಭುಲಿಂಗ ಸ್ವಾಮಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಜಯಂತಿ ನಾಳೆ:ಪಟ್ಟಣದ ಪುರಭವನದಲ್ಲಿ ನಾಳೆ ಮಾರ್ಚ 29 ರಂದು ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿ ಮಹೋತ್ಸವ ಸಮಾರಂಭ ನಡೆಯಲಿದೆ. ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿ ಮಹೋತ್ಸವನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸಲಿದ್ದಾರೆ. ವೀರಭದ್ರೇಶ್ವರ ದೇವಸ್ಥಾನದಿಂದ ಆರಂಭಗೊಳ್ಳುವ ಮೆರವಣಿಗೆಗೆ ಬೀದರ ಸಂಸದ ಸಾಗರ ಖಂಡ್ರೆ ಚಾಲನೆ ನೀಡಲಿದ್ದಾರೆ. ಮೆಹಕರದ ರಾಜೇಶ್ವರ ಶಿವಾಚಾರ್ಯರು, ಹುಡಗಿಯ ವೀರಪಾಕ್ಷ ಶಿವಾಚಾರ್ಯರು, ಮಹಾರಾಷ್ಟ್ರದ ವೀರಪಾಕ್ಷ ಶಿವಾಚಾರ್ಯ, ಖಟಕ ಚಿಂಚೋಳಿಯ ಬಸಲಿಂಗಸ್ವಾಮಿ, ಭಾತಂಬ್ರಾದ ಜಗದ್ಗುರು ನಿರಂಜನ ಮಹಾಸ್ವಾಮಿಗಳು, ಹಲಬರ್ಗಾದ ಹಾವಗಿಲಿಂಗೇಶ್ವರ ಸ್ವಾಮಿ, ಸಾಯಗಾಂವದ ಶ್ರೀಗಳು .ನಿರಗುಡಿಯ ಹವಾ ಮಲ್ಲಿನಾಥ ಮುತ್ಯ ಸೇರಿದಂತೆ ವಿವಿಧ ಮಠಧ ಪೂಜ್ಯರು, ಜಯಂತಿ ಮಹೋತ್ಸವ ಅಧ್ಯಕ್ಷ ಪಂಚಯ್ಯ ಸ್ವಾಮಿ ಬೋಳೆಗಾಂವ ಸೇರಿದಂತೆ ಸಮಾಜದ ಗಣ್ಯ ವ್ಯಕ್ತಿಗಳು ಉಪಸ್ಥಿತರಿರಲಿದ್ದಾರೆ.



ಕಮಲನಗರ:ವಕ್ಫ್ ತಿದ್ದುಪಡಿ ಮಸೂದೆ 2024ರ ವಿರುದ್ಧ ಕಪ್ಪು ತೋಳಿನ ಪಟ್ಟಿಯನ್ನು ಧರಿಸಿ ಕಮಲನಗರನಲ್ಲಿ ಮುಸ್ಲಿಮ ಮುಖಂಡರು ಪ್ರತಿಭಟನೆ ಮಾಡಿದರು. ಈ ಸಂದರ್ಭದಲ್ಲಿ ಹಫೀಜ್ ಉಸ್ಮಾನ್ ಇಮಾಮ, ಅಜ್ಹಾರ ಬಾಗವಾನ, ಜೈಟ್ಲೆಯ್ ಫಾರೂಕ್, ಮನಿಯರ್ ಅಹ್ಮದ್, ಬಾಗವಾನ, ಕಾಷ್ ಭಗವಾನ, ನಿಜಾಮ್ ಕ್ಯೂರೇಶಿ ಫೇರೋಜ್ ಬಾಗವಾನ, ರಜಾ ಬಾಗವಾನ, ಹಫೀಜ್ ಬಾಗವಾನ, ಶಫೀಕ್ ಮನಿಯರ್, ಇರ್ಫಾನ್ ಜಯ್ದ್ ತಂಬೋಲಿ ಸೇರಿದಂತೆ ಇನ್ನಿತರ ಇದ್ದರು.

# ಉತ್ಸಾಹದಿಂದ ಕಲಿಕೆಯನ್ನು ಆನಂದಿಸಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.28:ವಿದ್ಯಾರ್ಥಿಗಳು ಶ್ರದ್ಧೆ ಭಕ್ತಿಯಿಂದ ಓದಿನಲ್ಲಿ ತೊಡಗಿಸಿಕೊಂಡು ಶೈಕ್ಷಣಿಕ ಜೀವನವನ್ನು ಆನಂದಿಸಬೇಕು ಎಂದು ಅರುಣಾಚಲ ಪ್ರದೇಶದ ಗೃಹ ಇಲಾಖೆಯ ಕಾನೂನು ಸಲಹೆಗಾರ ಅಭಿಷೇಕ ಅಮರನಾಥ ತಳವಾಡೆ ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಗುರುವಾರ ಆಯೋಜಿಸಿದ್ದ ಗುರುಕುಲ ಸೌರಭ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಶೈಕ್ಷಣಿಕ ಅಭ್ಯಾಸಕ್ಕೆ ತಮ್ಮದೇ ಆದ ಯೋಜನೆ ರೂಪಿಸಿಕೊಂಡು ಅದರಂತೆ ಅಧ್ಯಯನ ಮಾಡಬೇಕು. ಯಾವುದಕ್ಕೆ ಒತ್ತಡಕ್ಕೆ ಒಳಗಾಗಬಾರದು. ಪ್ರತಿದಿನ ಒಂದಷ್ಟು ಸಮಯ ಧ್ಯಾನ ಮಾಡುವುದನ್ನು ರೂಢಿಸಿಕೊಳ್ಳಬೇಕು. ಇದು ಮನಸ್ಸಿನಲ್ಲಿನ ಒತ್ತಡ ಕಡಿಮೆ ಮಾಡಲು ಸಹಕಾರಿ ಆಗುತ್ತದೆ ಎಂದು ಕಿವಿಮಾತು ಹೇಳಿದರು.

ಶಿಸ್ತು, ಸಮಯ ಪ್ರಜ್ಞೆ ಬೆಳೆಸಿಕೊಳ್ಳಬೇಕು ವಿದ್ಯಾರ್ಥಿಗಳು ಓದಿನ ಜತೆಗೆ ಕ್ರೀಡೆ ಸೇರಿ ಇನ್ನಿತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಕಲಿಕೆಯಲ್ಲಿ ಹೆಚ್ಚಿನ ಆಸಕ್ತಿ ಬೆಳೆಯಲು ಸಾಧ್ಯವಾಗುತ್ತದೆ. ಶಿಕ್ಷಣ ಕೇವಲ ಅಂಕ ಗಳಿಕೆಗೆ ಸೀಮಿತ ಎಂದು ತಿಳಿಯಬಾರದು. ಶಿಕ್ಷಣ ನಮ್ಮ ಬದುಕುನ್ನು ರೂಪಿಸುತ್ತದೆ.

ವಿದ್ಯಾರ್ಥಿ ಜೀವನ ಮತ್ತೆ ಬರುವಂತಹದ್ದಲ್ಲ ಇರುವಷ್ಟು ದಿವಸ ಉತ್ಸಾಹದಿಂದ ಕಲಿಕೆಯನ್ನು ಆನಂದಿಸಬೇಕು ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಗ್ರಾಮೀಣ ಭಾಗದ ಪ್ರತಿಭೆಗಳಿಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಗುಣಾತ್ಮಕ ಶಿಕ್ಷಣ ಕಲ್ಪಿಸಿ ರಾಷ್ಟ್ರ ಮಟ್ಟಕ್ಕೆ ಪರಿಚಯಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಪ್ರಾಚಾರ್ಯ ಬಸವರಾಜ ಮೊಳಕೀರೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಮೋಹನ ರೆಡ್ಡಿ, ಶಿವಲಿಂಗ ಮೂಲಗೆ, ಪೃಥ್ವಿರಾಜ್ ಬೆಲ್ಲಾಳೆ ಇದ್ದರು.

ಶಿವಮಹಿಮಾ, ಭಾಗ್ಯಶ್ರೀ ವಚನ ಪ್ರಾರ್ಥನೆ ಗೀತೆ ನಡೆಸಿ ಕೊಟ್ಟರು. ಮಧುಕರ ಗಾಂವಕರ್ ನಿರೂಪಿಸಿದರು. ಉಪಪ್ರಾಚಾರ್ಯ ಸಿದ್ರಾಮ ಗೊಗ್ಗಾ ವಂದಿಸಿದರು.

ವಿದ್ಯಾರ್ಥಿಗಳು ಓದಿನ ಜತೆಗೆ ತಪ್ಪದೆ ಪತ್ರಿಕೆಗಳನ್ನು ಓದುವ ಹವ್ಯಾಸ ಬೆಳೆಸಿ ಕೊಳ್ಳಬೇಕು. ಇದರಿಂದ ಜಗತ್ತಿನ ಆಗು ಹೋಗುಗಳನ್ನು ತಿಳಿದು ಕೊಳ್ಳಲು ಸಹಕಾರಿ ಆಗುತ್ತದೆ.

– ಅಭಿಷೇಕ ತಳವಾಡೆ
ಕಾನೂನು ಸಲಹೆಗಾರರು
ಗೃಹ ಇಲಾಖೆ ಅರುಣಾಚಲ ಪ್ರದೇಶ

# ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.28:ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಖಾಯಂ ಸಂಚಾರಿ ಪೀಠ–ಕಲಬುರಗಿ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಹಾಗೂ ಶಾರದಾ ವಿವೇಕ ಮಹಿಳಾ ಪದವಿ ಮಹಾವಿದ್ಯಾಲಯ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಕಲಬುರಗಿ ಆಳಂದ ರಸ್ತೆಯ ಶಾರದಾ ವಿವೇಕ ಮಹಿಳಾ ಪದವಿ ಮಹಾವಿದ್ಯಾಲಯದಲ್ಲಿ ಶುಕ್ರವಾರ ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆಯನ್ನು ಹಮ್ಮಿಕೊಳ್ಳಲಾಯಿತು.

ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕಲಬುರಗಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ (ಪ್ರಭಾರಿ) ಅಧ್ಯಕ್ಷರಾದ ಲೋಕೇಶ ಎಂ. ಅವರು, ಗ್ರಾಹಕರ ದಿನನಿತ್ಯ ವಸ್ತುಗಳನ್ನು ಖರೀದಿಸಿದ ನಂತರ ಕಡ್ಡಾಯವಾಗಿ ರಸೀದಿ ಪಡೆಯಬೇಕು ಎಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ವಕೀಲರ ಸಂಘ ಅಧ್ಯಕ್ಷ ಗುಪ್ತಲಿಂಗ ಪಾಟೀಲ ಅವರು ಮಾತನಾಡಿ, ಗ್ರಾಹಕರು ದಿನನಿತ್ಯ ವಸ್ತುಗಳನ್ನು ಖರೀದಿಸಿದ ನಂತರ ಕಡ್ಡಾಯವಾಗಿ ರಸೀದಿ ಪಡೆಯಬೇಕು. ವಸ್ತುವಿನ ನ್ಯೂನ್ಯತೆ ಕಂಡುಬಂದಲ್ಲಿ ತಕ್ಷಣ ಗ್ರಾಹಕರ ಆಯೋಗಕ್ಕೆ ಬಂದು ದೂರು ನೀಡಬೇಕು ಎಂದರು. ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ವಕೀಲರು ಹಾಗೂ ಮಹಾತ್ಮ ಗಾಂಧೀಜಿ ಗ್ರಾಹಕರ ಹಿತರಕ್ಷಣಾ ವೇದಿಕೆಯ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಗ್ರಾಹಕರ ಪರಿಷತ್ತಿನ ಸದಸ್ಯರಾದ ವೈಜಿನಾಥ ಝುಳಕಿ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಗ್ರಾಹಕ ಹಿತರಕ್ಷಣಾ ಕಾನೂನಿನ ಅರಿವು ಅಗತ್ಯವಾಗಿದೆ. ಗ್ರಾಹಕರ ಕಾಯ್ದೆಯ ಬಗ್ಗೆ ಹಾಗೂ ಮತ್ತು ಜಿಲ್ಲಾ ಗ್ರಾಹಕರ ಆಯೋಗದಲ್ಲಿನ ಆದ ತೀರ್ಪುಗಳನ್ನು ಉದಾಹರಣೆಯೊಂದಿಗೆ ವಿವರಿಸಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕಲಬುರಗಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಸದಸ್ಯರು ಹಾಗೂ ಬೀದರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ (ಪ್ರಭಾರಿ) ಅಧ್ಯಕ್ಷ ತ್ರಿಯಂಬಕೇಶ್ವರ ಎಮ್ ಸ್ವಾಮಿ, ಕಲಬುರಗಿ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಸಹಾಯಕ ನಿರ್ದೇಶಕಿ ರೇಖಾ.ಟಿ., ಶಿರೆಸ್ತೇದಾರರಾದ ಅಲ್ಲಾಭಕ್ಷ, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಖಾಯಂ ಸಂಚಾರಿ ಪೀಠ–ಕಲಬುರಗಿ ಮತ್ತು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿಗಳಾದ ಮಲ್ಲಿಕಾರ್ಜುನ ಬಿ. ಒಡೆಯರ ಉಪಸ್ಥಿತರಿದ್ದರು. ಕಲಬುರಗಿ ಶಾರದಾ ವಿವೇಕ ಮಹಿಳಾ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಭಾಗಿರಥಿ.ಬಿ.ಕೆ. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ಈ ಕಾರ್ಯಕ್ರಮದಲ್ಲಿ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಖಾಯಂ ಸಂಚಾರಿ ಪೀಠ–ಕಲಬುರಗಿ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಲಬುರಗಿ ಮತ್ತು ಶಾರದಾ ವಿವೇಕ ಮಹಿಳಾ ಪದವಿ ಮಹಾವಿದ್ಯಾಲಯದ ಸಿಬ್ಬಂದಿಗಳು ಉಪಸ್ಥಿತರಿದ್ದರು. ರವಿ ಬಿರಾದಾರ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಆಡಳಿತ ಅಧಿಕಾರಿ ಹನುಮಂತ. ಕೆ ವಂದಿಸಿದರು.

# ಜಿಲ್ಲೆಯಲ್ಲಿ ಸಫಾಯಿ ಕರ್ಮಚಾರಿಗಳ ದುರುಪಯೋಗ ಕಂಡು ಬಂದಲ್ಲಿ ಎಫ್.ಐ.ಆರ್.



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ : ಮಾ. 28: ಜಿಲ್ಲೆಯಲ್ಲಿ ಸ್ವಚ್ಚತೆ ಕಾರ್ಯಕ್ಕಾಗಿ ಸಫಾಯಿ ಕರ್ಮಚಾರಿಗಳ ದುರ್ಬಳಕೆ ಕಂಡುಬಂದಲ್ಲಿ ಸಂಬಂಧಿತ ಸಂಸ್ಥೆ ಹಾಗೂ ಅಧಿಕಾರಿಗಳ ಮೇಲೆ (ಈಖಖ) ಎಫ್.ಐ.ಆರ್.ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಫೌ–ಜಿಯ ತರನ್ನುಮ್ ಅವರು ಎಚ್ಚರಿಕೆ ನೀಡಿದರು.

ಗುರುವಾರ ಅವರ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸಫಾಯಿ ಕರ್ಮಚಾರಿಗಳ ಕುರಿತು ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಮಾತನಾಡಿದ ಅವರು ಇತ್ತೀಚಿಗೆ ಜಿಲ್ಲೆಯಲ್ಲಿ ನಡೆದ ಖಾಸಗಿ ನೀರಿನ ಟ್ಯಾಂಕ್ ದುರ್ಘಟನೆ ಮರುಕಳಿಸದಂತೆ ಮುಂಜಾಗ್ರತೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಸಫಾಯಿ ಕರ್ಮಾಚಾರಿ ರಿಪೋರ್ಟ್ ಶೂನ್ಯವಿದ್ದರು ಸಹ ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಿ. 45 ದಿನಗಳ ಒಳಗೆ ಮಳೆಗಾಲಕ್ಕೆ ಅವಶ್ಯವಿರುವ ಕಾರ್ಯಗಳಿಗೆ ಸಂಬಂಧಿತ ಕಾರ್ಯಗಳನ್ನು ಮುಗಿಸಬೇಕು. ಪ್ರತಿ ಸಫಾಯಿ ಕರ್ಮಚಾರಿಗಳಿಗೆ ಐಡಿ ಕಾರ್ಡ್ ನೀಡುವುದು ಕಡ್ಡಾಯ, ಸೇಫ್ಟಿ ಇನ್ಸುಮೆಂಟ್ಸ್ ಇರುವುದನ್ನು ಖಚಿತಪಡಿಸಿಕೊಳ್ಳಿ ಎಂದರು.

ಖಾಸಗಿಯಾಗಿ ಮುಖತಃ ಭೇಟಿ ಮಾಡಿ ಸಫಾಯಿ ಕರ್ಮಚಾರಿಗಳ ಮನ ಒಲಿಸಿ ಸ್ವಚ್ಚತೆ ಕಾರ್ಯಕ್ಕೆ ಅವಶ್ಯಕ ಸಾಮಾಗ್ರಿಗಳನ್ನು ಬಳಸಲು ಅರಿವು ಮೂಡಿಸಬೇಕು. ಮಾಧ್ಯಮಗಳಲ್ಲಿ ಈ ಬಗ್ಗೆ ಹಲವು ಬಾರಿ ಸುದ್ದಿಗಳು ಬರುವುದನ್ನು ಗಮನಸಿದ್ದೇನೆ. ಇದು ಮುಂದುವರೆದಲ್ಲಿ ಸಂಬಂಧಿತರ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು.

ಸಫಾಯಿ ಕರ್ಮಚಾರಿಗಳ ಆರೋಗ್ಯಕ್ಕೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳು, ಕಲ್ಯಾಣ ಕಾರ್ಯಕ್ರಮಗಳ ಕುರಿತು ಮಂದಿನ ಬಾರಿ ಪ್ರತಿ ಸ್ಥಳೀಯ ಸಂಸ್ಥೆ ವರದಿ ಸಲ್ಲಿಸಬೇಕು ಸಾಕ್ಷಿಗಳೊಂದಿಗೆ ಹಾಗೂ ಅಗತ್ಯ ದಾಖಲೆಗಳಿರಬೇಕು. ಆರೋಗ್ಯ ವಿಮೆ ಬಗ್ಗೆ ಸಹ ಗಮನಹರಿಸಬೇಕು. ಬಾಕಿ ಇರುವ ಕಡೆ ಬೇಗ ಮಾಡಿಸಿ. ಸಂಬಳ ಬರುವ ಖಾತೆ ಬ್ಯಾಂಕ್ ಗಳಲ್ಲಿ ಚಾಲ್ತಿಯಲ್ಲಿರುವ ಆರೋಗ್ಯ ಮತ್ತು ಜೀವ ವಿಮೆಗಳನ್ನು ಮಾಡಿಸಲು ಕ್ರಮ ಕೈಗೊಳ್ಳಬೇಕು. ಮನೆರಹಿತರಿಗೆ ಹಾಗೂ ನಿವೇಶನ ರಹಿತರಿಗೆ ತ್ವರಿತಗತಿಯಲ್ಲಿ ಸಮಸ್ಯೆ ಬಗೆಹರಿಸಿ ಅವರಿಗೆ ಸೂರು ಒದಗಿಸುವುದು ನಮ್ಮ ಕರ್ತವ್ಯ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಡಿಸಿಪಿ ಕನಿಕಾ ಸಿಕ್ರಿವಾಲ, ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕ ಅಲ್ಲಾಬಕ್ಷ, ಡಿಯುಡಿಸಿ ಯೋಜನಾ ನಿರ್ದೇಶಕ ಮುನವರ್ ದೌಲ್ ಸೇರಿದಂತೆ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಗಿಡಗಳನ್ನು ಬೆಳೆಸುವ ಮೂಲಕ ನಾವೇಲ್ಲರೂ ಪರಿಸರಕ್ಕೆ ಕೊಡುಗೆ ನೀಡಬೇಕು:ನ್ಯಾ.ಪ್ರಕಾಶ ಬನಸೋಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಮಾ.28: ನೀರು ಉಳಿಸಲು ನಾವೆಲ್ಲರೂ ಕೈಜೋಡಿಸಬೇಕು, ಜೊತೆಗೆ ಪರಿಸರ ಹಾನಿಯನ್ನು ಆದಷ್ಟು ತಡೆಯಬೇಕು, ಗಿಡಗಳನ್ನು ಬೆಳೆಸುವ ಮೂಲಕ ಪರಿಸರಕ್ಕೆ ಕೊಡುಗೆ ನೀಡಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ಹೇಳಿದರು.

ಅವರು ಇಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,



ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ಪಂಚಾಯತ ಬೀದರ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಬೀದರನ ಬೇನಕನಳ್ಳಿಯಲ್ಲಿ ಹಮ್ಮಿಕೊಂಡಿದ್ದ ವಿಶ್ವ ಜಲ ದಿನ ಹಾಗೂ NALSA Legal Services to Victims of Acid Attack Scheme 2016 ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅಂತರ್ಜಲ ಹೆಚ್ಚಿಸುವ ಕ್ರಮಗಳಾದ ಇಂಗುಗುಂಡಿ, ಮಳೆನೀರಿನ ಕೊಯ್ಲು ಮುಂತಾದ ಅಗತ್ಯ ಕ್ರಮಗಳನ್ನು ಮನೆಗಳಿಂದಲೇ ಆರಂಭಿಸಬೇಕೆಂದರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸವಲತ್ತುಗಳ ಬಗ್ಗೆ ಹಾಗೂ Victims of AcidAttack Scheme 2016 ಬಗ್ಗೆ ಮಾತನಾಡಿದರು.

ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿಗಳಾದ ನಾಗೇಂದ್ರ ಬಿರಾದರ ಅವರು ಮಾತನಾಡಿ, ಸಮಾಜದಲ್ಲಿ ಜನರು ನೀರಿನ ಬಳಕೆ ಮತ್ತು ಮಹತ್ವ ಕುರಿತು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಬೀದರ ವಕೀಲರಾದ ಕೃಷ್ಣಪ್ಪಾ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಸಂಜೀವಕುಮಾರ ಶಳಕೆ, ಉಮೇಶ ಜಾಬಾ,, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿಯಾದ ಆಕಾಶ ಸಜ್ಜನಶೆಟ್ಟಿ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಿಬ್ಬಂದಿ ವರ್ಗದವರು, ಬೇನಕನಳ್ಳಿ ಗ್ರಾಮಸ್ಥರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಏ.2 ರಂದು ಶ್ರೀ ದೇವರ ದಾಸಿಮಯ್ಯ ಜಯಂತ್ಯುತ್ಸವ

ಮಲ್ಲಮ್ಮ ನುಡಿ ವಾರ್ತೆ ಬೀದರ : ಮಾ.28: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್.2 ರಂದು ಬೆಳಿಗ್ಗೆ 11.30 ಗಂಟೆಗೆ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರ ಬೀದರದಲ್ಲಿ ಶ್ರೀ ದೇವರ ದಾಸಿಮಯ್ಯ ಜಯಂತ್ಯುತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ.ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ.ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕರಾದ ಶರಣು ಸಲಗರ, ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕರಾದ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ್ ಹಾಗೂ ವಿಧಾನ ಪರಿಷತ್ ಶಾಸಕರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬೀದರ ನಗರಸಬೇ ಅಧ್ಯಕ್ಷರಾದ ಮಹ್ಮದ ಗೌಸ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಬೀದರ ಲಿಂಗಾಯ ಮಹಾಮಠದ ಪೂಜ್ಯ ಶ್ರೀ ಮ.ನಿ.ಪ್ರ.ಪ್ರಭುದೇವ ಮಹಾಸ್ವಾಮೀಜಿ ಅವರು ಅತಿಥಿ ಉಪನ್ಯಾಸವನ್ನು ನೀಡಲಿದ್ದಾರೆ.

# ಉತ್ಪನ್ನ ಮಾರಾಟ ಮಾಡುವುದು ಕಲೆ : ರೂಪಾ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮಾ.28: ಇಂದು ಮಾರುಕಟ್ಟೆಯಲ್ಲಿ ಉತ್ಪನ್ನವೊಂದನ್ನು ಗ್ರಾಹಕರಿಗೆ ತಲುಪಿಸುವುದು ಸವಾಲಿನ ಕೆಲಸ. ಅದಕ್ಕೂ ಕ್ರಿಯಾಶೀಲತೆ, ಜನರನ್ನು ತಲುಪುವ ಕಲೆ ಗೊತ್ತಿರಬೇಕು ಎಂದು ಮರಿಯಮ್ಮನಹಳ್ಳಿಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಪ್ರಾಧ್ಯಾಪಕಿ, ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ರೂಪಾ.ಪಿ.ಸಿ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ವಾಣಿಜ್ಯ ವಿಭಾಗ ಹಾಗೂ ಆಂತರಿಕ ಗುಣಮಟ್ಟ ಭರವಸೆ ಕೋಶದ ಸಹಯೋಗದಲ್ಲಿ ಶುಕ್ರವಾರ ನಡೆದ ರತನ್



ಟಾಟಾ ವ್ಯಕ್ತಿತ್ವ ಮತ್ತು ಸಾಧನೆ ಕುರಿತ ಕಾರ್ಯಕ್ರಮ ಉದ್ಘಾಟನೆ ಹಾಗೂ ವಿವಿಧ ಸ್ಪರ್ಧೆಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸರಕೊಂದು ಗ್ರಾಹಕನಿಗೆ ತಲುಪಬೇಕೆಂದರೆ ಹಲವು ಮಾರ್ಗಗಳಿವೆ. ಕರಪತ್ರ, ಜಾಹೀರಾತು, ಸೆಲೆಬ್ರಿಟಿಗಳ ಶಿಫಾರಸು, ಬಾಯಿ ಮಾತಿನ ಪ್ರಚಾರದ ಮೂಲಕ ಉತ್ಪನ್ನ ಗ್ರಾಹಕನಿಗೆ ತಲುಪುತ್ತದೆ. ಉತ್ಪನ್ನದ ಉತ್ತರೋತ್ತರ ಬೆಳವಣಿಗೆಗೆ ಗುಣಮಟ್ಟ, ಜನಸಾಮಾನ್ಯರಿಗೆ ಹೊರೆಯಾಗದ, ಉದ್ಯಮಿಗೆ ನಷ್ಟವಾಗದಂತೆ ದರ ನಿಗದಿಯೂ ಮುಖ್ಯ ಎಂದು ರೂಪಾ ಅಭಿಪ್ರಾಯಪಟ್ಟರು.

ಕಾಲೇಜಿನ ಆಂತರಿಕ ಗುಣಮಟ್ಟ ಭರವಸಾ ಕೋಶದ ಸಂಚಾಲಕರು ಮತ್ತು ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ಟಿ.ವಿ.ವಾರುಣಿ ಪ್ರಾಸ್ತಾವಿಕ ಮಾತನಾಡಿ, ರತನ್ ಟಾಟಾ ಬಡತನದಲ್ಲಿ ಹುಟ್ಟಿ ಬೆಳೆದು ಅನೇಕ ಸವಾಲುಗಳನ್ನು ಎದುರಿಸಿ ಉದ್ಯಮಿಯಾಗಿ ಸಾಧನೆ ಮಾಡಿದವರು. ಯಶಸ್ಸಿನ ಜೊತೆಗೆ ಸಮಾಜಮುಖಿ ಕಾರ್ಯಗಳನ್ನು ರೂಪಿಸಿ ಜನಸಾಮಾನ್ಯರಿಗೆ ಅನುಕೂಲ ಕಲ್ಪಿಸಿದ ವ್ಯಕ್ತಿತ್ವ ಅವರದ್ದು ಎಂದು ಸ್ಮರಿಸಿದರು.

ಟಾಟಾ ಅವರು ಬದುಕು ಯುವಪೀಳಿಗೆಗೆ, ಯುವ ಉದ್ಯಮಿಗಳಿಗೆ ಪ್ರೇರಣೆ. ಉದ್ಯಮದ ಕೌಶಲ್ಯಗಳನ್ನು ಕಲಿಸುವ ಯತ್ನವಾಗಿ ಉತ್ಪನ್ನ ಮಾರಾಟ ಮಾಡುವ ಬಗೆ, ನಾನು ಉದ್ಯಮಿಯಾದರೆ ಎನ್ನುವ ವಿಷಯಗಳ ಮೇಲೆ ಭಾಷಣ ಸೇರಿದಂತೆ ವಿವಿಧ ಸ್ಪರ್ಧೆ ಆಯೋಜಿಸಲಾಗಿಧ ಎಂದರು.

ಶಿವಮೂರ್ತಿಸ್ವಾಮಿ ಗುತ್ತೂರು ನಿರೂಪಿಸಿದರು. ಡಾ.ವೀರಣ್ಣ ಸಜ್ಜನರ ಸ್ವಾಗತಿಸಿದರು. ಪವಿತ್ರಾ ಹೊಸೂರು ಪ್ರಾರ್ಥಿಸಿದರು. ಬಿ.ಡಿ.ಮಾಳೆಕೊಪ್ಪ ವಂದಿಸಿದರು. ಜ್ಞಾನೇಶ್ವರ ಪತ್ತಾರ, ಡಾ.ಗಿರಿಜಾ ತುರಮುರಿ, ಬಾಲಾಜಿ ವಿವಿಧ ಸ್ಪರ್ಧೆಗಳ ತೀರ್ಪುಗಾರರಾಗಿ ಆಗಮಿಸಿದ್ದರು. ಕಲ್ಲೇಶ್ ಅಬ್ಬಿಗೇರಿ, ಫಾಹೀಮಾ ಬೇಗಂ, ಅಶೋಕ ಯಕ್ಲಾಸಪುರ, ಶಿವರಾಮ, ಬಸವರಾಜ ಕರುಗಲ್ ಮತ್ತು ವಿದ್ಯಾರ್ಥಿಗಳು ಇದ್ದರು.

# ಅನಾಮಧೇಯ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

ಬಳ್ಳಾರಿ,ಮಾ.28:ತಾಲ್ಲೂಕಿನ ಚೆಳ್ಳಗುರ್ಕಿ ಗ್ರಾಮದ ರೂಪನಗುಡಿ ರಸ್ತೆಯ ರ್‍ರಿತಾತ ಜೀವ ಸಮಾಧಿ ಮಠದ ತೇರುಗಡ್ಡೆ ನಿಲ್ಲುವ ಶೆಡ್ ನ ಬಳಿ ಸುಮಾರು 65–70 ವರ್ಷದ ಅನಾಮಧೇಯ ವ್ಯಕ್ತಿಯು ವಯೋಸಹಜ ಖಾಯಿಲೆಯಿಂದ ಮಾ.27 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರ ಬಗ್ಗೆ ಮಾಹಿತಿ ಇರುವುದಿಲ್ಲ. ಮೃತನ ವಾರಸುದಾರರ ಪತೆ–ಗೆ ಸಹಕರಿಸಬೇಕು ಎಂದು ಪಿ.ಡಿ.ಹಳ್ಳಿ ಪೋಲಿಸ್ ಠಾಣೆಯ ಠಾಣಾಧಿಕಾರಿಗಳು ಮನವಿ ಮಾಡಿದ್ದಾರೆ.

ಚಹರೆ: ಅಂದಾಜು 5.5 ಅಡಿ ಎತ್ತರ, ತೆಳ್ಳನೆ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ಬಿಳಿ ಕೂದಲು, ಮತ್ತು ಕೆಂಪು ಬಣ್ಣದ ಕರಿ ಗೀರಿಯುಳ್ಳ ಚೆಕ್ಸ್ ಶರ್ಟ್, ಬಿಳಿ ಬಣ್ಣದ ಪ್ಯಾಂಟ್, ಗ್ರೇ ಕಲರ್ ಒಳಉಡುಪು ಧರಿಸಿರುತ್ತಾನೆ.

ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100,102 ಬಳ್ಳಾರಿ ಎಸ್.ಪಿ ಅವರ ಕಚೇರಿ ದೂ.08392–258400,ಸಿರುಗುಪ್ಪ ಡಿ.ಎಸ್.ಪಿ ದೂ.08392–276000, ಪಿ.ಡಿ.ಹಳ್ಳಿ ವೃತ್ತ ಸಿ.ಪಿ.ಐಮೊ.08392–276461, ಪಿ.ಡಿ.ಹಳ್ಳಿ ಪೊಲೀಸ್ ಠಾಣೆ ದೂ.08392–265010 ಮತ್ತು ಪಿಎಸ್ಐ ಮೊ.9480803052 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಬೇವೂರ ಗ್ರಾಮಕ್ಕೆ ಜಿಲ್ಲಾಧಿಕಾರಿ ಜಾನಕಿ ಭೇಟಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಕ್ರಮ ವಹಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.28– ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರು ಶುಕ್ರವಾರ ತಾಲೂಕಿನ ಬೇವೂರ ಗ್ರಾಮಕ್ಕೆ ಭೇಟಿ ನೀಡಿ ಕುಡಿಯುವ ನೀರಿನ ಸ್ಥಿತಿಗತಿ ಕುರಿತಾಗಿ ಗ್ರಾಪಂ ಅಧಿಕಾರಿ ಜೊತೆ ಚರ್ಚಿಸಿ, ಕೈಗೊಂಡ ಮುಂಜಾಗ್ರತಾ ಕ್ರಮಗಳ ಪರಿಶೀಲನೆ ಮಾಡಿದರು.

ಬೇಸಿಗೆಯ ಅವಧಿಯಲ್ಲಿ ಗ್ರಾಪಂ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗೆ ಯಾವುದೇ ತೆ–ೂಂದರೆಯಾಗದಂತೆ ಕ್ರಮ ವಹಿಸಬೇಕು. ತೊಂದರೆ ಉಂಟಾದಲ್ಲಿ ತುರ್ತು ಕ್ರಮಗಳನ್ನು ಕೈಗೊಳ್ಳುವಂತೆ ಗ್ರಾಪಂ ಅಭಿವೃದ್ಧಿ ಅಧಿಕಾರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಕುಡಿಯುವ ನೀರಿನ ತೊಂದರೆಯಾಗದಂತೆ



ತೆಗೆದುಕೊಂಡಿರುವ ಮುಂಜಾಗ್ರತಾ ಕ್ರಮಗಳ ಕುರಿತು ಮಾಹಿತಿ ನೀಡಿದ ಗ್ರಾಪಂ ಪಿಡಿಓ ಭೀಮಪ್ಪ ಇಟಗಿ, ಸಧ್ಯಕ್ಕೆ ಕುಡಿಯುವ ನೀರಿಗೆ ತೊಂದರೆಯಿಲ್ಲ. ಜೂನ್ ತಿಂಗಳಲ್ಲಿ ಕೊರತೆಯಾದಲ್ಲಿ ಖಾಸಗಿ ಬೋರವೆಲ್ ಗಳ ನೀರನ್ನು ಬಳಸಿಕೊಳ್ಳಲು ಕೊಳವೆ ಬಾವಿ ಮಾಲಿಕರೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು.

ಬೇವೂರ ಗ್ರಾಮದಲ್ಲಿ 3 ಹಾಗೂ ಚೌಡಾಪುರ ಗ್ರಾಮದಲ್ಲಿ 1 ಖಾಸಗಿ ಬೋರವೆಲ್ ಗಳ ಜೊತೆ ಒಪ್ಪಂದ ಮಾಡಿಕೊಂಡು ಎರಡೂ ಗ್ರಾಮಗಳಿಗೆ ನೀರು ಪೂರೈಸಲು ಯೋಜನೆ ಮಾಡಿಕೊಳ್ಳಲಾಗಿದೆ ಎಂದು ಪಿಡಿಓ ಮಾಹಿತಿ ಒದಗಿಸಿದರು.

ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಸರಿಯಾಗಿ ನಡೆದಿದೆ. ಜೆಜೆಎಂ ಯೋಜನೆ ಕಾಮಗಾರಿ ಅರ್ಧಕ್ಕೆ ನಿಂತಿದೆ ಎಂದು ಹೇಳುತ್ತಿದ್ದಂತೆ, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಗೆ ಈ ಕುರಿತು ಪತ್ರ ಬರೆಯುವಂತೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಾಪಂ ಕಾರ್ಯನಿರ್ವಾಹಕ ಅಧಿಕಾರಿಗೆ ಸೂಚಿಸಿದರು.

ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಸ ಸಂಪಗಾವಿ, ತಲಾಟಿ ಸಾಬಣ್ಣ ಹಳ್ಳಿ ಇದ್ದರು.

## ಕುಮಾರೇಶ್ವರ ಆಸ್ಪತ್ರೆಗೆ ವೆಂಟಿಲೇಟರ್ ದೇಣಿಗೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.28– ನಗರದ ಬಿ.ವಿ.ವಿ.ಸಂಘದ ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಗೆ ಪಂಜಾಬ ನ್ಯಾಷನಲ್ ಬ್ಯಾಂಕ್‌ನ ಬಾಗಲಕೋಟೆ ಶಾಖೆಯಿಂದ ಸುಮಾರು 12 ಲಕ್ಷ ರೂಪಾಯಿಗಳ ಮೌಲ್ಯದ ಮ್ಯಾಕ್ವೆಟ್ ಸರ್ವೋ ಇನ್‌ಫಂಟ್ ಕೃತಕ ಉಸಿರಾಟ ಯಂತ್ರವನ್ನು(ವೆಂಟಿಲೇಟರ್) ದೇಣಿಗೆಯಾಗಿ ನೀಡಲಾಯಿತು.

ಜರ್ಮನ್ ದೇಶದ ಅತ್ಯಾಧುನಿಕ ತಂತ್ರಜ್ಞಾನದಿಂದ ತಯಾರಿಸಲ್ಪಟ್ಟ ಈ ಕೃತಕ ಉಸಿರಾಟ ಯಂತ್ರ ರೋಗಿಗಳಲ್ಲಿ ಕಾಣಿಸಿಕೊಳ್ಳುವ ಉಸಿರಾಟದ ತೊಂದರೆಯಲ್ಲಿ ಆಕ್ಸಿಜನ್ ಪೂರೈಕೆಗಾಗಿ ಬಳಕೆಯಾಗುತ್ತದೆ. ಪಂಜಾಬ ನ್ಯಾಷನಲ್ ಬ್ಯಾಂಕ್‌ನ ಹುಬ್ಬಳ್ಳಿ ವಿಭಾಗೀಯ ಸರ್ಕಲ್ ಮುಖ್ಯಸ್ಥ ರಾಕೇಶ ಕುಮಾರ, ಬಾಗಲಕೋಟೆ ಶಾಖಾ ಮ್ಯಾನೇಜರ್ ಗೂಳಪ್ಪ ಯೋಗಪ್ಪನವರ ಹಾಗೂ ವಿದ್ಯಾಗಿರಿ ಶಾಖಾ ಮ್ಯಾನೇಜರ್ ಗಂಗಾಧರ ಪಿ ಅವರು ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಗೆ ಭೇಟಿ ನೀಡಿ ಮ್ಯಾಕ್ವೆಟ್ ಸರ್ವೋ ಇನ್‌ಫಂಟ್ ಕೃತಕ ಉಸಿರಾಟ ಯಂತ್ರವನ್ನು ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಅವರಿಗೆ ನೀಡಿದರು.

ದೇಣಿಗೆ ಸ್ವೀಕರಿಸಿ ಮಾತನಾಡಿದ ಡಾ.ಚರಂತಿಮಠ, ಪಂಜಾಬ್ ನ್ಯಾಷನಲ್ ಬ್ಯಾಂಕ್ ಈ ಹಿಂದೆ–ಯೂ ಕುಮಾರೇಶ್ವರ ಆಸ್ಪತ್ರೆಗೆ ಅತ್ಯಾಧುನಿಕ ಸೌಲಭ್ಯವುಳ್ಳ ಅಂಬ್ಯುಲೆನ್ಸ್ ನೀಡಿದ್ದು, ಈಗ ಮತ್ತೊಮ್ಮೆ ವೆಂಟಿಲೇಟರ್ ಯಂತ್ರ ನೀಡುವುದರ ಮೂಲಕ ತನ್ನ ಸಾಮಾಜಿಕ ಕಾಳಜಿಯನ್ನು ಪುನ: ವ್ಯಕ್ತಪಡಿಸಿದೆ. ಬ್ಯಾಂಕಿನ ಈ ನೆರವಿನ ಹಸ್ತ ಆರೋಗ್ಯಕರ ಸಮಾಜದ ನಿರ್ಮಾಣದಲ್ಲಿ ಅತ್ಯಂತ ಮಹತ್ವದ್ದಾಗಿದೆ. ಬ್ಯಾಂಕ್‌ನವರು ನೀಡಿದ ಈ ಉಪಕರಣ ಸಾರ್ವಜನಿಕರ ಆರೋಗ್ಯ ಸೇವೆಗೆ ಸದುಪಯೋಗವಾಗಲಿದೆ ಎಂದು ಹೇಳಿದರು.

ಈ ಸಂದರ್ಭ ಬಿ.ವಿ.ವಿ.ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ), ಕಟ್ಟಡ ಸಮಿತಿ ಕಾರ್ಯಾಧ್ಯಕ್ಷ ಮಹೇಶ ಕಕರಡ್ಡಿ, ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಬಿ.ವಿ.ವಿ ಸಂಘದ ಕೇಂದ್ರ ಕಚೇರಿಯ ಹಣಕಾಸು ಅಧಿಕಾರಿ ಅನಂತ ಓಂಕಾರ ಮತ್ತು ಮೆಡಿಕಲ್ ಕಾಲೇಜಿನ ಹಾಗೂ ಬ್ಯಾಂಕ್ ಸಿಬ್ಬಂದಿ ಉಪಸ್ಥಿತರಿದ್ದರು.

## ಕಾರ್ಮಿಕರು, ನೌಕರರ ಹಿತಾಸಕ್ತಿ ಮುಖ್ಯ: ರೂಪೇಶ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.28– ಕಾರ್ಮಿಕರು ಹಾಗೂ ನೌಕರರ ಹಿತಾಶಕ್ತಿ ಮುಖ್ಯವಾಗಿದ್ದು, ಈ ನಿಟ್ಟಿನಲ್ಲಿ ಬಿ.ವಿ.ವಿ. ಸಂಘದ ಕಾರ್ಯ ಶ್ಲಾಘನೀಯವಾಗಿದೆ ಎಂದು ಭವಿಷ್ಯನಿಧಿ ಪ್ರಾದೇಶಿಕ ಕಾರ್ಯಾಲಯದ ಜಾರಿ ನಿರ್ದೇಶನ ಅಧಿಕಾರಿ ರೂಪೇಶ ಹೇಳಿದರು.

ನಗರದ ಬಿ.ವಿ.ವಿ.ಸಂಘದ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಗುರುವಾರ ಭಾರತ ಸರಕಾರದ ಭವಿಷ್ಯ ನಿಧಿ ರಾಯಚೂರ ವಿಭಾಗ, ಬಿ.ವಿ.ವಿ.ಸಂಘದ ನೌಕರರ ಕ್ಷೇಮಾಭಿವೃದ್ಧಿ ಕಾರ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡ ಭವಿಷ್ಯನಿಧಿ ಹಿತಾಸಕ್ತಿ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಗಳಾಗಿ ಮಾತನಾಡಿದರು.


ಕಾರ್ಮಿಕರು, ನೌಕರರ ಅಹವಾಲುಗಳನ್ನು ಮಾನವೀಯ ಅನುಕಂಪದೊಂದಿಗೆ ಸ್ಪಂದಿಸಿ ಅವರಿಗೆ ಸಹಾಯವಾಗುವ ನಿಟ್ಟಿನಲ್ಲಿ ಅವರ ಹಿತಾಸಕ್ತಿಯನ್ನು ಕಾಪಾಡಬೇಕು, ಆ ನಿಟ್ಟಿನಲ್ಲಿ ಬಿ.ವಿ.ವಿ.ಸಂಘದ ಹಾಗೂ ಸಂಘದ ನೌಕರರ ಕ್ಷೇಮಾಭಿವೃದ್ಧಿ ಕಾರ್ಯ ಅತ್ಯಂತ ಶ್ಲಾಘನೀಯವಾಗಿದೆ ಎಂದು ರೂಪೇಶ ಹೇಳಿದರು.

ಪ್ರಭಂಧಕ ಶ್ರೀನಿವಾಸ ಹಾಗೂ ಶಾಮರಾವ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಚಾರ್ಯ ಡಾ. ಜಗನ್ನಾಥ ಚವ್ಹಾಣ ಮಾತನಾಡಿ, ಮನೆ ಬಾಗಿಲಿಗೆ ಸರಕಾರ ಎನ್ನುವಂತೆ, ಪ್ರತಿ ತಿಂಗಳು ನಡೆಯುವ ಈ ಕಾರ್ಯಕ್ರಮದ ಸದುಪಯೋಗವನ್ನು ಜನಸಾಮಾನ್ಯರು ಪಡೆದುಕೊಳ್ಳಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಿ.ವಿ.ವಿ.ಸಂಘದ ನೌಕರರ ಕ್ಷೇಮಾಭಿವೃದ್ಧಿ ಅಧಿಕಾರಿ ಎಚ್.ಎನ್.ಯಾದವಾಡ, ಭವಿಷ್ಯ ನಿಧಿಯ ಹಿತಾಸಕ್ತಿ ಕಾರ್ಯಕ್ರಮದ ಉದ್ದೇಶ ಹಾಗೂ ಸಾಮಾಜಿಕ ಸುರಕ್ಷಾ ಯೋಜನೆಗಳನ್ನು ವಿವರಿಸಿದರು. ಐಕ್ಯೂಎಸಿ ಸಂಯೋಜಕರಾದ ನಾವದಗಿ,ಡಾ.ನಂಜುಂಡಸ್ವಾಮಿ, ಜಾಜಿಮಠ, ಐ.ಕೆ.ಮಠದ ಇದ್ದರು.

ಕಾರ್ಯಕ್ರಮದಲ್ಲಿ ಬಾಗಲಕೋಟೆ ಜಿಲ್ಲೆಯ ಶಾಲಾ–ಕಾಲೇಜು, ಕಾರ್ಖಾನೆ, ಉದ್ದಿಮೆ ಮುಂತಾದ ಘಟಕಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೂರಾರು ಕಾರ್ಮಿಕರು ಹಾಗೂ ನೌಕರರ ಅನೇಕ ಸಮಸ್ಯೆಗಳಿಗೆ ಪರಿಹಾರ ಸೂಚಿಸಲಾಯಿತು.

## ಮಾ.೩೦ ಕಣವಿ ವೀರಭದ್ರೇಶ್ವರ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,28–ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಆವರಣದಲ್ಲಿರುವ ಕಣವಿ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಮಾ.29 ರಿಂದ 31 ವರೆಗೆ ಜರುಗಲಿದ್ದು, 29 ರಂದು ಸಂಜೆ ಶ್ರೀ ವೀರಭದ್ರೇಶ್ವರ ಪಲ್ಲಕ್ಕಿ ಸೇವೆ ನಡೆಯಲಿದೆ.

ಮಾ.30 ರಂದು ರವಿವಾರ ಬೆಳಿಗ್ಗೆ ಚರಂತಿಮಠದ ಪೂಜ್ಯರಾದ ಪ್ರಭುಸ್ವಾಮಿಗಳ ಸನ್ನಿಧಿಯಲ್ಲಿ ಶ್ರೀ ವೀರಭದ್ರೇಶ್ವರ ದೇವರಿಗೆ ಮಹಾರುದ್ರಾಭಿಷೇಕ, ಪುಷ್ಪಾಲಂಕಾರ,ಮಹಾಮಂಗಳಾರುತಿ ನಡೆಯಲಿದೆ. ಸಂಜೆ 5 ಗಂಟೆಗೆ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಮಹಾರಥೋತ್ಸವ ಜರುಗಲಿದೆ.

ಮಾ.31ರಂದು ಸೋಮವಾರ ಸಾಯಂಕಾಲ 5 ಗಂಟೆಗೆ ಅಗ್ಗಿ ಉತ್ಸವ ನಡೆಯಲಿದೆ. ಜಾತ್ರೆಯ ನಿಮಿತ್ಯ ವೀರಭದ್ರೇಶ್ವರ ಸಾಂಸ್ಕೃತಿಕ ಭವನದಲ್ಲಿ ಬಿ.ವಿ.ವಿ.ಸಂಘದ ಗ್ರಾಮೀಣ ಅಭಿವೃದ್ಧಿ ಪ್ರತಿಷ್ಠಾನ.ಬಿವಿವಿಎಸ್ ಕೋಟಕ್ ಮಹಿಂದ್ರಾ ಬ್ಯಾಂಕ, ಆರ್ಸೆಟ್ ಸಂಸ್ಥೆ, ಜನ ಶಿಕ್ಷಣ ಸಂಸ್ಥೆ, ಕರ್ನಾಟಕ ಕೃಷಿಕರ ಸಂಪನ್ಮೂಲ ಕೇಂದ್ರ ಮತ್ತು ಕಣವಿ ವೀರಭದ್ರೇಶ್ವರ ಟ್ರಸ್ಟ್ ಸಹಯೋಗದಲ್ಲಿ ದಿನಾಂಕ 29 ರಿಂದ 31 ವರೆಗೆ 3 ದಿನಗಳ ಕಾಲ 2025 ಕುಶಲ ಗ್ರಾಮ ಪ್ರದರ್ಶನ ಹಮ್ಮಿಕೊಳ್ಳಲಾಗಿದ್ದು,ಸ್ವಸಹಾಯ ಸಂಘಗಳ ಕುಶಲಕರ್ಮಿಗಳ ಮತ್ತು ಗ್ರಾಮ ಕೈಗಾರಿಕಾ ಉತ್ಪನ್ನಗಳ ಮಾರಾಟ ಮೇಳ ಜರುಗಲಿದೆ. ಭಕ್ತಾಧಿಗಳು ಶ್ರೀ ಕಣವಿ ವೀರಭದ್ರೇಶ್ವರ ರಥೋತ್ಸವ ಮತ್ತು ಅಗ್ಗಿ ಉತ್ಸವಗಳಲ್ಲಿ ಭಾಗವಹಿಸಿ ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸುವಂತೆ ಕಣವಿ ವೀರಭದ್ರೇಶ್ವರ ಟ್ರಸ್ಟ್ ಮತ್ತು ಜಾತ್ರಾಕಮೀಟಿಯ ಸದಸ್ಯರುಗಳು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ: ಅರ್ಜಿ ಆಹ್ವಾನ

ಬಳ್ಳಾರಿ,ಮಾ.28:ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ವಿವಿಧ ವೃತ್ತಿಪರ ತರಬೇತಿ ಕೋರ್ಸ್‌ಗಳಲ್ಲಿ ತರಬೇತಿ ಜೊತೆ–ಗೆ ಶಿಷ್ಯವೇತನ ನೀಡಲು ಉದ್ದೇಶಿಸಲಾಗಿದ್ದು, ಪರಿಶಿಷ್ಟ ಪಂಗಡದ ಇಂಜಿನಿಯರಿಂಗ್ ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದೆ.ಐಐಎಸ್‌ಸಿ, ಐಐಟಿ ಮತ್ತು ಎನ್‌ಐಟಿ ಸಂಸ್ಥೆಗಳ ಮೂಲಕ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಮತ್ತು ಮಷಿನ್ ಲರ್ನಿಂಗ್ ತರಬೇತಿ ನೀಡಲಾಗುತ್ತಿದ್ದು, ಒಟ್ಟು 200 ಇಂಜಿನೀಯರಿಂಗ್ ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದ್ದು,ರೂ.15000/–ಗಳ ಶಿಷ್ಯವೇತನ ಮತ್ತು ತರಬೇತಿ ನೀಡಲಾಗುತ್ತದೆ.

ಅರ್ಹ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅರ್ಜಿಗಳನ್ನು ನಗರದ ವಾಲ್ಮೀಕಿ ಭವನದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ಬಳ್ಳಾರಿ, ಸಂಡೂರು, ಸಿರುಗುಪ್ಪ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗಳಿಂದ ಉಚಿತವಾಗಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಇದೇ ಕಚೇರಿಗೆ ಸಲ್ಲಿಸಬೇಕು.

## ಮಂಗಳೂರು ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜನಪದ ಉತ್ಸವ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಮಾ.28: ಜಿಲ್ಲೆಯ ಕುಕನೂರ ತಾಲೂಕಿನ ಮಂಗಳೂರು ಗ್ರಾಮದ ಸುವರ್ಣಗಿರಿ ಡಾ. ಚೆನ್ನಮಲ್ಲ ಸ್ವಾಮೀಜಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇಂದು ಜನಪದ ಉತ್ಸವ ಕಾರ್ಯಕ್ರಮದ ಉದ್ಘಾಟನೆಯನ್ನು ಗ್ರಾಮದ ಹೆಸರಾಂತ ಜನಪದ ಕಲಾವಿದೆ ನೇತ್ರಾವತಿ ಎಂ ಎಚ್ ಹಾಗೂ ಶಂಕ್ರಮ್ಮ ತಂಡದವರಿಂದ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು. ನಂತರ ನೇತ್ರಾವತಿ ಮಾತನಾಡಿ ಪ್ರಾಚೀನ ಕಾಲದಿಂದಲೂ ಜನಪದ ಕಲೆಗೆ ತನ್ನದೇ ಆದಂತ ವಿಶೇಷ ಸ್ಥಾನಮಾನವಿದೆ ಜನಪದ ಹಾಡುಗಳು, ಸೋಬಾನ ಪದಗಳು, ಅಂತಿ ಪದಗಳು ನಶಿಸಿ ಹೋಗುತ್ತಿವೆ ಎಂದು ಹೇಳಿದರು. ಈಗಿನ ಕಾಲದಲ್ಲಿ ಮೊಬೈಲ್ ಗಿಳಿಗೆ ಯುವಕ ಯುವತಿಯರು ಮಾರುಹೋಗಿ ಜನಪದ ಹಾಡುಗಳು ಮರೆತು ಸಿನಿಮಾ ಹಾಡುಗಳನ್ನು ಕೇಳುವ ಹವ್ಯಾಸ ಮಾಡಿಕೊಂಡಿದ್ದಾರೆ ಎಂದು ಹೇಳಿದರು.

ಶರಣಪ್ಪ ಅಡವಿ ಮುಖ್ಯಸ್ಥರು ಅರ್ಥಶಾಸ್ತ್ರ ವಿಭಾಗ ಪ್ರಾಸ್ತಾವಿಕ ಮಾತುಗಳನ್ನಾಡಿದರು.

ಡಾ. ಪ್ರಭುರಾಜ್ ಎನ್ ಪ್ರಾಂಶುಪಾಲರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ರವೀಂದ್ರನಾಥ ಕೊಟ್ರಪ್ಪತೋಟದ ಪತ್ರಕರ್ತರು, ಉಪನ್ಯಾಸಕರಾದ ಹೆಚ್. ಜಿ. ಬೊಮ್ಮನಾಳ, ಸಲೀಂ ಪಾಷಾ ಹವಾಲ್ದಾರ್ ಹಾಗೂ ಕಾಲೇಜಿನ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು, ಕಾಲೇಜಿನ ಹಳೆಯ ವಿದ್ಯಾರ್ಥಿ ಸಂಘದವರು ಹಾಜರಿದ್ದರು. ಗುರುಲಿಂಗಮ್ಮ ಎಂ ಮುಖ್ಯಸ್ಥರು ಇತಿಹಾಸ ವಿಭಾಗ ಕಾರ್ಯಕ್ರಮದ ಸ್ವಾಗತ ನಿರ್ವಹಣೆ ಮಾಡಿದರು.

ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳಿಂದ ಜಾನಪದ ನೃತ್ಯ, ಕೋಲಾಟ ನೃತ್ಯ, ಗ್ರಾಮೀಣ ಕ್ರೀಡೆಗಳು ಕಾಲೇಜಿನ ಪ್ರಾಂಗಣದಲ್ಲಿ ಅಚ್ಚುಕಟ್ಟಾಗಿ ಜರುಗಿದವು.

## ಹಿರಿಯ ಪತ್ರಕರ್ತ ಶರಣು ಹಿರೇಮಠಗೆ ಭಾವಪೂರ್ಣ ಶ್ರದ್ಧಾಂಜಲಿ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರ. ಮಾ. 28: ಇತ್ತೀಚೆಗೆ ನಿಧನ ಹೊಂದಿದ ಸಿಂಧನೂರು ತಾಲುಕಿನ

ಹಿರಿಯ ಪತ್ರಕರ್ತ ಶರಣು ಪಾ ಹಿರೇಮಠ್ ರವರಿಗೆ ಲಿಂಗಸುಗೂರು ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ

ಸಂಘದ ಅಧ್ಯಕ್ಷ ಗುರುರಾಜ ಗೌಡೂರು ಅವರ ನೇತೃತ್ವದಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ಸಂಧರ್ಭದಲ್ಲಿ ಹಿರಿಯ ಪತ್ರಕರ್ತರಾದ ಘನಮಠದಯ್ಯ ಮಾತಾನಾಡಿ ಶರಣು ಪಾ ಹಿರೆಮಠ,ರವರು ಸುಧೀರ್ಘಕಾಲ ಪತ್ರಿಕಾ ರಂಗದಲ್ಲಿ ತಮ್ಮದೇ ಆದಂತಹ ಲೇಖನಗಳ ಮೂಲಕ ಸದಾ ಕಾಲ ಸಮಾಜವನ್ನು ಎಚ್ಚರಿಸುವ ಕೆಲಸ ಮಾಡುತ್ತಿದ್ದರು.

ಸುದ್ದಿ ಮಾಡುವ ನಿಖರತೆ ಬಗ್ಗೆ ಮಾಹಿತಿ ನೀಡುವ ಮೂಲಕ ಅವರ ವ್ಯಕ್ತಿತ್ವ ಶರಣು ಪಾ ಹಿರೆಮಠ ಅವರು ನೇರ ನಿಷ್ಟುರವಾದ ವರದಿ ಮಾಡುವ ಮೂಲಕ ಸಾಮಾಜವನ್ನು ತಿದ್ದುವ ಕಾರ್ಯದಲ್ಲಿ ಹೆಚ್ಚು ಆಸಕ್ತಿ ವಹಿಸುತ್ತಿದ್ದರು ಅವರ ಹರಿತವಾದ ಲೇಖನಗಳ ಕುರಿತು ಸಂಸತ್ತನಲ್ಲಿ ಚರ್ಚೆ ಆದ ಉಧಾಹರಣೆಗಳಿವೆ.

ಅಂಥಹ ಪತ್ರಕರ್ತನ ಅಗಲಿಕೆಯಿಂದ ಜಿಲ್ಲೆಯ ಪತ್ರಿಕಾರಂಗಕ್ಕೆ ತುಂಬಲಾರದ ನಷ್ಟವಾಗಿದೆ ಅವರ ಅಗಲಿಕೆಯನ್ನು ಸಹಿಸಿಕೊಳ್ಳುವ ಶಕ್ತಿ ಅವರ ಕುಟುಂಬಕ್ಕೆ ಆ ಭಗವಂತ ಕರುಣಿಸಲಿ ಎಂದು ಹೇಳಿದರು.

ಪತ್ರಕರ್ತರ ಸಂಘದ ಅಧ್ಯಕ್ಷರಾದ ಗುರುರಾಜ್ ಗೌಡೂರು, ಶಿವರಾಜ್ ಕೆಂಭಾವಿ, ಶರಣಯ್ಯ ಒಡೆಯರ್, ಕಾರ್ಯದರ್ಶಿ ಅಮರಯ್ಯ ಘಂಟಿ ಶರಣು ಹಿರೇಮಠ ಅವರು ಪತ್ರಿಕಾ ರಂಗದಲ್ಲಿ ಅವರು ಸಲ್ಲಿಸಿದ ಸೇವೆ ಅವರ ಪ್ರಮಾಣಿಕತೆ ಕಿರಿಯ ಪತ್ರಕರ್ತರಿಗೆ ಅವರು ನೀಡಿದ ಮಾರ್ಗದರ್ಶನ ಕುರಿತು ಮಾತನಾಡಿ ಅವರ ಅಗಲಿಕೆಯನ್ನು ಸಹಿಸಿಕೊಳ್ಳುವ ಶಕ್ತಿ ಅವರ ಅಗಲಿಕೆಯ ನೋವನ್ನು ಅರಗಿಸಿಕೊಳ್ಳುವ ಶಕ್ತಿ ಆ ದೇವರು ಅವರ ಕುಟುಂಬಕ್ಕೆ ದಯಪಾಲಿಸಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪತ್ರಕರ್ತರಾದ ನಾಗರಾಜ ಮಸ್ಕಿ, ನಾಗರಾಜ್ ಗೊರೆಬಾಳ, ಹನಮಂತ ಕನ್ನಾಳ ಮಹಮದ ಮುಸ್ತಫ ಮೈಸನಮಿಯಾ ಅಂಗಡಿ, ಸಾದತ ಅಲಿ,ಶ್ರೀಕಾಂತ,ಯಲ್ಲಪ್ಪ ವಂದಲಿ, ರವಿ ಹೊಸಮನಿ, ಚಂದ್ರುಹಿರೇಮಠ,ಸೇರಿದಂತೆ ಇತರರು ಇದ್ದರು.

## ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ನೀಡಿ: ಜಿಲ್ಲಾಧಿಕಾರಿ ನಿತೀಶ್ ಕೆ.



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.28: ಕಹಿ ಘಟನೆ ಮರೆತು ಕುಟುಂಬ ನಿರ್ವಹಣೆ ಮಾಡುವ ಮೂಲಕ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ಹೇಳಿದರು.

ಮಾ.28ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪರಿಶಿಷ್ಟ ಪಂಗಡದ ದೌರ್ಜನ್ಯ ಪ್ರಕರಣದಲ್ಲಿ ಮೃತರಾದ ನಾಲ್ಕು ಕುಟುಂಬಗಳ ಅವಲಂಬಿತರಿಗೆ ಸರ್ಕಾರಿ ನೌಕರಿ ಆದೇಶ ಪತ್ರವನ್ನು ನೀಡಿ ಮಾತನಾಡಿದರು.

ಹೊಸ ಜೀವನ ಕಟ್ಟಿಕೊಳ್ಳಲು ಸರ್ಕಾರ ನಿಮಗೆ ಸರ್ಕಾರಿ ಉದ್ಯೋಗ ನೀಡಿದ್ದು, ಕುಟುಂಬ ಜವಾಬ್ದಾರಿಯನ್ನು ತೆಗೆದು–ಕೊಂಡ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು ಎಂದರು.

ಉದ್ಯೋಗದ ಆದೇಶ ಪ್ರತಿಯನ್ನು ಸಿಂಧನೂರು ತಾಲೂಕಿನ ಲಕ್ಷ್ಮಿ ಕ್ಯಾಂಪ್ ನಿವಾಸಿಯಾದ ಶ್ರೀಮತಿ ಹುಲಿಗೆಮ್ಮ ಗಂಡ ದಿ.ಬಸವರಾಜ ನಾಯಕ ಇವರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕರು ಹುದ್ದೆ, ಮಸ್ಕಿ ತಾಲೂಕಿನ ತಲೆಖಾನ ಗ್ರಾಮದ ನಿವಾಸಿಯಾದ ಶ್ರೀಮತಿ ಹುಲಿಗೆಮ್ಮ ಗಂಡ ದಿ.ಬಸವರಾಜ ಇವರಿಗೆ ಸಹಾಯಕರು ಪಶುಪಾಲನಾ ಇಲಾಖೆ ಇಲಾಖೆಯ ಡಿ–ದರ್ಜೆ ನೌಕರಿ ಹುದ್ದೆ, ದೇವದುರ್ಗ ತಾಲೂಕಿನ ಗಲಗ ಗ್ರಾಮದ ನಿವಾಸಿಯಾದ ಶ್ರೀಮತಿ ಅನ್ನಮ್ಮ ಗಂಡ ದಿ.ಸೋಮಶೇಖರ ಇವರಿಗೆ ಸಹಾಯಕರು ಪಶುಪಾಲನಾ ಇಲಾಖೆಯಲ್ಲಿ ಡಿ–ದರ್ಜೆ ನೌಕರಿ ಹುದ್ದೆ, ಸಿಂಧನೂರು ತಾಲೂಕಿನ ಬೆಳಗುರ್ಕಿ ಗ್ರಾಮದ ನಿವಾಸಿಯಾದ ಶ್ರೀಮತಿ ವೆಂಕಮ್ಮ ಗಂಡ ದಿ.ಬಸವರಾಜ ಸಹಾಯಕರು ಪಶುಪಾಲನಾ ಇಲಾಖೆಯಲ್ಲಿ ಡಿ–ದರ್ಜೆ ನೌಕರಿ ಹುದ್ದೆಗೆ ಜಿಲ್ಲಾಧಿಕಾರಿಗಳು ಆದೇಶ ಪತ್ರವನ್ನು ನೀಡಿದರು.

ಇದೇ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಚಿದಾನಂದ, ಜಿಲ್ಲಾ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯರಾದ ರಘುವೀರ ನಾಯಕ ಸೇರಿದಂತೆ ಇತರರು ಇದ್ದರು.

## ಕೃಷ್ಣ ನದಿ ಪಾತ್ರದ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಸಿಇಓ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.28: ಕೃಷ್ಣ ನದಿ ಪಾತ್ರದ ಗ್ರಾಮಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಅಗತ್ಯ ಮುಂಜಾಗ್ರತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಮಾ.28ರ ಶುಕ್ರವಾರ ದಂದು ತಾಲೂಕಿನ ಗುರ್ಜಾಪೂರು ತಡೆ ಆಣೆಕಟ್‌ಗೆ ಭೇಟಿ ನೀಡಿ ನೀರಿನ ಶೇಖರಣೆ ಕುರಿತು ವೀಕ್ಷಣೆ ಮಾಡಿದರು.

ಮೀರಾಪುರ ಮತ್ತಿತರೆ 14 ಗ್ರಾಮಗಳಿಗೆ ನೀರನ್ನು ಪೂರೈಸುವ ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿ ಎಲ್ಲಾ ಗ್ರಾಮಗಳಿಗೂ ಸಮರ್ಪಕ ನೀರು ಪೂರೈಕೆ ಆಗುತ್ತಿರುವ ಬಗ್ಗೆ ಮಾಹಿತಿ ಪಡೆದು ಹಾಗೂ ನದಿ ಪಾತ್ರದ ಗ್ರಾಮಗಳ ನೀರು ಸರಬರಾಜು ಯೋಜನೆಗಳಿಗೆ ನೀರು ಸರಬರಾಜು ಅಗುತ್ತಿರುವ ಬಗ್ಗೆ ಪರಿಶೀಲನೆ ಮಾಡಿದರು.

ಬೇಸಿಗೆಯಲ್ಲಿ ಗ್ರಾಮಸ್ಥರಿಗೆ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಯಿತು.

ಸಗಮಕುಂಟಾ ಸೇರಿದಂತೆ 6 ಗ್ರಾಮಗಳು ಎಮ್‌ವಿ.ಎಸ್, ದೇವಸೂಗೂರು ಗ್ರಾ.ಪಂ., ಅತ್ಕೂರು, ಕುರ್ವಿಹಾಳ, ಡೋಂಗರಾಂಪುರ ಹಾಗೂ ಕಾಡ್ಲೂರು ಗ್ರಾಮಗಳಿಗೆ ಬೇಸಿಗೆಯಲ್ಲಿ ಕುಡಿಯುವ ನೀರಿನ ತೊಂದರೆ ಉಂಟಾಗದಂತೆ ಎಲ್ಲಾ ಬಗೆಯ ಅಗತ್ಯ ಕ್ರಮ ಕೈಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಕಾಡ್ಲೂರು ಗ್ರಾಮದಲ್ಲಿ ನೀರು ಸಂಗ್ರಹಣಾ ವಿನ್ಯಾಸಗಳ ಸ್ವಚ್ಛತೆ ಪರಿಶೀಲಿಸಿದರು. ಗ್ರಾಮದ ನೈರ್ಮಲ್ಯೀಕರಣ ಹಾಗೂ ಸ್ವಚ್ಛತೆ ಕುರಿತು ಕ್ರಮ ಜರುಗಿಸಲು ಇಓ ಅವರಿಗೆ ನಿರ್ದೇಶನ ನೀಡಲಾಯಿತು.

ಇದೇ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಭು ಚವ್ಹಾಣ, ಶಾಖಾಧಿಕಾರಿಗಳು ವಿರೇಶ ಹಾಗೂ ಗ್ರಾಮ ಪಂಚಾಯತ್ ಸಿಬ್ಬಂದಿ ವರ್ಗದವರು ಇದ್ದರು.

## ಬಳ್ಳಾರಿ: ಐತಿಹಾಸಿಕ ಏಕಶಿಲಾ ಬೆಟ್ಟಕ್ಕೆ ರೋಪ್ ವೇ; ಸ್ಥಳ ಪರಿಶೀಲನೆ



ಬಳ್ಳಾರಿ,ಮಾ.28:ನಗರದ ಹೃದಯ ಭಾಗದಲ್ಲಿರುವ ಏಕಶಿಲಾ ಬೆಟ್ಟಕ್ಕೆ ರೋಪ್ ವೇ ನಿರ್ಮಾಣ ಮಾಡುವ ಸಂಬಂಧ ಕಾರ್ಯ ಸಾಧ್ಯತೆಯ ಕುರಿತು ಸ್ಥಳ ಪರಿಶೀಲನೆ ಮಾಡಲು ಮೇ. ರೈಟ್ಸ್ ಸಂಸ್ಥೆಯ ಪ್ರತಿನಿಧಿಗಳು ಬಳ್ಳಾರಿಯ ಏಕಶಿಲಾ ಬೆಟ್ಟಕ್ಕೆ ಶುಕ್ರವಾರ ಭೇಟಿ ನೀಡಿ ಸ್ಥಳ ಪರಿಶೀಲಿಸಿದರು.

ಸ್ಥಳ ಪರಿಶೀಲನೆ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆಗಮಿಸಿ ಬಳ್ಳಾರಿ ನಗರದ ಏಕಶಿಲಾ ಬೆಟ್ಟಕ್ಕೆ ರೋಪ್ ವೇ ಅಳವಡಿಸುವ ಸಂಬಂಧ ಅಗತ್ಯ ಸಲಹೆ ಹಾಗೂ ನಿರ್ದೇಶನ ನೀಡಿದರು.

ಮುಖ್ಯವಾಗಿ ರೋಪ್ ವೇ ಯ ಪ್ರಾರಂಭಿಕ ಸ್ಥಳ ಹಾಗೂ ಅಂತ್ಯದ ಸ್ಥಳವನ್ನು ಗುರುತಿಸಲು ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆಯ ಅಧಿಕಾರಿಗಳಿಂದ ಇದೇ ಸಂದರ್ಭದಲ್ಲಿ ಮಾಹಿತಿ ಪಡೆದುಕೊಂಡರು. ಬೆಟ್ಟದ ಸುತ್ತಲೂ ಸರ್ಕಾರಿ ನಿವೇಶನ ಅಥವಾ ಸ್ಥಳ ಲಭ್ಯವಿದ್ದಲ್ಲಿ ಗುರುತಿಸುವಂತೆ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಏಕಶಿಲಾ ಬೆಟ್ಟಕ್ಕೆ ರೋಪ್ ವೇ ಅಳವಡಿಸುವ ಸಂಬಂಧ ಸ್ಥಳ ಪರಿಶೀಲನಾ ವರದಿಯನ್ನು ಪ್ರವಾಸೋದ್ಯಮ ಇಲಾಖೆಯ ಕೇಂದ್ರ ಕಚೇರಿಗೆ ಸಲ್ಲಿಸುವಂತೆ ಮೇ.ರೈಟ್ಸ್ ಸಂಸ್ಥೆಯ ಪ್ರತಿನಿಧಿಗಳಿಗೆ ಸೂಚಿಸಿದರು.

ಈ ಬಗ್ಗೆ ನವದೆಹಲಿಯ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ಮಹಾನಿರ್ದೇಶಕರೊಂದಿಗೆ ಚರ್ಚಿಸಿ ಶೀಘ್ರದಲ್ಲಿಯೇ ಗೂಗಲ್ ಮೀಟ್ ಸಭೆ ಆಯೋಜಿಸಲಾಗುವುದು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.

ಸ್ಥಳಪರಿಶೀಲನೆಯ ಸಂದರ್ಭದಲ್ಲಿ ರೈಟ್ಸ್ ಸಂಸ್ಥೆಯ ಪ್ರತಿನಿಧಿ ಸತೀಶ್ ವರ್ಮ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ರವೀಂದ್ರ ಸಿ.ಎ., ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಪ್ರಭುಲಿಂಗ. ಎಸ್ ತಳಕೇರಿ ಹಾಗೂ ಮತ್ತೀತರರು ಹಾಜರಿದ್ದರು.

# ರಾಯಚೂರು ಮಹಾನಗರ ಪಾಲಿಕೆಯ ಮೊದಲ ಬಜೆಟ್ ಸಭೆ
# 219.93 ಕೋಟಿ ರೂ. ಗಾತ್ರದ ಬಜೆಟ್ ಮಂಡನೆ

ಮಲ್ಲಮ ನುಡಿ ವಾರ್ತೆ

ರಾಯಚೂರು ಮಾ.28: ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯ 2025–26ನೇ ಸಾಲಿನ ಆರ್ಥಿಕ ವರ್ಷದಲ್ಲಿ 219.93 ಕೋಟಿ ರೂ. ಗಾತ್ರದ ಬಜೆಟ್‌ನ್ನು ಶುಕ್ರವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಡಿಸಲಾಯಿತು.

ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷೆ ನರಸಮ್ಮ ನರಸಿಂಹಲು ಮಾಡಗಿರಿ ಅವರು 28.58 ಕೋಟಿ ರೂ. ಉಳಿತಾಯ ಬಜೆಟ್ ಮಂಡಿಸಿದರು.

ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಿಗಿರಿ ಅವರು ಬಜೆಟ್ ಮಂಡನೆಗೆ ಅನುಮೋದನೆ ಮೇರೆಗೆ ಉಪಾಧ್ಯಕ್ಷರಾದ ಸಾಜಿದ್ ಸಮೀರ್ ಅವರು ಬಜೆಟ್ ಸಂಕ್ಷಿಪ್ತ ವರದಿ ಸಭೆಯಲ್ಲಿ ಮಂಡಿಸಿದರು.



ಕೇಂದ್ರದ ಮಹಾತ್ಮ ಗಾಂಧಿ ನಗರ ವಿಕಾಸ್ ಯೋಜನೆ ಅನುದಾ ನಡಿ ಮಹಾನಗರ ಪಾಲಿಕೆ 30 ಕೋಟಿ ರೂಪಾಯಿ ನಿರೀಕ್ಷಿಸಲಾಗಿತ್ತು. ಆದರೆ 200 ಕೋಟಿ ರೂ. ಅನುದಾನ ಬಂದಿರುವುದು ನಗರದ ಅಭಿವೃದ್ದಿಗೆ ಬಹುದೊಡ್ಡ ನೆರವಾಗಿದೆ ಎಂದರು.

ಮಹಾನಗರ ಪಾಲಿಕೆಗೆ ಆಸ್ತಿ ತೆರಿಗೆಯ ಬಾಬತ್ತಿನಿಂದ 22.51 ಕೋಟಿ ರೂ. ನಿರೀಕ್ಷಿಸಲಾಗಿದೆ. ನೀರಿನ ಕರ ಬಾಬತ್ತು 4.80 ಕೋಟಿ ರೂ ನಿರೀ–ಕ್ಷೆ ಹೊಂದಲಾಗಿದೆ. 15ನೇ ಹಣಕಾಸು ಯೋಜನೆಯಡಿ 13 ಕೋಟಿ ರೂ ನಿರೀಕ್ಷಿಸಲಾಗಿದೆ. ಒಟ್ಟು ವಿವಿಧ ಮೂಲಗಳಿಂದ 89.83 ಕೋಟಿ ಮಹಾನಗರ ಪಾಲಿಕೆ ಸ್ಥಳೀಯ ವಿವಿಧ ಶುಲ್ಕ ಮತ್ತು ಇತರೆ ಸಂಗ್ರಹ ನಿರೀಕ್ಷೆ ಹೊಂದಿದೆ.

ವಿದ್ಯುತ್ ಬಳಕೆಗಾಗಿ 19 ಕೋಟಿ ರೂ. ವೆಚ್ಚವಾಗಲಿದೆ ಮಳೆ ಸೇರಿದಂತೆ ಇನ್ನಿತರೆ ಸಂದರ್ಭದಲ್ಲಿ ಚರಂಡಿ ದುರಸ್ತಿಗಾಗಿ 1.20 ಕೋಟಿ ರೂ. ಹೊರಗುತ್ತಿಗೆ ವೆಚ್ಚಗಳಲ್ಲಿ 4.6ಕೋಟಿ ರೂ. ವೆಚ್ಚಮಾಡುವ ನಿರೀಕ್ಷೆ ಹೊಂದಲಾಗಿದೆ.

2025–26ನೇ ಸಾಲಿನ ಬಜೆಟ್ ನಲ್ಲಿ ಆರಂಭಿಕ ಶುಲ್ಕ 5719.04 ಕೋಟಿ ರೂ. ಇದ್ದರೆ ರಾಜಸ್ವ ಜಮೆ 8983 .72 ಕೋಟಿ, ಬಂಡವಾಳ ಜಮೆ 4530 ಕೋಟಿ ರೂ, ಅಸಾಮಾನ್ಯ ಜಮೆ 2761 ಕೋಟಿ ಸೇರಿ ಒಟ್ಟು 21993.76 ಕೋಟಿ ರೂ ನಿರೀಕ್ಷಿಸಲಾಗಿದೆ. ಬಜೆಟ್ ವೆಚ್ಚದಲ್ಲಿ ಒಟ್ಟು ರಾಜಸ್ವ ಪಾವತಿಗಳು 9279.04 ಕೋಟಿ, ಬಂಡವಾಳ ಪಾವತಿ 6295 ಕೋಟಿ, ಅಸಾಮಾನ್ಯ ಪಾವತಿ 3561 ಕೋಟಿ ನಿಗದಿಗೊಳಿಸಲಾಗಿದೆ. ಒಟ್ಟು ವೆಚ್ಚದ ಮೊತ್ತ 19135.04 ಕೋಟಿ ಎಂದು ಬಜೆಟ್ ಮಂಡಿಸಲಾಯಿತು. ಆದಾಯ ಮತ್ತು ವೆಚ್ಚದ ನಂತರ 2858.72 ಕೋಟಿ ರೂ. ಉಳಿತಾಯ ಬಜೆಟ್ ತೋರಿಸಲಾಗಿದೆ.

ಉದ್ಯಾನ & ಇಂಧನ: ರಾಯಚೂರು ಮಹಾನಗರ ಪಾಳಿಕೆಯ ವ್ಯಾಪ್ತಿಯ ಉದ್ಯಾನವನ ದುರಸ್ಥಿ ಹಾಗೂ ನಿರ್ವಹಣೆಗಾಗಿ 150 ಲಕ್ಷ ಮೀಸಲಿಡಲಾಗಿದೆ. ಅಲ್ಲದೆ ರಸ್ತೆ ಒಳದಾರಿಗಳು ಹಾಗೂ ಪಾದಚಾರಿ ರಸ್ತೆಗಳು ರಸ್ತೆಬದಿ ತೋಡಗಳು ಕಾಮಗಾರಿಗಾಗಿ 148.75 ಲಕ್ಷ ರೂ. ಹಾಗೂ ಶಕ್ತಿ ಮತ್ತು ಇಂಧನಕ್ಕಾಗಿ 1900 ಲಕ್ಷರೂ. ಗಳನ್ನು ನೀಡಲಾಗಿದೆ. ಬೃಹತ್ ಚರಂಡಿ ತೆರೆದ ಚರಂಡಿ ಸೇತುವೆಗಳ ಮತ್ತು ಕೋಸ್‌ವೇಸ್ ನಿರ್ವಹಣೆಗೆ 120 ಲಕ್ಷ ರೂ., ನೈರ್ಮಲ್ಯ ಘನತ್ಯಾಜ್ಯವಸ್ತು ನಿರ್ವಹಣೆಗಾಗಿ 200 ಲಕ್ಷ ರೂ., ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಅಭಿವೃದ್ಧಿ ಶೇ.24.10 ನಿಧಿಯಲ್ಲಿ ಅಂದಾಜು 1025.79 ಲಕ್ಷ ರೂ. ಮೀಸಲಿಡಲಾಗಿದೆ.

ಕೇಂದ್ರದ ಮಹಾತ್ಮ ಗಾಂಧಿ ನಗರ ವಿಕಾಸ್ ಯೋಜನೆ ಅನುದಾನಡಿ ಮಹಾನಗರ ಪಾಲಿಕೆ 30 ಕೋಟಿ ರೂ. ಗಳ ನಿರೀಕ್ಷಿಸಲಾಗಿತ್ತು. ಆದರೆ, 200 ಕೋಟಿ ಅನುದಾನ ಬಂದಿರುವುದು ಅಭಿವೃದ್ಧಿಗೆ ಬಹುದೊಡ್ಡ ನೆರವಾಗಿದೆ ಎಂದರು. 15ನೇ ಹಣಕಾಸು ಯೋಜನೆಅಡಿ ಹದಿಮೂರು ಲಕ್ಷ ನಿರೀಕ್ಷಿಸಲಾಗಿದೆ. ಒಟ್ಟು ವಿವಿಧ ಮೂಲಗಳಿಂದ 89.83 ಲಕ್ಷ ಮಹಾನಗರ ಪಾಲಿಕೆ ಸ್ಥಳೀಯ ವಿವಿಧ ಶುಲ್ಕ ಮತ್ತು ಇತರ ಸಂಗ್ರಹ ನಿರೀಕ್ಷೆ ಹೊಂದಿದೆ. ವಿದ್ಯುತ್ ಬಳಕೆಗಾಗಿ 19 ಲಕ್ಷ ವೆಚ್ಚವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಉಪಾಧ್ಯಕ್ಷರಾದ ಸಜೀದ್ ಸಮೀರ್, ಆಯುಕ್ತರಾದ ಜುಬೀನ್ ಮೊಹೊಪಾತ್ರ, ಉಪ ಆಯುಕ್ತರಾದ ಗುರುಸಿದ್ದಯ್ಯಸ್ವಾಮಿ ಸೇರಿದಂತೆ ವಿವಿಧ ಅಧಿಕಾರಿಗಳು ಹಾಗೂ ಪಾಲಿಕೆಯ ಸದಸ್ಯರು ಇದ್ದರು.

# ಯುಗಾದಿ ಮಹೋತ್ಸವ



ಮಲ್ಲಮ ನುಡಿ ವಾರ್ತೆ

ಯುಗಾದಿ ಮಹೋತ್ಸವಗಳ ಸಂದರ್ಭದಲ್ಲಿ, ಎರಡನೇ ದಿನವಾದ ಇಂದು (28.03.2025) ಶ್ರೀ ಸ್ವಾಮಿ ಅಮ್ಮನವರಿಗೆ ವಿಶೇಷ ಪೂಜೆಗಳನ್ನು ನೆರವೇರಿಸಲಾಯಿತು. ನಂತರ ಬೆಳಿಗ್ಗೆ 8.00 ರಿಂದ ಸ್ವಾಮಿಯವರ ಯಾಗಶಾಲೆಯಲ್ಲಿ ಚಂಡೀಶ್ವರ ಪೂಜೆ, ಮಂಟಪ ಪೂಜೆ, ಲೋಕ ಕಲ್ಯಾಣಕ್ಕಾಗಿ ಜಪಾನುಷ್ಠಾನಗಳು ಮತ್ತು ರುದ್ರಹೋಮ ನಡೆದವು.

ಅದೇ ರೀತಿ, ಅಮ್ಮನವರ ದೇವಸ್ಥಾನದಲ್ಲಿ ಚಂಡೀ ಹೋಮವನ್ನು ನಡೆಸಲಾಯಿತು.

ಉತ್ಸವಗಳ ಭಾಗವಾಗಿ ಅಮ್ಮನವರಿಗೆ ವಿಶೇಷ ಕುಂಕುಮಾರ್ಚನೆಗಳು, ನವಾವರಣಾರ್ಚನೆಗಳು ಮಾಡಲಾಯಿತು. ಏತನ್ಮಧ್ಯೆ, ಸಂಜೆ 5.30 ಕ್ಕೆ ಸಂಜೆ ಪೂಜೆ ಮತ್ತು ಜಪಾನುಷ್ಠಾನಗಳನ್ನು ನಡೆಸಲಾಗುತ್ತದೆ.

ಕೈಲಾಸವಾಹನ ಸೇವೆ

ಈ ಉತ್ಸವಗಳ ಭಾಗವಾಗಿ, ಇಂದು ಸಂಜೆ ಸ್ವಾಮಿ ಅಮ್ಮನವರಿಗೆ ಕೈಲಾಸವಾಹನ ಸೇವೆಯನ್ನು ನೆರವೇರಿಸಲಾಗುವುದು. ಈ ಸೇವೆಯಲ್ಲಿ, ಕೈಲಾಸವಾಹನ ಸೇವೆಯ ಮೇಲೆ ಶ್ರೀ ಸ್ವಾಮಿ ಅಮ್ಮನವರನ್ನು ಆಸೀನರಾಗಿ ಮಾಡಿ ವಿಶೇಷ ಪೂಜೆಗಳನ್ನು ಮಾಡಲಾಗುತ್ತದೆ. ನಂತರ, ಗ್ರಾಮೋತ್ಸವ ನಡೆಯಲಿದೆ.

ಕೈಲಾಸ ಪರ್ವತವನ್ನು ಏರಿದ ಶ್ರೀ ಸ್ವಾಮಿ ಅಮ್ಮನವರನ್ನು ದರ್ಶಿಸುವುದರಿಂದ ಇಷ್ಟಾರ್ಥಗಳು ಈಡೇರುತ್ತವೆ ಮತ್ತು ಸಕಲ ಶುಭಗಳು ಹೊಂದಬಹುದೆಂದು ಹೇಳಲಾಗುತ್ತದೆ.

ಮಹಾದುರ್ಗೆಯ ಅಲಂಕಾರ

ಉತ್ಸವಗಳ ಅಂಗವಾಗಿ, ಶ್ರೀ ಅಮ್ಮನವರ ಉತ್ಸವಮೂರ್ತಿಗೆ ಇಂದು (28.03.2025) ಮಹಾದುರ್ಗಾ ಅಲಂಕಾರದಿಂದ ಗ್ರಾಮೋತ್ಸವ ನಡೆಯಲಿದೆ. ಈ ಅಷ್ಟಭುಜಾಕೃತಿಯ ದೇವಿಯು ಶಂಖ, ಚಕ್ರ, ಗದೆ, ಪದ್ಮ , ತ್ರಿಶೂಲ, ಖಡ್ಗ ಇತ್ಯಾದಿಗಳನ್ನು ಧರಿಸಿ ದರ್ಶನ ನೀಡುತ್ತಾಳೆ.

ಅದೇ ರೀತಿ, ಈ ಗ್ರಾಮ ಉತ್ಸವದಲ್ಲಿ ನಾದಸ್ವರ, ಕೋಲಾಟ, ಚೆಕ್ಕಭಜನೆ, ರಾಜಭಟರ ವೇಷಗಳು, ಕೇರಳ ಚಂಡಿ ಮೇಳ, ಕೊಂಬು ಕೊಯ್ಯ ನೃತ್ಯ, ಮುಂಬೈ ಡೋಲ್ ಥೇಷ್, ವಿಳಕ್ಕು, ಸ್ವಾಗತ ನೃತ್ಯ, ವೀರಭದ್ರ ಡೊಳ್ಳು ಕುಣಿತ, ಜಾಂಜ್ ಪಥಕ್ (ಕರ್ನಾಟಕ ಡೊಳ್ಳು), ಕಾಳಿಕಾ ನೃತ್ಯ, ಜಾನಪದ ಹಗಲು ವೇಷ, ನಂದಿಕೋಲುಸೇವೆ, ತಪ್ಪಿಳಿಚಿಂದು, ಬೀರಪ್ಪಡೊಳ್ಳು, ನಂದಿಕೋಲುಸೇವೆ, ಢಮರುಕ, ಚಿಡತೆಗಳು, ಶಂಖ, ಕೊಳಲು, ಡೊಳ್ಳುವಿನ್ಯಾಸ, ಗಿರಿಜನ ಚೆಂಚುನೃತ್ಯ ಮತ್ತು ಇತರ ಕಳಾರೂಪಗಳನ್ನು ಗ್ರಾಮೋತ್ಸವದಲ್ಲಿ ಏರ್ಪಾಟು ಮಾಡಿದ್ದಾರೆ.

# ಶಿಕ್ಷಣ ನೀಡುವುದರ ಮೂಲಕ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕೈಜೋಡಿಸಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.28 : ಸಮಾಜದಲ್ಲಿ ಶಿಕ್ಷಣ ಅತ್ಯಂತ ಪ್ರಾಮುಖ್ಯತೆ ಹೊಂದಿದ್ದು, ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದರ ಮೂಲಕ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲಾರು ಕೈಜೋಡಿಸಬೇಕು ಎಂದು ಸಿ.ಆರ್.ಪಿ ಶ್ರೀರಾಮಸ್ವಾಮಿ ಹೇಳಿದರು.



ಮಾ.28ರ ಶುಕ್ರವಾರ ಜಿಲ್ಲೆಯ ಮಸ್ಕಿ ಪಟ್ಟಣದ ಗಾಂಧಿನಗರದಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಉಪಯೋಜನೆಯಡಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕತೆ ನಿರ್ಮೂಲನೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈವೇಳೆ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ ಅವರು ಮಾತನಾಡಿ, 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣ ನಿಷೇಧಿಸಲಾಗಿದೆ. 14 ವರ್ಷ ಮೇಲ್ಪಟ್ಟು 18 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಅಪಾಯಕಾರಿ ವೃತ್ತಿ ಮತ್ತು ಪ್ರಕ್ರಿಯೆಗಳಲ್ಲಿ ನಿಷೇಧಿಸಲಾಗಿದೆ. ಒಂದು ವೇಳೆ ಕೆಲಸಕ್ಕೆ ನೇಮಿಸಿಕೊಂಡಲ್ಲಿ ತಪ್ಪಿತಸ್ಥ ಮಾಲೀಕರ ವಿರುದ್ಧ ಸಂಬಂಧ ಪಟ್ಟ ಪೊಲೀಸ್ ಠಾಣೆಯಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ–1986 ಹಾಗೂ ತಿದ್ದುಪಡಿ ಕಾಯ್ದೆ–2016 ರಡಿ ಪ್ರಕರಣ ದಾಖಲಿಸಲಾಗುವುದು ಎಂದು ಹೇಳಿದರು. ದುಡಿಯುವ ಮಕ್ಕಳು ಎಲ್ಲಿಯಾದರೂ ಕಂಡು ಬಂದಲ್ಲಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ ಸಂಖ್ಯೆ 1098/112 ಗೆ ಉಚಿತವಾಗಿ ಕರೆ ಮಾಡಿ ಮಾಹಿತಿ ನೀಡುವುದರ ಮೂಲಕ ಸಮಾಜದಲ್ಲಿರುವ ಬಾಲಕಾರ್ಮಿಕ ಪದ್ಧತಿ ಎಂಬ ಪಿಡುಗನ್ನು ಹೋಗಲಾಡಿಸಲು ಎಲ್ಲಾರು ಸಹಕಾರ ನೀಡಬೇಕೆಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಸ್ಕಿ ಕಾರ್ಮಿಕ ನಿರೀಕ್ಷಕರಾದ ಶಾಂತಮೂರ್ತಿ, ಶಿಶು ಅಭಿವೃದ್ಧಿ ಯೋಜನೆಯ ಮೇಲ್ವಿಚಾರಕರಾದ ಶಿವಲೀಲಾ, ಸಿ.ಆರ್.ಪಿಗಳಾದ ಭೀಮಾಶಂಕರ, ಕಾರ್ಮಿಕ ಇಲಾಖೆಯ ಸಿಬ್ಬಂದಿಗಳಾದ ಮೌನೇಶ್, ನರಸಿಂಹ, ಅಕೌಂ–ಟೆಂಟ್ ಹುಸೇನ್ ನಾಯ್ಕು ಸೇರಿದಂತೆ ಇತರರು ಇದ್ದರು.

## ಮಹಿಳೆಯರಿಗೆ ಸ್ವಂತ ಆದಾಯಗಳಿಸಲು ತರಬೇತಿ ಸಹಕಾರಿ; ಶಶಿಕಾಂತ್ ಶಿವಪೂರೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.28 : ಮಹಿಳೆಯರು ವಾಹನ ಚಾಲನಾ ತರಬೇತಿ ಪಡೆಯುವ ಮೂಲಕ ಜೀಪು, ಕಾರು, ಆಟೋ ಓಡಿಸಿಕೊಂಡು ಸ್ವಂತವಾಗಿ ಆದಾಯಗಳಿಸಲು ಸಹಕಾರಿಯಾಗಿದೆ ಎಂದು ರಾಯಚೂರು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪೂರೆ ಅವರು ಹೇಳಿದರು.



ಮಾ.28ರ ಶುಕ್ರವಾರ ದಂದು ನಗರದ ಜಿಲ್ಲಾ ಪಂಚಾಯತ್ ಕಚೇರಿಯ ಆವರಣದಲ್ಲಿ ಜಿಲ್ಲಾ ಪಂಚಾಯತ್, ಜಿಲ್ಲಾ ಕೈಗಾರಿಕಾ ತರಬೇತಿ ಕೇಂದ್ರ ಮತ್ತು ವಾಣಿಜ್ಯ ಇಲಾಖೆ, ಸಂಜೀವಿನಿ–ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಹಿಳೆಯರಿಗೆ ಉಚಿತ ವಾಹನ ಚಾಲನಾ ತರಬೇತಿಗೆ ಹಸಿರು ನಿಶಾನೆ ತೋರಿ ಚಾಲನೆ ನೀಡಿದರು.

ಉಚಿತ ಡ್ರೈವಿಂಗ್ ತರಬೇತಿ ನೀಡುವ ಯೋಜನೆ ಮಹಿಳೆಯರಿಗೆ ಉದ್ಯೋಗ ಕೌಶಲ್ಯದೊಂದಿಗೆ ಉದ್ಯಮಶೀಲತೆಗೆ ಒತ್ತು ನೀಡುವುದಕ್ಕಾಗಿ ಉಚಿತ ಡ್ರೈವಿಂಗ್ ತರಬೇತಿ ಯೋಜನೆ ಪ್ರಾರಂಭಿಸಲಾಗಿದೆ. ತರಬೇತಿ ಬಳಿಕ ವಾಹನಗಳನ್ನು ಪಡೆದು ಸ್ವಉದ್ಯೋಗ ಆರಂಭಿಸಬೇಕು. ಮಹಿಳಾ ಚಾಲಕರ ಸಂಖ್ಯೆಯನ್ನು ಹೆಚ್ಚಿಸುವುದು, ಅವರ ಬದುಕಿಗೊಂದು ದಾರಿ ಮಾಡಿಕೊಡುವುದು ಆಗಿದೆ. ಇತ್ತೀಚೆಗೆ ಹಲವು ಕಂಪನಿಗಳಿಂದ ಚಾಲಕರ ಬೇಡಿಕೆಯೂ ಹೆಚ್ಚಾಗುತ್ತಿದೆ. ಇದರಿಂದ ಮಹಿಳೆಯರು ಉದ್ಯಮಶೀಲತಾ ಮನೋಭಾವವನ್ನು ಬೆಳೆಸಿಕೊಳ್ಳುವುದರೊಂದಿಗೆ ತಮ್ಮ ಜೀವನದಲ್ಲಿ ಅವಕಾಶವನ್ನು ಹೊಂದಲು ಅನುಕೂಲವಾಗಿದೆ ಎಂದರು.

ಗ್ರಾಮೀಣ ಪ್ರದೇಶದಲ್ಲಿರುವ ಮಹಿಳೆಯರನ್ನು ಸ್ವ–ಉದ್ಯೋಗಿಗಳನ್ನಾಗಿ ಸ್ವಾವಲಂಬಿಗಳಾಗಿ ಮಾಡುವ ಉದ್ದೇಶದಿಂದ ನಾನಾ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಬಾರಿ ಚಾಲನಾ ಕ್ಷೇತ್ರದಲ್ಲಿ ಮಹಿಳೆಯರಿಗೆ ಇರುವ ಅವಕಾಶಗಳನ್ನು ಗಮನದಲ್ಲಿಟ್ಟುಕೊಂಡು ಮಹಿಳೆಯರಿಗೆ ಕಾರು ಚಾಲನಾ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಮಹಿಳೆಯರು ಸಮರ್ಪಕವಾಗಿ ತರಬೇತಿ ಪಡೆದು ಆರ್ಥಿಕವಾಗಿ ಬೆಳೆಯಬೇಕು ಎಂದು ತಿಳಿಸಿದರು.

ತರಬೇತಿ ಮುಗಿದ ನಂತರ ಅವರಿಗೆ ಉದ್ಯೋಗವನ್ನೂ ನೀಡುತ್ತೇವೆ. ಇದರೊಂದಿಗೆ ವಾರ್ಷಿಕ ಆದಾಯದ ಆಧಾರದ ಮೇಲೆ ಬ್ಯಾಂಕ್‌ಗಳ ಮೂಲಕ ಸಣ್ಣ ಸಾಲ ಸೌಲಭ್ಯಗಳನ್ನು ಪಡೆಯಬಹುದು. ಮೋಟಾರ್ಸ್, ಡ್ರೈವಿಂಗ್ ಸ್ಕೂಲ್‌ನಿಂದ ದಾಖಲಾದ ಮತ್ತು ತರಬೇತಿ ಪಡೆದ ಮಹಿಳೆಯರ ಪ್ರಕಾರ ಡ್ರೈವಿಂಗ್ ತರಗತಿಗಳನ್ನು ವಿವಿಧ ಸ್ಥಳಗಳಲ್ಲಿ ನಡೆಸಲಾಗುತ್ತದೆ. ಮಹಿಳೆಯರಿಗೆ ಚಾಲನಾ ಪರವಾನಗಿ ಪಡೆಯಲು ಸಂಸ್ಥೆಯು ಸಹಾಯ ಮಾಡುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕೈಗಾರಿಕಾ ತರಬೇತಿ ಕೇಂದ್ರ ಮತ್ತು ವಾಣಿಜ್ಯ ಇಲಾಖೆಯ ನಿರ್ದೇಶಕ ಬಸವರಾಜ, ಎನ್.ಆರ್.ಎಲ್.ಎಮ್ ಜಿಲ್ಲಾ ವ್ಯವಸ್ಥಾಪಕರಾದ ವಿಜಯ ಕುಮಾರ್, ರಿಜ್ವಾನ್ ಮೋಟಾರ್ ಡ್ರೈವಿಂಗ್ ಸ್ಕೂಲ್ ತರಬೇತಿದಾರ ಅನ್ವರ್ ಪಾಷಾ ಸೇರಿದಂತೆ ಮಹಿಳೆ ಅಭ್ಯರ್ಥಿಗಳು ಇದ್ದರು.

# ರಾಜ್ಯ ಸರ್ಕಾರಿ ನೌಕರರ ಸಂಘ ದಿಂದ
## ರಂಜಾನ್ ಹಬ್ಬದ ಪ್ರಯುಕ್ತ ಸೌಹಾರ್ದತಾ ಕೂಟ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.28 : ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಘಟಕ ರಾಯಚೂರು ವತಿಯಿಂದ ರಂಜಾನ್ ಹಬ್ಬದ ಪ್ರಯುಕ್ತ ಮಾರ್ಚ 26ರಂದು ಇಫ್ತಿಯಾರ್ ಕೂಟ ನಡೆಯಿತು.

ಮುಸ್ಲಿಂ ಬಾಂಧವರು ಮತ್ತು ಎಲ್ಲಾ ಸಮುದಾಯದವರು ಹಾಗೂ ಎಲ್ಲಾ ಇಲಾಖೆಯ ನೌಕರ ಬಾಂಧವರು ಈ ಕೂಟದಲ್ಲಿ ಸೌಹಾರ್ದಯುತವಾಗಿ ಭಾಗವಹಿಸಿದ್ದರು. ಸ್ನೇಹ, ಪ್ರೀತಿ, ಸಮಾಗಮದಿಂದ ತುಂಬಾ ಅದ್ಭುತವಾಗಿ ಎಲ್ಲರೊಂದಿಗೆ ಬೆರೆತು ಪ್ರೀತಿಯ ಇಫ್ತಿಯಾರ್ ಕೂಟದಲ್ಲಿ ಭಾಗವಹಿಸಲು ಅನುವು ಮಾಡಿಕೊಟ್ಟಿದ್ದಕ್ಕಾಗಿ ಸರ್ಕಾರಿ ನೌಕರರ ಸಂಘಕ್ಕೆ ಹೃದಯ ಸ್ಪರ್ಶಿ ಅಭಿನಂದನೆ ಸಲ್ಲಿಸಲಾಯಿತು.

ಇದೇ ತರ ಎಲ್ಲಾ ಧರ್ಮದ ಪ್ರಮುಖ ಹಬ್ಬಗಳ ದಿನದಂದು ಎಲ್ಲರನ್ನು ಸೇರಿಸುವ ಸೌಹಾರ್ದತೆಯನ್ನು ಉಳಿಸಿಕೊಂಡು ಬೆಳೆಸಿಕೊಂಡು ಹೋಗುವ ಸಂಪ್ರದಾಯ ನಿಮ್ಮಿಂದಲೇ ಪ್ರಾರಂಬಿಸಲಿ ಎನ್ನುವ ಆಶಾಭಾವನೆಯು ಈ ಸ್ನೇಹಕೂಟದಿಂದ ಹೊರಹೊಮ್ಮಿತು. ಶಾವಂತಗೇರಿ ಅವರ ನೇತೃತ್ವದಲ್ಲಿ ಮೊದಲ ಬಾರಿಗೆ ಕ್ರೀಡಾಕೂಟವು ಯಶಕಂಡಿತು. ಅದೇ ರೀತಿ ಮಾರ್ಚ 26ರಂದು ನಡೆದ ಇಫ್ತಿಯಾರ ಕೂಟದಲ್ಲಿ ಸುಮಾರು 400 ರಿಂದ 500 ಜನ ಭಾಗವಹಿಸಿದ್ದು ವಿಶೇಷವಾಗಿತ್ತು. ಇಫ್ತಿಯಾರ ಕೂಟದಲ್ಲಿ ರಾಯಚೂರು ಜಿಲ್ಲೆಯ ಸಂಘದ ಅಧ್ಯಕ್ಷರಾದ ಶ್ರೀ ಕೃಷ್ಣ ಶಾವಂತಗೇರಿ, ಕಾರ್ಯಾಧ್ಯಕ್ಷರಾದ ಶ್ರೀ ಶಂಕರ ಗೌಡ ಪಾಟೀಲ್, ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಭಿಮೇಶ್ ನಾಯಕ, ಖಜಾಂಚಿಯಾದ ಶ್ರೀ ಪ್ರಸನ್ನ ಕುಮಾರ, ರಾಜ್ಯ ಪರಿಷತ್ ಸದಸ್ಯರಾದ ಎಸ್ ಎನ್ ಉಲ್ ಹಕ್, ಶಿಕ್ಷಕರ ಸಂಘದ ತಾಲೂಕಾಧ್ಯಕ್ಷರಾದ ಮಲ್ಲೇಶ ನಾಯಕ ಹಾಗೂ ಸಂಘದ ಎಲ್ಲಾ ಪದಾಧಿಕಾರಿಗಳು ಮತ್ತು ಇನ್ನಿತರರು ಭಾಗಿಯಾಗಿದ್ದರು.

# ರಾಯಕೋಡ ಶಾಲೆಯಲ್ಲಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ಸೇಡಂ. ಮಾ. 27. ವಿಧಾನಸಭಾ ಕ್ಷೇತ್ರದ ರಾಯ–ಕೋಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 7ನೇ ತರಗತಿಯ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ಹಮ್ಮಿಕೊಳ್ಳಲಾಯಿತು.



ಈ ಕಾರ್ಯಕ್ರಮದಲ್ಲಿ ಎಸ್.ಡಿ.ಎಮ್.ಸಿ. ಅಧ್ಯಕ್ಷ ಮುಸ್ತಪ್ಪ ಸದಸ್ಯರಾದ ಶಾಂತಕುಮಾರ ಮುಖ್ಯಗುರುಗಳಾದ ಮಲ್ಲಯ್ಯ ಸ್ವಾಮಿ ಅತಿಥಿ ಶಿಕ್ಷಕರಾದ ಬ್ರಹ್ಮಾನಂದರಡ್ಡಿ ಗೋಟುರ ಹನುಮಂತ, ಸಂತೋಷ, ನಾಗಮ್ಮ ಮಂಗಲಗಿ ಮತ್ತು ಎಲ್ಲಾ ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಎಲ್ಲಾ ಅತಿಥಿಗಳು ಮಾತನಾಡುತ್ತ ವಿದ್ಯಾರ್ಥಿಗಳು ಮುಂದಿನ ವಿದ್ಯಾಭ್ಯಾಸವನ್ನು ಅತ್ಯಂತ ಶ್ರದ್ಧೆಯಿಂದ ಮಾಡಿ ಶಾಲೆಗೆ ಮತ್ತು ನಿಮ್ಮ ತಂದೆ ತಾಯಿಗಳಿಗೆ ಕೀರ್ತಿ ತರಲೆಂದು ತಿಳಿಹೇಳಿದರು. ಈ ಕಾರ್ಯಕ್ರಮದಲ್ಲಿ 2025 ನೇ ಸಾಲಿನ ನವೋದಯ ಶಾಲೆಗೆ ಈ ಶಾಲೆಯಿಂದ ಆಯ್ಕೆಯಾದ ಶಿವರಾಮರೆಡ್ಡಿ ತಂದೆ ಬ್ರಹ್ಮಾನಂದರೆಡ್ಡಿ ವಿದ್ಯಾರ್ಥಿ ಗೆ ಎಸ್. ಡಿ. ಎಮ್. ಸಿ. ವತಿಯಿಂದ ಸನ್ಮಾನಿಸಿದರು.

ಈ ಕಾರ್ಯಕ್ರಮವು ಅತ್ಯಂತ ವಿಜ್ರಂಭಣೆಯಿಂದ ಮಾಡಿ ಮುಗಿಸಲಾಯಿತು.

